ಸಂಪುಟ: 04 ಸಂಚಿಕೆ: 283 ಪುಟಗಳು: 08 ಗುರುವಾರ 26 ಡಿಸೆಂಬರ್ 2024
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail. com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

ಮುಂಜಾನೆ ಮಾತು

ಧ್ಯಾನಕ್ಕೆ ವಿಶಿಷ್ಟ ಶಕ್ತಿಯಿದೆ. ದಾನ ಮಾಡಿದಷ್ಟು ವ್ಯಕ್ತಿಯ ಆತ್ಮವು ಶುದ್ಧವಾಗುತ್ತದೆ.

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ಶಕ್ತಿ ಯೋಜನೆಯಿಂದಾಗಿ ಸರ್ಕಾರಕ್ಕೆ ನಷ್ಟ, ಸಾರಿಗೆ ನೌಕರರು ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ಶಕ್ತಿ ಯೋಜನೆಯಿಂದಾಗಿ ರಾಜ್ಯ ಸರ್ಕಾರಕ್ಕೆ ಅಪಾರ ನಷ್ಟವಾಗಿದ್ದು, ಸಾರಿಗೆ ನೌಕರರು ಪ್ರತಿಭಟಿಸುತ್ತಿದ್ದಾರೆ. ನಾಮ ಹಾಕುವುದರಲ್ಲಿ ಕಾಂಗ್ರೇಸ್ಸಿಗರು ಪಳಗಿದವರು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆಕ್ರೋಶ ವ್ಯಕ್ತಪಡಿಸಿದರು. ರಾಜ್ಯ ಸರ್ಕಾರ ಆರ್ಥಿಕ ನಷ್ಟದಲ್ಲಿದೆ. ಶಕ್ತಿ ಯೋಜನೆಯಡಿ ಮಹಿಳೆಯರಿಗೆ ಉಚಿತ ಪ್ರಯಾಣಕ್ಕೆ ಅವಕಾಶ ಮಾಡಿಕೊಟ್ಟು ನಷ್ಟ ಉಂಟಾಗಿದೆ. ಸಾರಿಗೆ ನೌಕರರು ಧರಣಿ ಮಾಡುತ್ತಿದ್ದು ಅವರಿಗೆ 4 ಸಾವಿರ ಕೋಟಿ ರೂ. ನೀಡಬೇಕು. ರೈತರಿಗೆ ಒಂದೂವರೆ ಸಾವಿರ ಕೋಟಿ ಸಬ್ಸಿಡಿ ನಾಮ ಹಾಕಿದ್ದಾರೆ ಎಂದರು. ನಾಮ ಹಾಕುವುದರಲ್ಲಿ ಕಾಂಗ್ರೇಸ್ ನವರು ಪಳಗಿದವರು. ಹಾಗಾಗಿ ಈ ವರ್ಷ ಒಂದೂವರೆ ಲಕ್ಷ ಕೋಟಿ ಸಾಲ ಮಾಡಿದ್ದಾರೆ. ಮುಂದಿನ ವರ್ಷ ಸಿಎಂ ಸಿದ್ದರಾಮಯ್ಯ ಮನಸ್ಸು ಮಾಡಿ 2 ಲಕ್ಷ ಕೋಟಿ ರೂ. ಸಾಲ ಮಾಡಿದರೆ ಜನ್ಮದಲ್ಲಿ ಮುಂದೆ ಬರಲು ಸಾಧ್ಯವಿಲ್ಲ ಎಂದು ದೂರಿದರು.

ಸಿಟಿ ರವಿಯನ್ನು ಟೆರರಿಸ್ಟ್ ರೀತಿ ನಡೆಸಿಕೊಳ್ಳಲಾಗಿದೆ

• ಉದಯವಾಹಿನಿ, ಬೆಂಗಳೂರು

ವಿಧಾನ ಪರಿಷತ್ತಿನಲ್ಲಿ ಸಚಿವ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಆಕ್ಷೇಪಾರ್ಹ ಹೇಳಿಕೆ ನೀಡಿರುವ ಪ್ರಕರಣ ಸಂಬಂಧ ಬಿಜೆಪಿ ಎಂಎಲ್ ಸಿಟಿ ರವಿ ಅವರನ್ನು ನಡೆಸಿಕೊಳ್ಳುತ್ತಿರುವ ರೀತಿ ಸರಿಯಲ್ಲ ಎಂದು ವಿಧಾನ ಪರಿಷತ್ತಿನ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸಿಟಿ ರವಿ ಅವರನ್ನು ಬಂಧಿಸಲಾಯಿತು ಮತ್ತು ರಾತ್ರಿಯಿಡೀ ಊಟ-ನೀರು ನೀಡದೆ ಅಲ್ಲಿಂದಿಲ್ಲಿಗೆ ಓಡಾಡಿಸಲಾಗಿದೆ. ಅವರನ್ನು ಭಯೋತ್ಪಾದಕನಂತೆ ನಡೆಸಿಕೊಳ್ಳಲಾಯಿತು ಎಂದು ದೂರಿದರು. ಈ ಬಗ್ಗೆ ನ್ಯಾಯಾಂಗ ತನಿಖೆ ನಡೆಸಬೇಕು ಎಂದು ನಾರಾಯಣಸ್ವಾಮಿ ಒತ್ತಾಯಿಸಿದ್ದಾರೆ. ವಿಧಾನಸಭೆ ವಿಪಕ್ಷ ನಾಯಕ ಆರ್ ಅಶೋಕ್, ಬಸವರಾಜ ಬೊಮ್ಮಾಯಿ ಮತ್ತು ಶಾಸಕರು ರಾಜ್ಯಪಾಲರನ್ನು ಭೇಟಿ ಮಾಡಿದ್ದಾರೆ. ಸಿಟಿ ರವಿ ಅವರನ್ನು ನಡೆಸಿಕೊಂಡ ರೀತಿಯ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದ್ದೇವೆ. ಈ ಬಗ್ಗೆ ನ್ಯಾಯಾಂಗ ತನಿಖೆಗೆ ಆಗ್ರಹಿಸಿದ್ದೇವೆ ಎಂದರು.

ಸಿಎಂಗೆ ನೈತಿಕ ಹೊಣೆಗಾರಿಕೆ ಇಲ್ಲವೇ ಎಂದ ವಿವಿಜಯೇಂದ್ರ

• ಉದಯವಾಹಿನಿ, ಮಂಗಳೂರು

ಮೈಸೂರಿನ ಪ್ರಮುಖ ರಸ್ತೆಯೊಂದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೆಸರಿಡುವ ಮಹಾನಗರ ಪಾಲಿಕೆಯ ಪ್ರಸ್ತಾವನೆಗೆ ತೀವ್ರ ಆಕ್ಷೇಪ ವ್ಯಕ್ತವಾಗಿದೆ. ಈ ವಿಚಾರದಲ್ಲಿ ಸಿಎಂಗೆ ನೈತಿಕ ಹೊಣೆಗಾರಿಕೆಯಿಲ್ಲವೇ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಪ್ರಶ್ನಿಸಿದ್ದಾರೆ. ಮೈಸೂರು ಸಾಮ್ರಾಜ್ಯವನ್ನು ರಾಜರು ಮತ್ತು ಆಢಳಿತಗಾರರು ಕಟ್ಟಿ ಬೆಳೆಸಿದರು. ಆದರೆ, ಮಹಾನ್ ರಾಜವಂಶದ ಹೆಸರನ್ನು ಹೊಂದಿರುವ ರಸ್ತೆಗೆ ತಮ್ಮ ಹೆಸರಿಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ನಿರ್ಧರಿಸಿದ್ದಾರೆ. ಸದ್ಯ ಚುನಾಯಿತ ಪ್ರತಿನಿಧಿಗಳಿಲ್ಲದ ಮೈಸೂರು ಮಹಾನಗರ ಪಾಲಿಕೆಯು ಇಂತಹ ಪ್ರಮುಖ ನಿರ್ಧಾರ ಕೈಗೊಳ್ಳುವುದು ಎಷ್ಟು ಸಮಂಜಸವಾಗಿದೆ ಎಂದರು. ಮುಖ್ಯಮಂತ್ರಿ ಅಧಿಕಾರದಲ್ಲಿದ್ದುಕೊಂಡು ತಮ್ಮ ಹೆಸರಿಡಲು ಪ್ರಯತ್ನಿಸುತ್ತಿರುವ ಸಿದ್ದರಾಮಯ್ಯ ಅವರಿಗೆ ನೈತಿಕ ಹೊಣೆಗಾರಿಕೆ ಇಲ್ಲವೇ? ತುಘಲಕ್ ಆಡಳಿತವನ್ನು ನೆನಪಿಸುವ ಆಡಳಿತದಲ್ಲಿ ಮಾತ್ರ ಇಂತಹ ನಡವಳಿಕೆಗಳನ್ನು ಕಾಣಬಹುದು ಎಂದು ಟೀಕಿಸಿದರು.

ಕೆನ್-ಬೆಟ್ವಾ ನದಿ ಜೋಡಣೆಗೆ ಮೋದಿ ನಾಂದಿ!

1 21ನೇ ಶತಮಾನದ ಈ ಯುಗದಲ್ಲಿ ಜಲ ಸಂಪನ್ಮೂಲಗಳನ್ನು ಬಳಸಿಕೊಳ್ಳುವ ರಾಷ್ಟ್ರಗಳು ಮಾತ್ರ ಅಭಿವೃದ್ಧಿ

2 ಕೆನ್-ಬೆಟ್ವಾ ನದಿಗಳ ಜೋಡಣೆ ಯೋಜನೆಯು ಎರಡು ರಾಜ್ಯಗಳ ಜನರ ನೀರಿನ ಬವಣೆಗೆ ಪರಿಹಾರ

3 ಪರಮಾಣು ಪರೀಕ್ಷೆ ವಾಜಪೇಯಿ ಅವರ ದೊಡ್ಡ ಸಾಧನೆ

■ ವಾಜಪೇಯಿ ಜನ್ಮದಿನ ರಾಷ್ಟ್ರಪತಿ ಮುರ್ಮು ■ ಪ್ರಧಾನಿ ಮೋದಿ ಸೇರಿ ಗಣ್ಯರ ನಮನ ■ ಕೆನ್-ಬೆತ್ವಾ ನದಿ ಜೋಡಣೆಗೆ ಮೋದಿ ಶಂಕುಸ್ಥಾಪನೆ ■ ಸಾವಿರ ಕೋಟಿ ರೂಪಾಯಿ ವೆಚ್ಚದ ಕೆನ್-ಬೆಟ್ವಾ ನದಿ ಜೋಡಣೆ ■ ನಮೋ ಶಂಕುಸ್ಥಾಪನೆ

• ಉದಯವಾಹಿನಿ, ದೆಹಲಿ

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಲ್ಲಿ ಒಂದಾದ ನದಿ ಜೋಡಣೆಯ ಮೊದಲ ಯೋಜನೆಗೆ ಪ್ರಧಾನಿ ಮೋದಿ ಅವರು ಮಧ್ಯಪ್ರದೇಶದ ಖುಜುರಾಹೊದಲ್ಲಿ ಶಂಕುಸ್ಥಾಪನೆ ನೆರವೇರಿಸಿದ್ದಾರೆ. ಮಧ್ಯ ಪ್ರದೇಶದಲ್ಲಿ ಹುಟ್ಟುವ ಎರಡು ನದಿಗಳಾದ ಕೆನ್ ಮತ್ತು ಬೆಟ್ವಾ ನದಿಗಳನ್ನು ಜೋಡಿಸಿ, ಅದರ ನೀರನ್ನು ಮಧ್ಯಪ್ರದೇಶ ಮತ್ತು ಉತ್ತರಪ್ರದೇಶದ ಜನರಿಗೆ ನೀಡುವುದು ಯೋಜನೆಯ ಉದ್ದೇಶ. ಈ ಮೂಲಕ ಅತಿದೊಡ್ಡ ಸಾಹಸಕ್ಕೆ ಸರ್ಕಾರ ನಾಂದಿ ಹಾಡಿದೆ. ಕೆನ್-ಬೆಟ್ವಾ ನದಿಗಳ ನೀರನ್ನು ಒಟ್ಟಾಗಿ ಸುರಿಯುವ ಮೂಲಕ ಯೋಜನೆಗೆ ಚಾಲನೆ ನೀಡಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ದೇಶದ ಜಲಸಂಪನ್ಮೂಲ ಅಭಿವೃದ್ಧಿಗೆ ಡಾ.ಬಿ.ಆರ್. ಅಂಬೇಡ್ಕರ್ ಅವರ ಕೊಡುಗೆ ಮಹತ್ವದ್ದಾಗಿದೆ. ಕಾಂಗ್ರೇಸ್ ಸರ್ಕಾರಗಳು ಕಡೆಗಣಿಸಿದ್ದವು ಎಂದು ಆರೋಪಿಸಿದರು.

ದೇಶದ ಜಲ ಸಂಪನ್ಮೂಲಗಳ ಬಗ್ಗೆ ಅಂಬೇಡ್ಕರ್‌ಗೆ ದೂರದೃಷ್ಟಿ ಇತ್ತು: 21ನೇ ಶತಮಾನದ ಈ ಯುಗದಲ್ಲಿ ಜಲ ಸಂಪನ್ಮೂಲಗಳನ್ನು ಬಳಸಿಕೊಳ್ಳುವ ರಾಷ್ಟ್ರಗಳು ಮಾತ್ರ ಅಭಿವೃದ್ಧಿ ಹೊಂದಲು ಸಾಧ್ಯ. ದೇಶದ ಜಲ ಸಂಪನ್ಮೂಲಗಳ ಬಗ್ಗೆ ಅಂಬೇಡ್ಕರ್ ಅವರು ದೂರದೃಷ್ಟಿ ಹೊಂದಿದ್ದರು. ಅವುಗಳ ಬಲವರ್ಧನೆ, ನಿರ್ವಹಣೆ ಮತ್ತು ಅಣೆಕಟ್ಟು ನಿರ್ಮಾಣಕ್ಕೆ ಗಣನೀಯ ಕೊಡುಗೆ ನೀಡಿದ್ದಾರೆ ಎಂದು ಮೋದಿ ಬಣ್ಣಿಸಿದರು. ಪ್ರಮುಖ ನದಿ ಕಣಿವೆ ಯೋಜನೆಗಳ ಅಭಿವೃದ್ಧಿ ಮತ್ತು ಕೇಂದ್ರ ಜಲ ಆಯೋಗದ ರಚನೆಯಲ್ಲಿ ಅಂಬೇಡ್ಕರ್ ನಿರ್ಣಾಯಕ ಪಾತ್ರ ವಹಿಸಿದ್ದಾರೆ. ಆದರೆ, ಕಾಂಗ್ರೇಸ್ ನೀರಿನ ಸಂರಕ್ಷಣೆಯ ಬಗ್ಗೆ ಎಂದಿಗೂ ಗಮನ ನೀಡಲಿಲ್ಲ. ಅಂಬೇಡ್ಕರ್ ಅವರನ್ನು 'ಜಲ ಸಂರಕ್ಷಣಾವಾದಿಯಾಗಿ ಗುರುತಿಸಲಿಲ್ಲ ಎಂದು ಟೀಕಿಸಿದರು.

ಯೋಜನೆಯ ಬಗ್ಗೆ ಒಂದಿಷ್ಟು..: ಅತೀ ಮಹತ್ವದ ಕೆನ್-ಬೆಟ್ವಾ ನದಿಗಳ ಜೋಡಣೆ ಯೋಜನೆಯು ಎರಡು ರಾಜ್ಯಗಳ ಜನರ ನೀರಿನ ಬವಣೆಗೆ ಪರಿಹಾರ ನೀಡಲಿದೆ.

ಮಧ್ಯ ಪ್ರದೇಶದ 10 ಜಿಲ್ಲೆಗಳ ಸುಮಾರು 44 ಲಕ್ಷ ಮತ್ತು ಉತ್ತರ ಪ್ರದೇಶದ 4 ಜಿಲ್ಲೆಗಳ 21 ಲಕ್ಷ ಜನರಿಗೆ ಕುಡಿಯುವ ನೀರು ಒದಗಿಸಲಿದೆ. ಇದರ ಅಂದಾಜು ವೆಚ್ಚ 44,605 ಕೋಟಿ ರೂಪಾಯಿ ಆಗಿದೆ.

ಈ ಯೋಜನೆಯಿಂದ 2 ಸಾವಿರ ಗ್ರಾಮಗಳ ಸುಮಾರು 7.18 ಲಕ್ಷ ಕೃಷಿ ಕುಟುಂಬಗಳ, 10 ಲಕ್ಷ ಹೆಕ್ಟೇರ್ ಭೂಮಿಗೆ ನೀರು ಸಿಗಲಿದೆ. ಜೊತೆಗೆ, 103 ಮೆಗಾವ್ಯಾಟ್ ಜಲವಿದ್ಯುತ್ ಮತ್ತು 27 ಮೆಗಾವ್ಯಾಟ್ ಸೌರಶಕ್ತಿಯೂ ಯೋಜನೆಯಡಿ ಉತ್ಪಾದನೆಯಾಗಲಿದೆ. ಶೇಕಡಾ 90 ರಷ್ಟು ಅನುದಾನವನ್ನು ಕೇಂದ್ರ ಸರ್ಕಾರವೇ ಭರಿಸಲಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಯೋಜನೆಯ ರೂಪುರೇಷೆ : ಕೆನ್ ನದಿಗೆ ಅಡ್ಡಲಾಗಿ ಪನ್ನಾ ಹುಲಿ ಸಂರಕ್ಷಿತಾರಣ್ಯದಲ್ಲಿ 77 ಮೀಟರ್ ಎತ್ತರ ಮತ್ತು 2.13 ಕಿಲೋ ಮೀಟರ್ ಉದ್ದದ ದೌಧನ್ ಅಣೆಕಟ್ಟು ನಿರ್ಮಾಣ ಮಾಡಲಾಗುತ್ತದೆ.

ಇದಕ್ಕೆ ಹೊಂದಿಕೊಂಡಂತೆ 221 ಕಿ.ಮೀ. ಉದ್ದದ ಕಾಲುವೆಯನ್ನು ರೂಪಿಸಲಾಗುತ್ತದೆ. ಇದರ ಮೂಲಕ ಉತ್ತರಪ್ರದೇಶದಲ್ಲಿ ಹರಿಯುವ ಬೆಟ್ವಾ ನದಿಗೆ ಕೆನ್ ನದಿಯ ನೀರನ್ನು ಹರಿಸಲಾಗುತ್ತದೆ. ಈ ಕಾಲುವೆ ಪರಿಧಿಯಲ್ಲಿ ಬರುವ ಬುಂದೇಲಖಂಡದ ಜನರಿಗೆ ಕುಡಿಯಲು ಮತ್ತು ಕೃಷಿಗೆ ನೀರು ದೊರೆಯಲಿದೆ.

ವಾಜಪೇಯಿ ಎನ್‌ಡಿಎ ಸರಕಾರ

ದೆಹಲಿ, ಮುಂಬೈ, ಕೋಲ್ಕತಾ ಮತ್ತು ಚೆನ್ನೈನ ನಾಲ್ಕು ಪ್ರಮುಖ ನಗರಗಳನ್ನು ಸಂಪರ್ಕಿಸುವ ಹೆದ್ದಾರಿಗಳ ಜಾಲವಾದ ಸುವರ್ಣ ಚತುಷ್ಪಥ ಯೋಜನೆಯೊಂದಿಗೆ ಭಾರತದ ಉದ್ದಗಲಕ್ಕೂ ಸಂಪರ್ಕವನ್ನು ಕಲ್ಪಿಸುವಾಗ, ವಾಜಪೇಯಿ ನೇತೃತ್ವದ ಎನ್ಡಿಎ ಸರ್ಕಾರವು ಸಾಮಾನ್ಯ ನಾಗರಿಕರಿಗೆ ತಂತ್ರಜ್ಞಾನವನ್ನು ಲಭ್ಯವಾಗುವಂತೆ ಮಾಡಲು ಮೊದಲ ಪ್ರಯತ್ನ ಮಾಡಿತ್ತು ಎಂದು ಮೋದಿ ಅವರು ಈ ದಿನ ನೆನಪಿಸಿಕೊಂಡಿದ್ದಾರೆ.

ದೂರಸಂಪರ್ಕ ನೀತಿ ಬಿಡುಗಡೆ

ಮಾಹಿತಿ ತಂತ್ರಜ್ಞಾನ, ದೂರಸಂಪರ್ಕ ಮತ್ತು ಸಂವಹನದಲ್ಲಿ ವಾಜಪೇಯಿ ಅವರ ಕೊಡುಗೆಗಳು ನಮ್ಮ ರಾಷ್ಟ್ರಕ್ಕೆ ವಿಶೇಷ. 1998ರಲ್ಲಿ ವಾಜಪೇಯಿ ಪ್ರಧಾನಿಯಾದಾಗ ದೂರಸಂಪರ್ಕ ಕ್ಷೇತ್ರದ ಏಕಸ್ವಾಮ್ಯ ಇತ್ತು. ಈ ವಲಯವನ್ನು ಮುಕ್ತಗೊಳಿಸಲು ಮತ್ತು ಇಡೀ ದೇಶದಾದ್ಯಂತ ವಿಸ್ತರಿಸಲು ವಿವಿಧ ಕ್ರಮ ಕೈಗೊಂಡರು. ಅವರ ನೇತೃತ್ವದಲ್ಲಿ ಎನ್ಡಿಎ ಸರ್ಕಾರವು 1999 ರ ದೂರಸಂಪರ್ಕ ನೀತಿಯನ್ನು ಬಿಡುಗಡೆ ಮಾಡಿತು.



ವಾಜಪೇಯಿ ಕೊಡುಗೆ ದೊಡ್ಡ ಸಾಧನೆ

ಪೋಖ್ರಾನ್ ನಲ್ಲಿ ಪರಮಾಣು ಪರೀಕ್ಷೆ ಅವರ ದೊಡ್ಡ ಸಾಧನೆ. 1974ರಲ್ಲಿ ಇಂದಿರಾ ಗಾಂಧಿ ಪ್ರಧಾನಿಯಾಗಿದ್ದಾಗ ಭಾರತವು ತನ್ನ ಮೊದಲ ಪರಮಾಣು ಪರೀಕ್ಷೆ ಯಶಸ್ವಿಯಾಗಿ ನಡೆಸಿತ್ತು, ಮೇ 18, 1998 ರಂದು, ವಾಜಪೇಯಿ ಸರ್ಕಾರದ ಅಧಿಕಾರಾವಧಿಯಲ್ಲಿ ಭಾರತವು ಮತ್ತೆ ಪೋಖ್ರಾನ್ನಲ್ಲಿ ಪರಮಾಣು ಪರೀಕ್ಷೆ ನಡೆಸಿತು. ಪರೀಕ್ಷೆಗಳ ನಂತರ, ವಾಜಪೇಯಿ ಭಾರತ ಪೂರ್ಣ ಪ್ರಮಾಣದ ಪರಮಾಣು ಪರೀಕ್ಷೆ ಎಂದು ಘೋಷಿಸಿದರು.

ಜನಪ್ರತಿನಿಧಿಗಳ ಮೇಲೆ ಹಲ್ಲೆ, ದಬ್ಬಾಳಿಕೆ ಸರಿಯಲ್ಲ

• ಉದಯವಾಹಿನಿ, ಬೆಂಗಳೂರು

ಶಾಸಕ ಮುನಿರತ್ನ ಅವರ ಮೇಲೆ ಹಲ್ಲೆ ಮಾಡುವ ಮೂಲಕ ಸರ್ಕಾರ ರಾಜರಾಜೇಶ್ವರಿ ಕ್ಷೇತ್ರದ ಮತದಾರರನ್ನು ಅವಮಾನಿಸುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಕಿಡಿಕಾರಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶಾಸಕ ಮುನಿರತ್ನ ಅವರ ಮೇಲೆ ಮೊಟ್ಟೆ ದಾಳಿ ನಡೆಸಿದ ಘಟನೆಗೆ ಸಂಬಂಧಿಸಿ ಪ್ರತಿಕ್ರಿಯೆ ನೀಡಿದರು. ಅಧಿಕಾರದ ದರ್ಪದಲ್ಲಿ ಒಬ್ಬ ಜನಪ್ರತಿನಿಧಿಯ ಮೇಲೆ ಹಲ್ಲೆ, ದಬ್ಬಾಳಿಕೆ ಮಾಡುತ್ತಿರುವುದು ಖಂಡನೀಯ. ಯಾರೂ ಕೂಡ ಈ ಘಟನೆಯನ್ನು ಸಹಿಸಿಕೊಳ್ಳಲು ಸಾಧ್ಯವಿಲ್ಲ ಎಂದರು. ಮೊನ್ನೆ ಸುವರ್ಣಸೌಧದಲ್ಲಿ ಅಧಿವೇಶನ ನಡೆಯುತ್ತಿರಬೇಕಾದರೆ ಶಾಸಕರ ಮೇಲೆ ಹಲ್ಲೆ ಮಾಡಲು ಗೂಂಡಾಗಳು ನುಗ್ಗಿದ್ದಾರೆ. ಅವರ ಮೇಲೆ ಕ್ರಮ ಕೈಗೊಂಡಿಲ್ಲ. ಸರ್ಕಾರವು ಅಧಿಕಾರ ಇದೆಯೆಂದು ಮನಬಂದಂತೆ ನಡೆದುಕೊಳ್ಳುತ್ತಿದೆ. ಇದು ಖಂಡನೀಯವಾಗಿದೆ ಎಂದರು. ವಾಜಪೇಯಿ ಅವರ ಜನ್ಮದಿನದ ಕಾರ್ಯಕ್ರಮಕ್ಕೆ ಆಗಮಿಸಿದ ಸಂದರ್ಭದಲ್ಲಿ ಬಿಜೆಪಿ ಶಾಸಕ ಮುನಿರತ್ನ ಮೇಲೆ ಕಾಂಗ್ರೇಸ್ ಕಡೆಯವರು ಎನ್ನಲಾದವರಿಂದ ಮೊಟ್ಟೆ ಎಸೆದು ದಾಳಿ ನಡೆಸಿದ್ದರು. ಘಟನೆಯ ಹಿನ್ನೆಲೆಯಲ್ಲಿ ಶಾಸಕ ಮುನಿರತ್ನ ಪ್ರತಿಕ್ರಿಯಿಸಿ, ಮೊಟ್ಟೆ ತಗುಲುತ್ತಿದ್ದಂತೆಯೇ ನಾನು ಪ್ರಜ್ಞಾಹೀನನಾಗಿ ಕೆಳಗೆ ಬಿದ್ದುಬಿಟ್ಟೆ. ಮೊಟ್ಟೆಯೊಳಗೆ ಏನು ಮಿಶ್ರಣ ಮಾಡಿದ್ದರೋ ಗೊತ್ತಿಲ್ಲ. ಮುಖ ತಲೆ ಎಲ್ಲಾ ಉರಿಯಲು ಶುರುವಾಯ್ತು. ಕೂಡಲೇ ನನ್ನನ್ನು ಆಸ್ಪತ್ರೆಗೆ ಕರೆದೊಯ್ಯಲಾಯಿತು. ಜೊತೆಗೆ, ಇದು ನನ್ನ ಕೊಲೆಗೆ ನಡೆದಿರುವ ಸಂಚು ಎಂದೂ ಆರೋಪಿಸಿದ್ದಾರೆ.

ಶಾಸಕ ಮುನಿರತ್ನ ತಲೆಯ ಹಿಂಭಾಗದಲ್ಲಿ ಪೆಟ್ಟು ಬಿದ್ದಿದೆ
ಕೆಮಿಕಲ್ ಮಾದರಿ ಪದಾರ್ಥದಿಂದ ಹೊಡೆದಿದ್ದಾರೆ

• ಉದಯವಾಹಿನಿ, ಬೆಂಗಳೂರು

ಶಾಸಕ ಮುನಿರತ್ನ ಮೇಲೆ ಮೊಟ್ಟೆ ದಾಳಿ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರಿನ ಕೆ.ಸಿ.ಜನರಲ್ ಆಸ್ಪತ್ರೆಗೆ ದಾಖಲಾಗಿರುವ ಮುನಿರತ್ನ ಅವರನ್ನು ಭೇಟಿಯಾಗಿ ಬಿಜೆಪಿ ಸಂಸದ ಡಾ.ಮಂಜುನಾಥ್ ಆರೋಗ್ಯ ವಿಚಾರಿಸಿದ್ದಾರೆ. ಮುನಿರತ್ನ ಭೇಟಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಡಾ.ಮಂಜುನಾಥ್, ಮುನಿರತ್ನ ತಲೆಯ ಹಿಂಭಾಗದಲ್ಲಿ ಪೆಟ್ಟು ಬಿದ್ದಿದೆ. ಕೆಮಿಕಲ್ ಮಾದರಿ ಪದಾರ್ಥದಿಂದ ಹೊಡೆದಿದ್ದಾರೆ ಎಂದು ತಿಳಿಸಿದ್ದಾರೆ. ಮೊಟ್ಟೆ ದಾಳಿಯಿಂದ ಮುನಿರತ್ನ ಅವರ ಕೂದಲು ಸ್ವಲ್ಪ ಬರ್ನ್ ಆಗಿದೆ. ತಲೆಸುತ್ತು, ವಾಂತಿ ಬಂದಂತೆ ಆಗ್ತಿದೆ, ಸದ್ಯ ಅವರು ವಿಶ್ರಾಂತಿ ಪಡೆಯುತ್ತಿದ್ದಾರೆ. ಸಿಟಿ ಸ್ಕ್ಯಾನ್ ಮಾಡಲು ಸೂಚಿಸಿದ್ದೇನೆ. ಸಿಟಿ ಸ್ಕ್ಯಾನ್ ಬಳಿಕ ಗೊತ್ತಾಗಲಿದೆ ಎಂದು ತಿಳಿಸಿದರು. ಹಲವು ತಿಂಗಳಿಂದ ಕೆಲವು ರಾಜಕೀಯ ಘಟನೆಗಳನ್ನು ನೋಡಿದರೆ ಮುನಿರತ್ನ ಅವರನ್ನು ಟಾರ್ಗೆಟ್ ಮಾಡುತ್ತಿದ್ದಂತೆ ಕಾಣುತ್ತಿದೆ. ಪ್ರಜಾಪ್ರಭುತ್ವವ್ಯವಸ್ಥೆಯಲ್ಲಿ ಆರೋಗ್ಯಕರ ರಾಜಕೀಯ ಮಾಡಬೇಕು ಎಂದು ಹೇಳಿದರು.

ಸಿದ್ದರಾಮಯ್ಯ ಮೈಸೂರಿನ ಸುಪುತ್ರ

• ಉದಯವಾಹಿನಿ, ಮೈಸೂರು

40 ವರ್ಷ ದಿಂದ ವಿಧಾನಸಭೆಗೆ ಸಿದ್ದರಾಮಯ್ಯ ಹೋಗಿದ್ದಾರೆ. ಅವರ ಹೆಸರನ್ನು ರಸ್ತೆಗೆ ಇಡುವುದರಲ್ಲಿ ತಪ್ಪೇನಿದೆ ಎಂದು ಪ್ರಶ್ನಿಸುವ ಮೂಲಕ ಮಾಜಿ ಸಂಸದ ಪ್ರತಾಪ್ ಸಿಂಹ ಸಿಎಂ ಪರ ಬ್ಯಾಟ್ ಬೀಸಿದ್ದಾರೆ. ಮೈಸೂರಿನ ಕೆಆರ್ ಎಸ್ ರಸ್ತೆಗೆ 'ಸಿದ್ದರಾಮಯ್ಯ ಆರೋಗ್ಯ ರಸ್ತೆ' ಎಂದು ಪಾಲಿಕೆ ನಾಮಕರಣ ಮಾಡಲು ಮುಂದಾದ ವಿಚಾರಕ್ಕೆ ವಿರೋಧ ವ್ಯಕ್ತವಾದ ಬಗ್ಗೆ ಪ್ರತಾಪ್ ಸಿಂಹ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸಿದ್ದರಾಮಯ್ಯ ಮೈಸೂರಿನ ಸುಪುತ್ರ. ಸೈದ್ಧಾಂತಿಕವಾಗಿ ನಾವು ಅವರನ್ನು ವಿರೋಧಿಸುತ್ತೇನೆ. ಆದರೆ ಈ ವಿಚಾರದಲ್ಲಿ ವಿರೋಧ ಮಾಡಲ್ಲ. ಸ್ಪಷ್ಟ ಬಹುಮತದ ಜೊತೆ ಎರಡು ಬಾರಿ ಸಿದ್ದರಾಮಯ್ಯ ಸಿಎಂ ಆಗಿದ್ದಾರೆ. ಮೈಸೂರಿಗೆ ಸಿದ್ಧರಾಮಯ್ಯನವರ ಕೊಡುಗೆ ಬಹಳ ಇದೆ ಎಂದು ಹೇಳಿದರು. ಜಯದೇವ ಆಸ್ಪತ್ರೆ ಕಟ್ಟಡ, ಸೂಪರ್ ಸ್ಪೆಷಲಾಟಿ ಆಸ್ಪತ್ರೆ ಕಟ್ಟಿಸಿದ್ದು ಸಿದ್ದರಾಮಯ್ಯ, ರಾಜಪಥ ಮಾಡಿಸಿದ್ದು ಸಿದ್ದರಾಮಯ್ಯ 40 ವರ್ಷ ದಿಂದ ವಿಧಾನಸಭೆಗೆ ಸಿದ್ದರಾಮಯ್ಯ ಹೋಗಿದ್ದಾರೆ. ಅವರ ಹೆಸರು ಇಡುವುದರಲ್ಲಿ ತಪ್ಪೇನಿದೆ. ಈ ವಿಚಾರದಲ್ಲಿ ತಕಾರರು ಎತ್ತಿದರೆ ಮೊಸರಿನಲ್ಲಿ ಕಲ್ಲು ಹುಡುಕಿದಂತೆ ಆಗುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಶಾಸಕ ಮುನಿರತ್ನ ಮೇಲೆ ಮೊಟ್ಟೆ ದಾಳಿ: ಮೂವರು ಕಿಡಿಗೇಡಿಗಳ ಬಂಧನ

ಮೊಟ್ಟೆ ಏಟು.. ಅನುಮಾನ ನೂರೆಂಟು

• ಉದಯವಾಹಿನಿ, ಬೆಂಗಳೂರು

ಬಿಜೆಪಿ ಶಾಸಕ ಮುನಿರತ್ನ ಮೇಲೆ ಮೊಟ್ಟೆ ದಾಳಿ ನಡೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರನ್ನು ಬಂಧಿಸಲಾಗಿದೆ ಎ

ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

ಧಾರ್ಮಿಕ ಅಧ್ಯಯನ

ಧರ್ಮದ ಹೆಸರಿನಲ್ಲಿ ಪ್ರಚೋದಕ ಹೇಳಿಕೆ - ಪ್ರತಿಕ್ರಿಯೆ, ವೈರುಧ್ಯ-ದ್ವೇಷ ಭಾಷಣ, ಆಕ್ರಮಣ ಅತ್ಯಾಚಾರ ಲೂಟಿ ಮತಾಂತರ ರಕ್ತಪಾತ ದೇಶ ವಿರೋಧಿಕೃತ್ಯ ಏನೇನೋ ನಡೆಯುತ್ತೆ. ಇಂಥ ಕೃತ್ಯದಲ್ಲಿ ತೊಡಗುವ ಪ್ರಚೋದಿಸುವ ಬಹುತೇಕರಿಗೆ ವಿರೋಧೀ ಧರ್ಮದ ವಾಸ್ತವಿಕ ತಿಳುವಳಿಕೆ, ಮಾತ್ರವಲ್ಲ ತಮ್ಮದೇ ಧರ್ಮದ ವಾಸ್ತವ ತಿಳುವಳಿಕೆಯೂ ಇರುವುದಿಲ್ಲ. ನೊರೆಯೇ ನೀರು ಹಾಲಲ್ಲ. ಬಾಯಿಂದ ಬಾಯಿಗೆ, ಕಿವಿಯಿಂದ ಕಿವಿಗೆ ಬಂದುದನ್ನು ನಂಬುವುದೇ ಹೆಚ್ಚು. ಆಯಾ ಧರ್ಮದ ಮೂಲ ಗ್ರಂಥಗಳ ಅವಲೋಕನ ತುಂಬಾ ವಿರಳ. ಆದ್ದರಿಂದ ಶಾಲಾ ಕಾಲೇಜು ವಿವಿಗಳಲ್ಲಿ ವಿವಿಧ ಧರ್ಮಗಳ ಮೂಲ ಗ್ರಂಥಗಳ ಏಕೀಕೃತ ತೌಲನಿಕ ಅಧ್ಯಯನ ನಡೆಯುವಂತಾಗಬೇಕು. ಹಿಂದುಗಳು ಹಿಂದುಧರ್ಮದ ಜೊತೆಗೆ ಇಸ್ಲಾಂ ಕ್ರೈಸ್ತ ಧರ್ಮಗಳನ್ನು, ಕ್ರೈಸ್ತರು ಕ್ರೈಸ್ತ ಧರ್ಮದ ಜೊತೆಗೆ ಹಿಂದೂ ಇಸ್ಲಾಂ ಧರ್ಮಗಳನ್ನು, ಮುಸ್ಲಿಮರು ಇಸ್ಲಾಂ ಧರ್ಮದ ಜೊತೆಗೆ ಹಿಂದು ಕ್ರೈಸ್ತ ಧರ್ಮಗಳನ್ನು ಓದುವಂತಾಗಬೇಕು. ಮಾತ್ರವಲ್ಲ ಅವುಗಳ ಮೇಲೆ ಮುಕ್ತವಾದ ಚರ್ಚೆ ಪರಿಷ್ಕಾರ ತಿದ್ದುಪಡಿ ಮಾಡುವುದಕ್ಕೂ ಅವಕಾಶವಾಗಬೇಕು. ಯಾವುದೂ ನಿಂತ ನೀರಿನಂತಾಗಬಾರದು.

ಜೈ ಬಾಪು, ಜೈ ಭೀಮ್, ಜೈ ಸಂವಿಧಾನ ಸಮಾವೇಶ

26 ರಂದು ಕಾಂಗ್ರೇಸ್ ಕಾರ್ಯಕಾರಿ ಸಮಿತಿಯ ಸಭೆಯನ್ನು ಗಾಂಧಿ ಬಾವಿ (ಪಂಪ ಸರೋವರ) ಬಳಿ ಹಮ್ಮಿಕೊಳ್ಳಲಾಗಿದೆ

• ಉದಯವಾಹಿನಿ, ಬೆಂಗಳೂರು

ಡಿ. 27ರಂದು ನಡೆಯಲಿರುವ ಸಾರ್ವಜನಿಕ ಸಭೆಗೆ ಜೈ ಬಾಪು, ಜೈ ಭೀಮ್, ಜೈ ಸಂವಿಧಾನ ಸಮಾವೇಶ ಎಂದು ಹೆಸರಿಡಲಾಗಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು. ಬೆಳಗಾವಿ ಕ್ಲಬ್ ರಸ್ತೆಯ ಸಿಪಿಇಡಿ ಶಾಲಾ ಮೈದಾನದಲ್ಲಿ ಮಾಧ್ಯಮಗೋಷ್ಠಿ ಉದ್ದೇಶಿಸಿ ಬುಧವಾರ ಮಾತನಾಡಿದರು. ಈ ಪ್ರದೇಶವನ್ನು ಮಹಾತ್ಮಾ ಗಾಂಧೀಜಿ ನವನಗರ ಎಂದು ಘೋಷಣೆ ಮಾಡಿದ್ದೇವೆ.

26 ರಂದು ಕಾಂಗ್ರೇಸ್ ಕಾರ್ಯಕಾರಿ ಸಮಿತಿಯ ಸಭೆಯನ್ನು ಗಾಂಧಿ ಬಾವಿ (ಪಂಪ ಸರೋವರ) ಬಳಿ ಹಮ್ಮಿಕೊಳ್ಳಲಾಗಿದೆ. 1924ರಲ್ಲಿ ನಡೆದ ಬೆಳಗಾವಿ ಕಾಂಗ್ರೇಸ್ ಅಧಿವೇಶನದಲ್ಲಿ ಮಹಾತ್ಮಾ ಗಾಂಧಿ ಅವರು ಅಧ್ಯಕ್ಷರಾಗಿದ್ದರು. ಇಂದು ಆ ಸ್ಥಾನದಲ್ಲಿ ಕರ್ನಾಟಕದವರೇ ಆದ ಮಲ್ಲಿಕಾರ್ಜುನ ಖರ್ಗೆ ಅವರು ಕುಳಿತಿರುವುದು ನಮ್ಮ ಹೆಮ್ಮೆಯ ವಿಚಾರ ಎಂದರು.

ಕರ್ನಾಟಕದವರೇ ಆದ ಗಂಗಾಧರ ದೇಶಪಾಂಡೆ ಹಾಗೂ ಜವಾಹರ್ ಲಾಲ್ ನೆಹರು ಅವರು ಅಂದು ಕಾಂಗ್ರೇಸ್ ಪ್ರಧಾನ



ಉದಯವಾಹಿನಿ ಚಿತ್ರ

ಕಾರ್ಯದರ್ಶಿಗಳಾಗಿದ್ದರು. ಅವರೂ ಸೇರಿ ಬೆಳಗಾವಿಯಲ್ಲಿ ಈ ಅಧಿವೇಶನ ಮಾಡಿದ್ದರು. ಅಂದು 80 ಎಕರೆ ಜಾಗದಲ್ಲಿ ಅಧಿವೇಶನ ನಡೆದಿತ್ತು. ಇಂದು ಅದೇ ಸ್ಥಳದಲ್ಲಿ ಕಾರ್ಯಕಾರಿ ಸಮಿತಿ ಸಭೆ ಮಾಡುತ್ತಿದ್ದೇವೆ ಎಂದು ತಿಳಿಸಿದರು.

'1924ರ ಅಧಿವೇಶನದ ದಾಖಲೆಗಳನ್ನು ಸಂಗ್ರಹಿಸಿದ್ದು ಅದನ್ನು ಪುಸ್ತಕ ಮಾಡಿ ಬಿಡುಗಡೆ ಮಾಡುತ್ತಿದ್ದೇವೆ.

26ರಂದು ಬೆಳಗ್ಗೆ 10 ಗಂಟೆಗೆ ವೀರ ಸೌಧದಲ್ಲಿ ಗಾಂಧಿ ಅವರ ಪುತ್ಥಳಿ ಅನಾವರಣ ಮಾಡಲಾಗುವುದು. ಜತೆಗೆ ಛಾಯಾಚಿತ್ರ ಪ್ರದರ್ಶನಕ್ಕೆ ಚಾಲನೆ ನೀಡಲಾಗುವುದು. ಬೆಳಗ್ಗೆ 10.45ಕ್ಕೆ ಖಾದಿ ಮೇಳವನ್ನು ಉದ್ಘಾಟನೆ ಮಾಡಲಾಗುವುದು. 11.15ಕ್ಕೆ ಗಂಗಾಧರ ದೇಶಪಾಂಡೆ ಅವರ ಸ್ಮಾರಕವನ್ನು ನಾನು ಹಾಗೂ ಮುಖ್ಯಮಂತ್ರಿ ಅನಾವರಣ ಮಾಡಲಿದ್ದೇವೆ. ನಂತರ ಗಂಗಾಧರ ದೇಶಪಾಂಡೆ ಅವರ ಛಾಯಾಚಿತ್ರ ಪ್ರದರ್ಶನಕ್ಕೆ ಚಾಲನೆ ನೀಡಲಾಗುವುದು. ಮಧ್ಯಾಹ್ನ 3 ಗಂಟೆಗೆ ಕಾರ್ಯಕಾರಿ ಸಮಿತಿ ಸಭೆ ನಡೆಯಲಿದ್ದು, ರಾತ್ರಿ 7ಕ್ಕೆ ಎಐಸಿಸಿ ಅಧ್ಯಕ್ಷರಿಂದ ಭೋಜನಕೂಟ ಏರ್ಪಡಿಸಲಾಗಿದೆ ಎಂದು ವಿವರಿಸಿದರು.

27ರಂದು ಬೆಳಗ್ಗೆ 10.30ಕ್ಕೆ ಸುವರ್ಣಸೌಧದಲ್ಲಿ ಗಾಂಧಿ ಪ್ರತಿಮೆಯನ್ನು ಮಲ್ಲಿಕಾರ್ಜುನ ಖರ್ಗೆ ಹಾಗೂ ರಾಹುಲ್ ಗಾಂಧಿ ಅವರು ಅನಾವರಣಗೊಳಿಸಲಿದ್ದಾರೆ. ಮುಖ್ಯಮಂತ್ರಿಗಳು ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ಸಭಾಧ್ಯಕ್ಷರಾದ ಯು.ಟಿ ಖಾದರ್ ಹಾಗೂ ಸಭಾಪತಿಗಳಾದ ಬಸವರಾಜ ಹೊರಟ್ಟಿ ಅವರ ಮುಖಂಡತ್ವದಲ್ಲಿ ಈ ಕಾರ್ಯಕ್ರಮ ನಡೆಯಲಿದ್ದು, ಎಲ್ಲಾ ಪಕ್ಷದ ನಾಯಕರಿಗೆ ಆಹ್ವಾನ ನೀಡಲಾಗುವುದು.

ಬೆಳಗಾವಿ ಅಧಿವೇಶನದ ಶತಮಾನೋತ್ಸವ

ಹಿನ್ನೆಲೆಯಲ್ಲಿ ಎಸ್ಕಾಂನವರು ಬೆಳಗಾವಿ ನಗರದಲ್ಲಿ ದೀಪಾಲಂಕಾರ ಮಾಡಿದ್ದು, ಬಹಳ ಉತ್ತಮವಾಗಿ ಅಲಂಕಾರ ಮಾಡಿದ್ದಾರೆ. ರಾಜ್ಯದ ಜನತೆ ಅದರಲ್ಲೂ ಕಿತ್ತೂರು ಕರ್ನಾಟಕ ಭಾಗದ ಜನ ಈ ದೀಪಾಲಂಕಾರವನ್ನು ಕಣ್ಮುಂಬಿಕೊಳ್ಳಬೇಕು ಎಂದು ಮನವಿ ಮಾಡಿದರು.

ಸ್ಥಳೀಯ ನಾಯಕರು, ರಾಜ್ಯದ ಎಲ್ಲಾ ಸಂಸದರನ್ನು ನಾವು ಕಾರ್ಯಕ್ರಮಕ್ಕೆ ಆಹ್ವಾನಿಸಿದ್ದೇವೆ. 12 ಗಂಟೆಗೆ ಮುಖ್ಯಮಂತ್ರಿಗಳಿಂದ ಔತನಕೂಟ, ಮಧ್ಯಾಹ್ನ 1 ಗಂಟೆಗೆ ಸಾರ್ವಜನಿಕ ಸಮಾವೇಶ ನಡೆಯಲಿದೆ ಎಂದು ತಿಳಿಸಿದರು.

ವಜ್ರ ಮಹೋತ್ಸವ ಸಂಭ್ರಮ 2024-25

• ಉದಯವಾಹಿನಿ, ಬೆಂಗಳೂರು

ನಾದಜ್ಯೋತಿ ಸಂಗೀತ ಸಭಾ ಟ್ರಸ್ಟ್ ವತಿಯಿಂದ ಸಂಸ್ಥೆಯ ವಜ್ರ ಮಹೋತ್ಸವದ ಅಂಗವಾಗಿ ಮಲ್ಲೇಶ್ವರದ ಸಂಪಿಗೆ ರಸ್ತೆಯ 11ನೇ ಅಡ್ಡರಸ್ತೆಯಲ್ಲಿರುವ ಶ್ರೀ ವೇಣುಗೋಪಾಲ ಸ್ವಾಮಿ ದೇವಸ್ಥಾನದಲ್ಲಿ ಡಿ. 28, ಶನಿವಾರ ಸಂಜೆ 6-00 ಗಂಟೆಗೆ 'ನಾದಜ್ಯೋತಿ ಪುರಸ್ಕೃತೆ' ವಿದುಷಿ ಎಂ.ಎಸ್. ವಿದ್ಯಾ ಅವರಿಂದ ಸಂಗೀತ ಕಾರ್ಯಕ್ರಮ. ವಾದ್ಯ ಸಹಕಾರ: ವಿದುಷಿ ಸಿ.ವಿ. ಶೃತಿ (ಪಿಟೀಲು), ವಿದ್ವಾನ್ ಚೇತನ್ ಮೂರ್ತಿ (ಮೃದಂಗ), ವಿದ್ವಾನ್ ನವೀನ್ ಚಂದ್ರಪ್ರಕಾಶ್ (ಖಂಜರ). ಡಿ. 29, ಭಾನುವಾರ ಸಂಜೆ 6-00 ಗಂಟೆಗೆ ಡಾ|| ಗೀತಾ ಆರ್. ಭಟ್ ಇವರಿಂದ ವೀಣಾವಾದನ. ವಾದ್ಯ ಸಹಕಾರ : ವಿದ್ವಾನ್ ಆನೂರು ದತ್ತಾತ್ರೇಯ ಶರ್ಮಾ (ಮೃದಂಗ), ವಿದ್ವಾನ್ ಟಿ.ಎನ್. ರಮೇಶ್ (ಘಟ) ಏರ್ಪಡಿಸಲಾಗಿದೆ ಎಂದು ಸಂಸ್ಥೆಯ ಪದಾಧಿಕಾರಿ ಶ್ರೀ ಕಟ್ಟೆ ಸತ್ಯನಾರಾಯಣ ತಿಳಿಸಿದ್ದಾರೆ.

ಬೆಂಗಳೂರಲ್ಲಿ ಸಿಲಿಂಡರ್ ಬ್ಲಾಸ್ಟ್- ಮೂವರ ಸ್ಥಿತಿ ಗಂಭೀರ

• ಉದಯವಾಹಿನಿ, ಬೆಂಗಳೂರು

ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಬೆಳ್ಳಂಬೆಳಗ್ಗೆ ಸಿಲಿಂಡರ್ ಸ್ಫೋಟಗೊಂಡಿರುವಂತಹ ಘಟನೆ ನಡೆದಿದೆ. ದುರಂತದಲ್ಲಿ ಮೂವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಬೆಂಗಳೂರಿನ ಶ್ರೀರಾಂಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ. ಮನೆಯಲ್ಲಿದ್ದವರು ಬೆಳಗ್ಗೆ ಎದ್ದು ಲೈಟ್ ಹಾಕಿದ ತಕ್ಷಣ ಏಕಾಏಕಿ ಸಿಲಿಂಡರ್ ಸ್ಫೋಟಗೊಂಡಿದೆ. ಇದರಿಂದ ಮನೆಯಲ್ಲಿದ್ದ ಮೂವರಿಗೆ ಗಂಭೀರವಾದ ಗಾಯಗಳಾಗಿವೆ. . ಸಿನಿಮಾ ಕ್ರೀಡೆ ತಕ್ಷಣ ಗಾಯಾಳುಗಳನ್ನು ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ನೀಡಲಾಗುತ್ತಿದೆ. ಘಟನೆ ಶ್ರೀರಾಂಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ಆರೋಗ್ಯ ಕುಟುಂಬ ಕಲ್ಯಾಣ ಇಲಾಖೆಯಲ್ಲಿ 9,871 ಹುದ್ದೆಗಳ ನೇಮಕಾತಿ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಉದ್ಯೋಗಾಕಾಂಕ್ಷಿಗಳಿಗೆ ಸಿಹಿಸುದ್ದಿಯನ್ನು ಸರ್ಕಾರ ನೀಡಿದೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವಂತ ಬರೋಬ್ಬರಿ 9,871 ಹುದ್ದೆಗಳ ಭರ್ತಿಗೆ ರಾಜ್ಯ ಸರ್ಕಾರ ಗ್ರೀನ್ ಸಿಗ್ನಲ್ ನೀಡಿದೆ.

ಈ ಕುರಿತಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸರ್ಕಾದ ಅಧೀನ ಕಾರ್ಯದರ್ಶಿ ನಡವಳಿಯನ್ನು ಹೊರಡಿಸಿದ್ದು ಆರೋಗ್ಯ ಮತ್ತು ಅಪರಾಧ ಪ್ರಯಾಣ ಕುಟುಂಬ ಕಲ್ಯಾಣ ಸೇವೆಗಳು ರವರ ಪ್ರಸ್ತಾವನೆಯಲ್ಲಿ ಈ ಕೆಳಕಂಡ ವಿವಿಧ ವೃಂದಗಳ ಅರೆ ವೈದ್ಯಕೀಯ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಆಡಳಿತಾತ್ಮಕ ಅನುಮತಿ ನೀಡುವಂತೆ ಹಾಗೂ ನರ ನೇಮಕಾತಿ ಮೂಲಕ ಅನುಮತಿ ನೀಡಿ ಭರ್ತಿ ಮಾಡುವವರೆಗೆ ಅಥವಾ ಒಂದು ವರ್ಷದ ಅವಧಿಗೆ ಸದರಿ ಖಾಲಿ ಹುದ್ದೆಗಳನ್ನು ಗುತ್ತಿಗೆ ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅನುಮತಿ ನೀಡುವಂತೆ ಕೋರಿರುತ್ತಾರೆ ಎಂದಿದ್ದಾರೆ.

ಪ್ರಕರಣದಲ್ಲಿ ವಿನಯ್ ಕುಲಕರ್ಣಿ ಹೆಸರು ಕೇಳಿ ಬರ್ತಿರೋದು ಏಕೆ?

• ಉದಯವಾಹಿನಿ, ಬೆಂಗಳೂರು

ಮಾಜಿ ಸಂಸದ ಡಿ ಕೆ ಸುರೇಶ್ ತಂಗಿ ಎಂದು ಹೇಳಿಕೊಂಡು ಕೋಟ್ಯಾಂತರ ರೂಪಾಯಿ ವಂಚನೆ ಮಾಡಿರುವ ಪ್ರಕರಣ ಸಂಬಂಧ ಈಗಾಗಲೆ ಪ್ರಕರಣ ದಾಖಲಾಗಿದೆ. ಆರ್ ಆರ್ ನಗರ ನಿವಾಸಿ ಆಗಿರುವ ಐಶ್ವರ್ಯಾ ಗೌಡ ವಿರುದ್ಧ ಎಫ್ಐಆರ್ ದಾಖಲಾಗಿದ್ದು, ಚಿನ್ನಾಭರಣ ಖರೀದಿಸಿ ವಂಚನೆ ಮಾಡಿರುವ ಆರೋಪ ಕೇಳಿಬಂದಿದೆ. ಈ ಬಗ್ಗೆ ಪ್ರತಿಕ್ರಿಯೆ ನೀಡಿರುವ ಐಶ್ವರ್ಯಾ ಗೌಡ ನಾನು ಯಾವುದೇ ರೀತಿಯಲ್ಲಿ ಮೋಸ ಮಾಡಿಲ್ಲ ಎಂದು ಹೇಳಿದ್ದಾರೆ. ವಾರಾಹಿ ವರ್ಲ್ಡ್ ಆಫ್ ಗೋಲ್ಡ್ ಶಾಪ್ ಮಾಲೀಕರಾದ ವನಿತಾ ಐತಾಳ್ ಅವರು, ಐಶ್ವರ್ಯಾ ವಿರುದ್ಧ ವಂಚನೆ ಪ್ರಕರಣ ದಾಖಲಿಸಿದ್ದಾರೆ. ಇನ್ನು ಪ್ರಕರಣದ ಬಗ್ಗೆ ಮಾತನಾಡಿರುವ ಐಶ್ವರ್ಯಾ, ನಾನು ಯಾವುದೇ ರೀತಿಯಲ್ಲಿ ಮೋಸ ಮಾಡಿಲ್ಲ. ಆಕೆ ನನಗೆ ಮೋಸ ಮಾಡಿದ್ದಾಳೆ ಎಂದು ಆರೋಪಿಸಿದ್ದಾರೆ. ವನಿತಾ ಪರಿಚಯವಾಗಿ ಕೇವಲ ಐದು ಅಥವಾ ಆರು ತಿಂಗಳು ಕಳೆದಿದೆ. ವನಿತಾ ನನ್ನ ಸಹೋದರಿ ಹಾಗೂ ಸ್ನೇಹಿತೆ ರೀತಿಯಲ್ಲಿ ಇದ್ದರು ಎಂದು ಹೇಳಿದ್ದಾರೆ. ನಮ್ಮ ಮನೆಗೆ ಪೂಜೆ ಅಥವಾ ಹಬ್ಬ ಇರುವಾಗ ಹಲವಾರು ಗಣ್ಯ ವ್ಯಕ್ತಿಗಳು, ರಾಜಕಾರಣಿಗಳು ಬರುತ್ತಾರೆ. ನನ್ನನ್ನು ಚಿನ್ನದ ಅಂಗಡಿಗೆ ವನಿತಾ ಬರಮಾಡಿಕೊಂಡಿದ್ದರು. ಆಕೆಯೇ ನನಗೆ ಮೋಸ ಮಾಡಿದ್ದಾಳೆ. ನಾನು ಕೂಡ ನೋಟೀಸ್‌ಗಳಿಗೆ ಉತ್ತರ ನೀಡಿದ್ದೇನೆ. ನಾನು ಮಾಜಿ ಸಂಸದ ಡಿ ಕೆ ಸುರೇಶ್ ತಂಗಿ ಅಲ್ಲ ಎಂದು ಸ್ಪಷ್ಟನೆ ನೀಡಿದ್ದಾರೆ

ಲಂಚಕ್ಕೆ ಬೇಡಿಕೆ: ಶಾಸಕ ಮುನಿರತ್ನಗೆ ಮತ್ತೊಂದು ಸಂಕಷ್ಟ,

• ಉದಯವಾಹಿನಿ, ಬೆಂಗಳೂರು

ಗುತ್ತೆಗೆದಾರರಿಂದ ಲಂಚಕ್ಕೆ ಬೇಡಿಕೆ ಪ್ರಕರಣದಲ್ಲಿ ಬಿಜೆಪಿ ಶಾಸಕ ಮುನಿರತ್ನಗೆ ಮತ್ತೊಂದು ಸಂಕಷ್ಟ ಶುರುವಾಗಿದೆ. ತನಿಖೆ ನಡೆಸುತ್ತಿರುವಂತ ಎಸ್ಐಟಿಯಿಂದ ಪ್ರಾಸಿಕ್ಯೂಷನ್ ಗೆ ಅನುಮತಿ ಕೋರಿ ಸ್ಪೀಕರ್‌ಗೆ ಮನವಿ ಮಾಡಲಾಗಿದೆ. ಕಸ ವಿಲೇವಾರಿ ಗುತ್ತಿಗೆ ನೀಡುವುದಕ್ಕೆ ಗುತ್ತಿಗೆದಾರ ಚಲುವರಾಜು ಬಳಿಯಲ್ಲಿ 30 ಲಕ್ಷ ವಂಚಕ್ಕೆ ಬೇಡಿಕೆ ಇಟ್ಟ ಸಂಬಂಧ ಭ್ರಷ್ಟಾಚಾರ ನಿಗ್ರಹದಡಿ ಕೇಸ್ ದಾಖಲಾಗಿತ್ತು. ಈ ಪ್ರಕಣವನ್ನು ರಾಜ್ಯ ಸರ್ಕಾರ ಎಸ್ಐಟಿ ತನಿಖೆಗೆ ವಹಿಸಿತ್ತು. ಈ ಪ್ರಕರಣದಲ್ಲಿ ಈಗ ಬಿಜೆಪಿ ಶಾಸಕ ಮುನಿರತ್ನ ವಿರುದ್ಧ ಸಂಕಷ್ಟ ಶುರುವಾಗಿದೆ. ಈ ಪ್ರಕರಣದ ತನಿಖೆ ನಡೆಸುತ್ತಿರುವಂತ ಎಸ್ಐಟಿ ಅಧಿಕಾರಿಗಳು ಬಿಜೆಪಿ ಶಾಸಕ ಮುನಿರತ್ನ ವಿರುದ್ಧ ತನಿಖೆ ನಡೆಸಲು ಸ್ಪೀಕರ್ ಯು.ಟಿ ಖಾದರ್ ಅವರಿಗೆ ಪ್ರಾಸಿಕ್ಯೂಷನ್ ಗೆ ಅನುಮತಿ ಕೋರಿ ಪತ್ರ ಬರೆದಿದೆ. ಒಂದು ವೇಳೆ ಅನುಮತಿ ನೀಡಿದ್ರೆ, ಶಾಸಕ ಮುನಿರತ್ನಗೆ ಮತ್ತೊಂದು ಸಂಕಷ್ಟ ಎದುರಾದಂತೆ ಆಗಲಿದೆ.

ಕೊಂಕಣ ರೈಲ್ವೇ ವಿಲೀನಕ್ಕೆ ರಾಜ್ಯ ಸರ್ಕಾರ ತಾತ್ವಿಕ ಸಮ್ಮತಿ!

• ಉದಯವಾಹಿನಿ, ಬೆಂಗಳೂರು

ಈಗಾಗಲೇ ನಷ್ಟದಲ್ಲಿರುವ ಕೊಂಕಣ ರೈಲ್ವೆ ನಿಗಮವನ್ನು ಭಾರತೀಯ ರೈಲ್ವೆಯಲ್ಲಿ ವಿಲೀನಗೊಳಿಸಲು ರಾಜ್ಯ ಸರ್ಕಾರ ತಾತ್ವಿಕವಾಗಿ ಒಪ್ಪಿಗೆ ನೀಡಿದೆ. ಕೇರಳ, ಕರ್ನಾಟಕ, ಗೋವಾ ಮತ್ತು ಮಹಾರಾಷ್ಟ್ರ ಸಂಪರ್ಕಿಸುವ ಕೊಂಕಣ ರೈಲ್ವೆಯನ್ನು ಲಾಭಕ್ಕೆ ತರಲು ಸಾಧ್ಯವಾಗದೇ, ಆಧುನೀಕರಣ ಕಾರ್ಯವೂ ಸಾಧ್ಯವಾಗದೇ ಏಗುತ್ತಾ ಸಾಗುತ್ತಿರುವುದರಿಂದ ವಿಲೀನಕ್ಕೆ ಕೊಂಕಣ ರೈಲ್ವೆ ನಿಗಮವೂ ಸಜ್ಜಾಗಿದೆ.

ಕೊಂಕಣ ರೈಲ್ವೆ ನಿಗಮದಲ್ಲಿ ಕರ್ನಾಟಕ ಸರ್ಕಾರ ಶೇ 11.62 ರಷ್ಟು ಈಕ್ವಿಟಿ ಷೇರು ಹೊಂದಿದೆ.

ಕೊಂಕಣ ರೈಲ್ವೆ ನಿಗಮದಲ್ಲಿ ಕರ್ನಾಟಕ ಸರ್ಕಾರ ಶೇ 11.62 ರಷ್ಟು ಈಕ್ವಿಟಿ ಷೇರು ಹೊಂದಿದೆ. ಕೊಂಕಣ ರೈಲ್ವೆ ನಿಗಮ ಸ್ವತಂತ್ರವಾಗಿ ಕಾರ್ಯ ನಿರ್ವಹಿಸಲು ಮುಂದಿನ 15 ವರ್ಷಗಳಿಗೆ ?9,158 ಕೋಟಿ ಅಗತ್ಯವಿದೆ. ಇದಕ್ಕೆ ಕರ್ನಾಟಕ ತನ್ನ ಪಾಲನ್ನು ನೀಡಬೇಕು. ತನ್ನ ಪಾಲು ಹೂಡಿಕೆ

ಉದಯವಾಹಿನಿ ಚಿತ್ರ

ಮಾಡಲು ಸಾಧ್ಯವಾಗದೇ ಇದ್ದರೆ ಷೇರುಗಳನ್ನು ಭಾರತೀಯ ರೈಲ್ವೆ ಮಂತ್ರಾಲಯಕ್ಕೆ ಬಿಟ್ಟುಕೊಡುವ ಬಗ್ಗೆ ಪರಿಶೀಲನೆ ನಡೆಸಬಹುದು ಎಂದು ಕೊಂಕಣ ರೈಲ್ವೆ ನಿಗಮವು ಕರ್ನಾಟಕ ಸರ್ಕಾರಕ್ಕೆ ತಿಳಿಸಿದೆ.

ಇದಕ್ಕೆ ಪ್ರತಿಕ್ರಿಯಿಸಿರುವ ರಾಜ್ಯದ ಹಣಕಾಸು ಇಲಾಖೆ, ನಿಗಮದಿಂದ ಈಕ್ವಿಟಿ ಷೇರುಗಳ ಹಿಂಪಡೆಯುವಿಕೆ, ನಿಗಮದಿಂದ ಹೊರಬರಲು ಇರುವ ಉತ್ತಮ ಆಯ್ಕೆಗಳು ಹಾಗೂ ಇದಕ್ಕಾಗಿ ನಡೆಸಬೇಕಾದ ಮೌಲ್ಯಮಾಪನ ವಿಧಾನದ ಬಗ್ಗೆ ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯು ಕೊಂಕಣ ರೈಲ್ವೆ ನಿಗಮಕ್ಕೆ ಪತ್ರ ಬರೆಯಬೇಕು ಎಂದು ಸೂಚಿಸಿದೆ.

ಎಂ.ಬಿ.ಪಾಟೀಲ ಇತ್ತೀಚೆಗೆ ವಿಧಾನಸಭೆಯಲ್ಲಿ ಮಾಹಿತಿ

ಕೊಂಕಣ ರೈಲ್ವೆ ನಿಗಮದಿಂದ ಹೊರಬರುವ ಮತ್ತು ಭಾರತೀಯ ರೈಲ್ವೆಯಲ್ಲಿ ವಿಲೀನಗೊಳಿಸುವ ವಿಚಾರವಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವ ಎಂ.ಬಿ.ಪಾಟೀಲ ಇತ್ತೀಚೆಗೆ ವಿಧಾನಸಭೆಯಲ್ಲಿ ಮಾಹಿತಿ ನೀಡಿದ್ದರು.

ಕೊಂಕಣ ರೈಲ್ವೆ ನಿಗಮದಿಂದ ಹೊರಬರುವ ಮತ್ತು ಭಾರತೀಯ ರೈಲ್ವೆಯಲ್ಲಿ ವಿಲೀನಗೊಳಿಸುವ ವಿಚಾರವಾಗಿ ಪ್ರಸ್ತಾವನೆ ಸಲ್ಲಿಸುವಂತೆ ಕೋರಲಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಹಾಗೂ ಇದಕ್ಕಾಗಿ ನಡೆಸಬೇಕಾದ ಮೌಲ್ಯಮಾಪನ ವಿಧಾನದ ಬಗ್ಗೆ ಮೂಲಸೌಲಭ್ಯ ಅಭಿವೃದ್ಧಿ ಇಲಾಖೆಯು ಕೊಂಕಣ ರೈಲ್ವೆ ನಿಗಮಕ್ಕೆ ಪತ್ರ ಬರೆಯಬೇಕು ಎಂದು ಸೂಚಿಸಿದೆ.

ಪಿಎಂ ಕಿಸಾನ್ ಆ್ಯಪ್ ಹೆಸರಿನಲ್ಲಿ ವಂಚನೆ

• ಉದಯವಾಹಿನಿ, ಬೆಂಗಳೂರು

ದೇಶದಾದ್ಯಂತ ಸುಮಾರು ಎಂಟು ಕೋಟಿ ರೈತರು ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಿಂದ ಪ್ರಯೋಜನ ಪಡೆಯುತ್ತಿದ್ದರೆ, ಇದರ ಬೆನ್ನಲ್ಲೇ ನಕಲಿ ಪಿಎಂ ಕಿಸಾನ್ ಆ್ಯಪ್ ಮತ್ತೆ ಸಕ್ರಿಯವಾಗಿದೆ. ರೈತರನ್ನೇ ಗುರಿಯಾಗಿಸಿಕೊಂಡು ಪಿಎಂ ಕಿಸಾನ್ ಯೋಜನೆಯ ಮೊಬೈಲ್ ಅಪ್ಲಿಕೇಶನ್ ಎಂದು ಹೇಳಿಕೊಳ್ಳುವ ವಂಚನೆಯ ಲಿಂಕ್ ಅನ್ನು ಸೋಶಿಯಲ್ ಮೀಡಿಯಾದಲ್ಲಿ ಮತ್ತೆ ಸಕ್ರಿಯವಾಗಿ ಶೇರ್ ಆಗುತ್ತಿದ್ದು, ಈ ಲಿಂಕ್ ಅನ್ನು ಕ್ಲಿಕ್ ಮಾಡದಂತೆ ಪೊಲೀಸರು ರೈತರಿಗೆ ಎಚ್ಚರಿಕೆ ನೀಡಿದ್ದಾರೆ.

ಪ್ರಧಾನ ಮಂತ್ರಿ ಕಿಸಾನ್ ಯೋಜನೆಯ ಅಧಿಕೃತ ವೆಬ್‌ಸೈಟ್, ಆ್ಯಪ್ ಎಂದು ಹೇಳಿಕೊಂಡು ವಂಚಕರು ಎಪಿಕೆ ಲಿಂಕ್ ಅನ್ನು ಸಾಮಾಜಿಕ ಮಾಧ್ಯಮದಲ್ಲಿ ಹಂಚ

ವಾಜಪೇಯಿ ತತ್ತ್ವನಿಷ್ಠ ನಾಯಕ: ಕೇಂದ್ರ ಸಚಿವ ಸೋಮಣ್ಣ ಗುಣಗಾನ

ಮಾಜಿ ಪ್ರಧಾನಿ ದಿ.ಎ.ಬಿ.ವಾಜಪೇಯಿ ಅವರ 100ನೇ ಜನ್ಮದಿನದ ಅಂಗವಾಗಿ ಸುಶಾಸನ ದಿನ ಆಚರಣೆ ಸಮಾರಂಭ

• ಉದಯವಾಹಿನಿ ತುಮಕೂರು

ತತ್ತ್ವನಿಷ್ಠ ರಾಜಕಾರಣಿಯಾಗಿ ಹೆಸರಾದ ಅಟಲ್ ಬಿಹಾರಿ ವಾಜಪೇಯಿ ಅವರು ಭಾರತವನ್ನು ಸಂಪದ್ಭರಿತ ರಾಷ್ಟ್ರವನ್ನಾಗಿ ಮಾಡಲು ತಮ್ಮದೇ ಆದ ಕನಸು ಹೊಂದಿದ್ದರು. ಅವರು ಪ್ರಧಾನಿಯಾಗಿ ತಮ್ಮ ಕನಸಿನ ಭಾರತದ ಅಭಿವೃದ್ಧಿಗೆ ಪೂರಕ ಕಾರ್ಯಕ್ರಮಗಳನ್ನು ಜಾರಿಗೆ ತಂದು ದೇಶಕ್ಕೆ ದೊಡ್ಡ ಕೊಡುಗೆ ನೀಡಿದರು ಎಂದು ಕೇಂದ್ರ ಜಲಶಕ್ತಿ ಹಾಗೂ ರೈಲ್ವೆಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಹೇಳಿದರು.

ನಗರದ ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಮಾಜಿ ಪ್ರಧಾನಿ ದಿ.ಎ.ಬಿ.ವಾಜಪೇಯಿ ಅವರ 100ನೇ ಜನ್ಮದಿನದ ಅಂಗವಾಗಿ ಸುಶಾಸನ ದಿನ ಆಚರಣೆ ಸಮಾರಂಭದಲ್ಲಿ ಸಚಿವ ಸೋಮಣ್ಣ ವಾಜಪೇಯಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಗೌರವ ಸಮರ್ಪಿಸಿದರು. ಈ ವೇಳೆ ಮಾತನಾಡಿದ ಅವರು, ಈ ಮಹಾನ್ ನಾಯಕನ ಜನ್ಮ ದಿನಾಚರಣೆಯ ಸಂದರ್ಭದಲ್ಲಿ

ಶಾಸಕ ಜಿ.ಬಿ.ಜ್ಯೋತಿಗಣೇಶ್ ಮಾತನಾಡಿ, ಸುಭದ್ರ ಭಾರತಕ್ಕೆ ವಾಜಪೇಯಿ ಅವರು ನೀಡಿದ ಯೋಜನೆಗಳು, ಅವರ ದೂರದೃಷ್ಟಿ ಆಡಳಿತ ದೇಶದ ಮುನ್ನಡೆಗೆ ತಳಹದಿಯಾಗಿದೆ. ಅವರ ಸಂಕಲ್ಪವನ್ನು ಸಾಕಾರಗೊಳಿಸುವತ್ತಾ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ಹಲವಾರು ಯೋಜನೆಗಳನ್ನು ಅನುಷ್ಠಾನಕ್ಕೆ ತಂದು ಬಲಿಷ್ಠ ಭಾರತ ನಿರ್ಮಾಣಕ್ಕೆ ಕಾರ್ಯ ಪ್ರವೃತ್ತರಾಗಿದ್ದಾರೆ ಎಂದು ಹೇಳಿದರು.

ನಾವು ನಮ್ಮ ಕಾರ್ಯವೈಖರಿ ಹೇಗಿದೆ, ಅವರ ತಮ್ಮ ಆದರ್ಶಗಳನ್ನು ಪಾಲನೆ ಮಾಡುತ್ತಿದ್ದೇವೆಯೆ ಎಂದು ಚಿಂತನೆ ಮಾಡಬೇಕಾಗಿದೆ ಎಂದರು.

ದೇಶದ ಅಭಿವೃದ್ಧಿಗೆ ವಾಜಪೇಯಿ ಅವರು ಜಾರಿಗೆ ತಂದ ಗ್ರಾಮ ಸಡಕ್, ನದಿಗಳ ಜೋಡಣೆ, ದೇಶದ

ಉದಯವಾಹಿನಿ ಚಿತ್ರ

ಸರಳ, ಸಜ್ಜನಿಕೆಗೆ ಹರಾದ ಇವರು ವಿಶ್ವ ಕಂಡ ಶ್ರೇಷ್ಠ ಜನನಾಯಕರಾಗಿ ಹೆಸರಾಗಿದ್ದಾರೆ. ಸೂರ್ಯ, ಚಂದ್ರ ಇರುವವರೆಗೂ ವಾಜಪೇಯಿ ಅವರು ಭಾರತದಲ್ಲಿ ಇರುತ್ತಾರೆ

-ವಿ.ಸೋಮಣ್ಣ , ಸಚಿವ

ರೈತರ ಕಲ್ಯಾಣ, ಕೃಷಿ ಕ್ಷೇತ್ರದ ಕಾರ್ಯಕ್ರಮಗಳು ಪ್ರಧಾನಿ ನರೇಂದ್ರ ಮೋದಿಯವರ ವಿಕಸಿತ ಭಾರತ ಯೋಜನೆಗೆ ಭದ್ರ ಅಡಿಪಾಯವಾಗಿವೆ. ವಿದೇಶಗಳೊಂದಿಗೆ ಹೇಗೆ ಬಾಂಧವ್ಯ ಬೆಳೆಸಬೇಕು,

ಶಾಸಕ ಬಿ.ಸುರೇಶ್ ಗೌಡರು, ಅಪ್ಪಟ ದೇಶಪ್ರೇಮಿ, ಸಮರ್ಥ ಆಡಳಿತಗಾರರಾದ ವಾಜಪೇಯಿ ಅವರ ಕಾರ್ಯವೈಖರಿ ಯುವಜನರಿಗೆ ಮಾದರಿಯಾಗಿದೆ. ತಾವು ರಾಜ ಕಾರಣಕ್ಕೆ ಬರಲು ವಾಜಪೇಯಿ ಅವರೇ ಪ್ರೇರಣೆ ಎಂದು ತಿಳಿಸಿದರು.

ವಾಜಪೇಯಿ ಅವರ ಭಾವಚಿತ್ರಕ್ಕೆ ಪುಷ್ಪನಮನ

ಸಂಬಂಧ ಹೇಗೆ ಮಾಡಬೇಕು ಎಂಬ ಬಗ್ಗೆ ವಾಜಪೇಯಿ ಅವರು ವಿಶ್ವಕ್ಕೆ ಸಂದೇಶ ನೀಡಿದರು.

ವಿಧಾನ ಪರಿಷತ್ ಸದಸ್ಯ ಕೇಶವ ಪ್ರಸಾದ್ ಮಾತನಾಡಿ, ಗ್ವಾಲಿಯರ್‌ನಲ್ಲಿ 1924ರಲ್ಲಿ ಜನಿಸಿದ ವಾಜಪೇಯಿ ಅವರು ವಿದ್ಯಾರ್ಥಿ ದಿಸೆಯಲ್ಲೇ ದೇಶಾಭಿಮಾನವನ್ನು ಮೈಗೂಡಿಸಿಕೊಂಡು ಬೆಳೆದವರು. ಕ್ವಿಟ್ ಇಂಡಿಯಾ ಚಳವಳಿಯಲ್ಲಿ ಭಾಗ ವಹಿಸಿದ್ದ ಇವರು, ರಾಷ್ಟ್ರೀಯ ಸ್ವಯಂ ಸೇವಕ ಸಂಘದಲ್ಲಿ ಸಕ್ರಿಯರಾಗಿದ್ದರು.

ಅಟಲ್ ಎಂದರೆ ಗುರಿ ಸಾಧಿಸುವವ, ಬಿಹಾರಿ ಎಂದರೆ ವಿವೇಚನಾಯುಕ್ತ, ಬಿಹಾರಿ ಎಂಬುದು ಅವರ ಕುಟುಂಬದ ಹೆಸರು ವಾಜಪೇಯಿ ಅವರು ತಮ್ಮ ಹೆಸರಿಗೆ ತಕ್ಕಂತೆ ನಡೆದುಕೊಂಡರು. ತಮ್ಮ ಬುದ್ಧಿ ಸಾಮರ್ಥ್ಯದಿಂದ ಜಗತ್ತನ್ನೇ ಗೆದ್ದ ವ್ಯಕ್ತಿತ್ವ ಅವರದ್ದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಮಾಜಿ ಸದಸ್ಯ ಡಾ.ಎಂ.ಆರ್.ಹುಲಿನಾಯ್ಕರ್, ಜಿಲ್ಲಾ ಬಿಜೆಪಿ ಉಪಾಧ್ಯಕ್ಷೆ ನಾಗರತ್ನಮ್ಮ, ನಗರ ಬಿಜೆಪಿ ಅಧ್ಯಕ್ಷ ಟಿ.ಹೆಚ್.ಹನುಮಂತರಾಜು, ರೈತಮೋರ್ಚಾ ನಗರ ಅಧ್ಯಕ್ಷ ಸತ್ಯಮಂಗಲ ಜಗದೀಶ್ ಸೇರಿದಂತೆ ವಿವಿಧ ಮೋರ್ಚಾಗಳ ಪದಾಧಿಕಾರಿಗಳು ಭಾಗವಹಿಸಿದ್ದರು.

ಬಾಲನ್ಯಾಯ ಕಾಯ್ದೆ, ಪೋಕ್ಸ್ ತರಬೇತಿ

• ಉದಯವಾಹಿನಿ ಪಾವಗಡ

ವಿವಿಧ ಇಲಾಖೆಗಳು ಮಕ್ಕಳ ಹಕ್ಕುಗಳನ್ನು ರಕ್ಷಿಸುವಲ್ಲಿ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಕೆ.ಟಿ. ತಿಪ್ಪೇಸ್ವಾಮಿ ತಿಳಿಸಿದರು. ಪಟ್ಟಣದಲ್ಲಿ ನಡೆದ ಬಾಲ್ಯವಿವಾಹ ಹಾಗೂ ಭ್ರೂಣಹತ್ಯೆ ನಿಷೇಧ, ಬಾಲನ್ಯಾಯ ಕಾಯ್ದೆ ಪೋಕ್ಸ್ ಕಾಯ್ದೆ, ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ ಕುರಿತ ತರಬೇತಿ ಉದ್ಘಾಟನಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಕ್ಕಳ ಹಕ್ಕುಗಳನ್ನು ರಕ್ಷಿಸಲು ಸರ್ಕಾರದ ವಿವಿಧ ಇಲಾಖೆಗಳು ಪರಸ್ಪರ ಸಹಕಾರ, ಸಮನ್ವಯತೆಯಿಂದ ಕೆಲಸ ಮಾಡುವ ಅಗತ್ಯವಿದೆ. ಮಕ್ಕಳ ಪರವಾದ ಕಾನೂನು ಮತ್ತು ನಿಯಮಗಳ ಜಾರಿಯು ಮಕ್ಕಳಿಗೆ ನ್ಯಾಯ, ಸುರಕ್ಷತೆಯನ್ನು ಕಲ್ಪಿಸುತ್ತದೆ. ಪ್ರತಿಯೊಬ್ಬರೂ ಮಕ್ಕಳ ಹಕ್ಕುಗಳ ರಕ್ಷಣೆಗೆ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು ಎಂದರು. ಮಕ್ಕಳ ಹಕ್ಕುಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಲು ರಾಜ್ಯ, ಜಿಲ್ಲೆ ತಾಲ್ಲೂಕು, ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಹಲವು ವ್ಯವಸ್ಥೆಗಳಿವೆ. ಆದಾಗ್ಯೂ ಮಕ್ಕಳು ಸಾಕಷ್ಟು ಸಮಸ್ಯೆಗಳಿಗೆ ಒಳಗಾಗುತ್ತಿದ್ದಾರೆ.

ಉದಯವಾಹಿನಿ ಚಿತ್ರ

ಹೀಗಾಗಿ ಇಲಾಖೆಗಳು ಮತ್ತಷ್ಟು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕಾದ ಅಗತ್ಯವಿದೆ. ಕಾಯ್ದೆಗಳ ಅನುಷ್ಠಾನಾಧಿಕಾರಿಗಳಿಗೆ ಮಕ್ಕಳ ಪರವಾದ ಕಾಯ್ದೆ ನಿಯಮಗಳ ಬಗ್ಗೆ ಆಯೋಗ ಸಾಕಷ್ಟು ತರಬೇತಿಗಳನ್ನು ನೀಡುತ್ತಿದೆ ಎಂದರು. ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಜಾನಕಿರಾಮ್ ಮಾತನಾಡಿ, ಮಕ್ಕಳ ಹಕ್ಕುಗಳನ್ನು ರಕ್ಷಿಸುವ ಸಲುವಾಗಿ ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಇಲಾಖೆ ಸಾಕಷ್ಟು ಕ್ರಮ ಕೈಗೊಂಡಿದೆ.

ಎಲ್ಲಾ ಪಂಚಾಯಿತಿಗಳಲ್ಲಿ ಮಕ್ಕಳ ಹಕ್ಕುಗಳ ಗ್ರಾಮಸಭೆ ಆಯೋಜಿಸುತ್ತಿದೆ. ಓದುವ ಬೆಳಕು ಕಾರ್ಯಕ್ರಮ ಜಾರಿಗೊಳಿಸಿದೆ. ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಮಹಿಳೆಯರು ಮತ್ತು ಮಕ್ಕಳ ರಕ್ಷಣಾ ಕಾವಲು ಸಮಿತಿಗಳನ್ನು ರಚಿಸಿದೆ ಎಂದರು.

ಶ್ರೀ ಮಲೆ ಮಾದಪ್ಪನ ಸ್ವಾಮಿ ಸನ್ನಿಧಿಯಲ್ಲಿ ಧನುರ್ಮಾಸದ ವಿಶೇಷ

• ಉದಯವಾಹಿನಿ ಹನೂರು

ಶ್ರೀ ಮಲೆ ಮಹದೇಶ್ವರ ಸ್ವಾಮಿ ಸನ್ನಿಧಾನದಲ್ಲಿ ಧನುರ್ಮಾಸದ ಪ್ರಯುಕ್ತ ಪ್ರತಿದಿನ ಮುಂಜಾನೆಯ 3 ಗಂಟೆಯಿಂದ 6 ಗಂಟೆವರೆಗೆ ವಿಶೇಷ ಪೂಜಾ ಅಭಿಷೇಕ ಹಾಗೂ ಉತ್ಸವಮೂರ್ತಿಯೊಂದಿಗೆ ಬೇಡಗಂಪಣ್ಣರ ಅರ್ಚಕರಿಂದ ಭಜನೆ ಕಾರ್ಯಕ್ರಮ ವಿಶೇಷ ಭಜನೆ ಉತ್ಸವವು ಸರದಿ ಅರ್ಚಕರಿಂದ ಷಷ್ಟಿ ಹಬ್ಬದ ದಿನದಿಂದ ಸಂಕ್ರಾಂತಿ ಹಬ್ಬದ ದಿನದವರೆಗೂ ಪ್ರತಿದಿನ ಬೇಡಗಂಪಣ್ಣರ ಅರ್ಚಕರು ವಿಶೇಷವಾಗಿ ನೆರವೇರಿಸುತ್ತಾರೆ.

ಮಹದೇಶ್ವರ ಬೆಟ್ಟದಲ್ಲಿ ಪ್ರತಿದಿನ ತ್ರಿಕಾಲ ಪೂಜೆಯಲ್ಲಿ ಮುಂಜಾನೆಯಲ್ಲಿ ಧನುರ್ಮಾಸದ ಪೂಜೆ ಹಾಗೂ ಪ್ರಾಃಕಾಲದ ಬೆಳಗಿನಜಾವ ಎರಡು ಪೂಜೆ ನಡೆಯುತ್ತದೆ, ಹಾಗೂ ಬಸವ ವಾಹನ ಸಮೇತರಾಗಿ ಪಾರ್ವತಿ ಪರಮೇಶ್ವರ (ಶಿವ ಪಾರ್ವತಿ)ರಿಗೆ ವಿಶೇಷ ಧೂಪಾದೀಪದಾರತಿಗಳೊಂದಿಗೆ ಪೂಜಿಸಿ ಸನ್ನಿಧಾನದ ಒಳ ಆವರಣದಲ್ಲಿ ಮೂರು ಪ್ರದಕ್ಷಿಣೆ ಹಾಕುವುದರೊಂದಿಗೆ

ಉದಯವಾಹಿನಿ ಚಿತ್ರ

ಪ್ರತಿದಿನ ತಳಿಗೆ ಮನೆ ಪ್ರಸಾದ

ಮಹದೇಶ್ವರನ ಭಕ್ತಿಗೀತೆಗಳೊಂದಿಗೆ ಹಾಡುವುದರ ಮೂಲಕ ಪ್ರತಿದಿನ ಧನುರ್ಮಾಸದ ವಿಶೇಷ ಪೂಜೆಯನ್ನು ಮಾಡುತ್ತಾರೆ.

ಉದ್ದಿನಬೇಳೆದಿಂದ ಅಪ್ಪಳ, ಮೊಸರನ್ನ, ಕುಂಬಳಕಾಯಿ ಪಲ್ಯ, ಮೆಣಸಿನ ಸಾರು, ಅಣ್ಣೆ ಸೊಪ್ಪಿನ ಸಾರು, ಸೀಗೆ ಸೊಪ್ಪಿನ ಸಾರು, ಕಡಲೆ ಹುಳಿ, ಹೆಸರುಬೇಳೆ ಸಾರು, ಉದ್ದಿನಬೇಳೆ ಸಾರು, ಉಪ್ಪಾರು, ಮಹದೇಶ್ವರರಿಗೆ ಬಹಳ ಇಷ್ಟವಾದ ಶಕೆವಡೆ, ಮೆಣಸಿನ ಅನ್ನ, ಕೆಂಪಕ್ಕಿ ಅನ್ನ ಬಿದರಕ್ಕೆ ಅನ್ನ, ಬರಗನ ಅಕ್ಕಿ ಅನ್ನ, ಧನುರ್ಮಾಸ ಕಾಲದಲ್ಲಿ ಮುಂಜಾನೆ ಪ್ರತಿನಿತ್ಯ ವಿವಿಧ ಬಗೆ ಬಗೆಯ ಪ್ರಸಾದ ಮಾಡಲಾಗುತ್ತದೆ.

ಮುಂಜಾನೆ ವಿಶೇಷ ಅಭಿಷೇಕ

ಶ್ರೀ ಮಲೆ ಮಹದೇಶ್ವರರಿಗೆ ಧನುರ್ಮಾಸದ ಆಹಾರ ಪದ್ಧತಿ ವಿಶೇಷವಾಗಿ ಇರುತ್ತದೆ ಶಕ್ಯಶೋಪಾಚಾರ (ಸಸ್ಯ ಶಾಖಾಹಾರಿ ಆಹಾರ ಪದ್ಧತಿ) ಪೂಜೆಯಲ್ಲಿ ಸ್ವಾಮಿಯವರಿಗೆ ಮುಂಜಾನೆ ವಿಶೇಷ ಅಭಿಷೇಕ ನೈವೇದ್ಯ ಪ್ರಸಾದಗಳೊಂದಿಗೆ ಕೈಂಕಾರ್ಯ ನಡೆಯುತ್ತದೆ, ಪ್ರತಿದಿನ ತಳಿಗೆ ಮನೆ ಪ್ರಸಾದ ಮಾಡಲಾಗುತ್ತದೆ, ಮಾಗಳಿ ಬೇರು ಉಪ್ಪಿನಕಾಯಿ, ನೊರೆಗೆಣಸು ಉಪ್ಪಿನಕಾಯಿ, ಬಾಳೆ ದಿಂಡಿನ ಉಪ್ಪಿನಕಾಯಿ ಹೇರಳಿಕಾಯಿಯ ಉಪ್ಪಿನಕಾಯಿ, ಅಮಟೆಕಾಯಿ ಉಪ್ಪಿನಕಾಯಿ, ಹೀಗೆ ವಿವಿಧ ಬಗೆಯ ಉಪ್ಪಿನಕಾಯಿ ಮಾಡಲಾಗುತ್ತದೆ.

ದುರ್ಗಾ ಲಕ್ಷ್ಮಿ ದೇವಾಲಯ ಲೋಕಾರ್ಪಣೆ

• ಉದಯವಾಹಿನಿ, ಸುಂಟಿಕೊಪ್ಪ

ಇಲ್ಲಿನ ಶ್ರೀ ಪುರಂ ಅಯ್ಯಪ್ಪ ಸ್ವಾಮಿ ಕ್ಷೇತ್ರದ ಆವರಣದಲ್ಲಿ ನೂತನವಾಗಿ ನಿರ್ಮಿಸಿರುವ ದುರ್ಗಾ ಲಕ್ಷ್ಮಿ ದೇವಸ್ಥಾನದ ಪ್ರತಿಷ್ಠಾಪನಾ ಅಷ್ಟ ಬಂಧ ಬ್ರಹ್ಮ ಕಲಶೋತ್ಸವ ನೂರಾರು ಭಕ್ತರ ಸಮ್ಮುಖದಲ್ಲಿ ಬುಧವಾದ ಶ್ರದ್ಧಾಭಕ್ತಿಯಿಂದ ಲೋಕಾರ್ಪಣೆಗೊಂಡಿತು. ಬುಧವಾರ ಬೆಳಿಗ್ಗೆ 6ಕ್ಕೆ ಗಣಪತಿ ಹೋಮದೊಂದಿಗೆ ಪ್ರಾರಂಭವಾದ ವೈದಿಕ ಮತ್ತು ಧಾರ್ಮಿಕ ಕೈಂಕರ್ಯಗಳು, ನಂತರ ಆದಿವಾಹನ ವಿಡರ್ತಿ ಪೂಜೆ, ಅಯ್ಯಪ್ಪಸ್ವಾಮಿಯ ಬ್ರಹ್ಮಕಲಶ ಪೂಜೆ, ಭಗವತಿಯ ಬ್ರಹ್ಮಕಲಶ ಪೂಜೆ, ಗಣಪತಿಯ ಬ್ರಹ್ಮಕಲಶ ಪೂಜೆ, ಗಣಪತಿಯ ಬ್ರಹ್ಮಬಕಲಶಾಭಿಷೇಕ, ಭಗವತಿಯ ಪ್ರಸಾದ ಪ್ರತಿಷ್ಠೆಯ ಬಳಿಕ ಕೇರಳದ ತಳಿಪರಂಬು ಕಾಳಾ ಫಾಟ್ ಇಲ್ಲಂ ಮಧುಸೂದನ್ ತಂತ್ರಿ ಅವರ ನೇತೃತ್ವದ ತಂಡ ವಿವಿಧ ವಿಶೇಷ ಪೂಜೆಯೊಂದಿಗೆ ಶುಭ ಮುಹೂರ್ತದ ಕುಂಭ ಲಗ್ನದಲ್ಲಿ ದುರ್ಗಾಲಕ್ಷ್ಮಿದೇವಿಯ ಪ್ರತಿಷ್ಠಾಪನೆ ನೆರವೇರಿಸಿದರು. ನಿದ್ರಾಕಲಶಾಭಿಷೇಕ, ಬ್ರಹ್ಮಕಲಶಾಭಿಷೇಕ, ಅಯ್ಯಪ್ಪ ಸ್ವಾಮಿಯ ಕಲಶಾಭಿಷೇಕ ನಡೆಯಿತು. ತಿಂಗಳ ಹಿಂದೆ 20 ಲಕ್ಷ ವೆಚ್ಚದಲ್ಲಿ ದೇವಾಲಯ ನಿರ್ಮಾಣಗೊಂಡಿದ್ದು, ಪುತ್ತೂರಿನ ಜಗನಿವಾಸ್ ರಾವ್ ಅವರು ಭೂಮಿಪೂಜೆಯ ಜೊಗೆ ಶಿಲಾನ್ಯಾಸ ನೆರವೇರಿಸಿದ್ದರು. ಪುತ್ತೂರಿನ ಶಿಲ್ಪಿಗಳಾದ ಕೃಷ್ಣಪ್ರಸಾದ್ ಅವರ ನೇತೃತ್ವದಲ್ಲಿ ದೇವಾಲಯದ ಕೆತ್ತನೆ ಕೆಲಸ ಪೂರ್ಣಗೊಳಿಸಿದ್ದರು.

ಉದಯವಾಹಿನಿ ಚಿತ್ರ

ಶ್ರೀ ದೇಗುಲ ಮಠದ ಮುಮ್ಮಡಿ ನಿರ್ವಾಣ ಶ್ರೀ ಆಶೀರ್ವಾದ ಪಡೆದ ವಿ. ಸೋಮಣ್ಣ

• ಉದಯವಾಹಿನಿ, ಕನಕಪುರ

ಶ್ರೀ ಕ್ಷೇತ್ರ ದೇಗುಲಮಠಕ್ಕೆ ಶ್ರೀಮಠದ ಹಳೆ ವಿದ್ಯಾರ್ಥಿ ಹಾಗೂ ಕೇಂದ್ರ ಸರ್ಕಾರದ ರೈಲ್ವೆಖಾತೆ ಮತ್ತು ಜಲ ಶಕ್ತಿ ರಾಜ್ಯ ಸಚಿವರಾದ ಸನ್ಮಾನ್ಯ ವಿ ಸೋಮಣ್ಣನವರು ಕುಟುಂಬ ಸಮೇತರಾಗಿ ಆಗಮಿಸಿ ಹಿರಿಯ ಪರಮಪೂಜ್ಯ ಡಾ. ಶ್ರೀ ಶ್ರೀ ಮುಮ್ಮಡಿ ನಿರ್ವಾಣಮಹಾಸ್ವಾಮಿಗಳವರು ಹಾಗೂ ಕಿರಿಯ ಪರಮಪೂಜ್ಯ ಶ್ರೀ ಶ್ರೀ ಚನ್ನಬಸವ ಮಹಾಸ್ವಾಮಿಗಳವರ ದಿವ್ಯ ದರ್ಶನ ಆಶೀರ್ವಾದ ಪಡೆದರು ಮತ್ತು ಗದ್ದುಗೆ ಅಭಿಷೇಕ ಪೂಜೆಗಳನ್ನು ಸಲ್ಲಿಸಿ ಗುರು ಶ್ರೀರಕ್ಷೆಯನ್ನು ಪಡೆದರು ಈ ಸಂದರ್ಭದಲ್ಲಿ ಧರ್ಮಪತ್ನಿ ಶೈಲಜಾ ಸೋಮಣ್ಣನವರು ಮತ್ತು ಸಿಟಿಓ ರಾಜೇಂದ್ರ ಕುಮಾರ್ ರವರು ಹಾಗೂ ವಿ ಸೋಮಣ್ಣ ಪ್ರತಿಷ್ಠಾನದ ಕಾರ್ಯದರ್ಶಿ ಪಾಲನೇತ್ರರವರು ಉಪಸ್ಥಿತರಿದ್ದರು.

ಉದಯವಾಹಿನಿ ಚಿತ್ರ

ನಗರದಲ್ಲಿ ಸಡಗರ ಸಂಭ್ರಮದ ಕ್ರಿಸ್‌ಮಸ್

• ಉದಯವಾಹಿನಿ ಕೋಲಾರ

ನಗರದಲ್ಲಿ ಪ್ರತಿವರ್ಷದಂತೆ ಈ ವರ್ಷವು ಕ್ರಿಸ್‌ಮಸ್ ಹಬ್ಬದ ಪ್ರಯುಕ್ತ ಸಂತ ಮೇರಿಸ್ ಹಾಗೂ ಮೆಥೋಡಿಸ್ಟ್ ಚರ್ಚ್ ಎರಡು ಚರ್ಚ್‌ಗಳನ್ನು ವಿಶೇಷವಾಗಿ ಸಿಂಗರಿಸಿದ್ದು ಸಡಗರ ಸಂಭ್ರಮದ ವಾತವರಣವು ನಿರ್ಮಾಣವಾಗಿದೆ. ಕ್ರೈಸ್ತನ ಸಮುದಾಯದ ಕ್ರಿಸ್ತಿಯನ್‌ರು ಹೊಸ ಉಡುಪುಗಳನ್ನು ತೊಟ್ಟು ಶ್ರದ್ಧಾ ಭಕ್ತಿಯಿಂದ ಚರ್ಚ್‌ಗೆ ಆಗಮಿಸಿ ಕ್ರಿಸ್ತ ಪ್ರಭುವಿನಲ್ಲಿ ಸಾಮೂಹಿಕ ಪ್ರಾರ್ಥನೆಯಲ್ಲಿ ಭಾಗವಹಿಸಿದ್ದರು.

ಕ್ರಿಸ್ ಮಸ್ ಹಬ್ಬದ ಪ್ರಯುಕ್ತ ಇತರೆ ಸಮುದಾಯದವರು ಚರ್ಚ್‌ಗಳಿಗೆ ಚಾಪಲ್‌ಗಳಿಗೆ ತೆರಳಿ ಏಸು ಪ್ರಭುವಿನ ಬೈಬಲ್ ಸಂದೇಶಗಳನ್ನು ಹಾಡುಗಳನ್ನು ಹಾಡುವ ಮೂಲಕ ಪ್ರಾರ್ಥನೆ ಸಲ್ಲಿಸಿದರು. ಹಬ್ಬದ ಸಡಗರದಲ್ಲಿ ಪಾಲ್ಗುಂಡು ತಮ್ಮ ಸ್ನೇಹಿತರಿಗೆ ನೆರೆಹೊರೆಯವರಿಗೆ ಶುಭಾಶಯಗಳನ್ನು ಕೋರಿದರು, ತಮ್ಮ ಮನೆಗಳಿಗೆ ಆಹ್ವಾನಿಸಿ ವಿಶೇಷವಾದ ಭೋಜನ ಹಾಗೂ ನೆನಪಿನ ಕಾಣಿಕೆ ಗಳನ್ನು ನೀಡಿ ಸಂಭ್ರಮಿಸಿದರು, ಕ್ರಿಸ್‌ಮಸ್ ಹಬ್ಬದ ಪ್ರಯುಕ್ತ ಸಮುದಾಯದ ಯುವಕರು ಕಳೆದ ಒಂದು ವಾರದಿಂದ

ಉದಯವಾಹಿನಿ ಚಿತ್ರ

ಸಕಲ ಸಿದ್ದತೆಗಳನ್ನು ಮಾಡಿ ಕೊಂಡಿದ್ದರು.

ಹುಲ್ಲುಕಡ್ಡಿಗಳ ಕುಟೀರಗಳನ್ನು ನಿರ್ಮಿಸಿ ಏಸು ಪ್ರಭುವಿನ ಜೀವನದ ಸಂದೇಶಗಳನ್ನು ಬಿಂಬಿಸುವಂತೆ ಮಾಡಿದ್ದಾರೆ. ಬೆತ್ಲಹೇಮನ ಕುರಿದೊಡ್ಡಿ, ಮರಿಯಮ್ಮಳು ಏಸುವಿಗೆ ಜನ್ಮ , ಏಸು ಪ್ರಭು ಕುರಿ ಕಾಯುವವರಿಗೆ ನೀಡಿದ ಸಂದೇಶಗಳು ಸೇರಿದಂತೆ ಅನೇಕ ಚಿತ್ರಗಳ ಮೂಲಕ ಏಸುವಿನ ಜೀವನ ಚರಿತ್ರೆಯನ್ನು ಬಿಂಬಿಸಿರುವುದು ವಿಶೇಷವಾಗಿತ್ತು ಬಣ್ಣ ಬಣ್ಣದ ನಕ್ಷತ್ರಗಳು, ದೀಪಾಲಂಕರ, ಕ್ರಿಸ್‌ಮಸ್ ಟ್ರೀ ಗಿಡಗಳು ಹಾಗೂ ಸುಂದವಾದ ಹೂಗಿಡಗಳ ಅಲಂಕಾರದ ಮೂಲಕ ಸಾರ್ವಜನಿಕರನ್ನು ಆಕರ್ಷಿಸುವಂತೆ ಮಾಡಿದ್ದರು.

ಕಾಡು ಪ್ರಾಣಿಗಳ ದಾಂಗುಡಿ ನಡುವೆಯೂ ರೇಷ್ಮೆ ಕೃಷಿ

ಉದಯವಾಹಿನಿ ಚಿತ್ರ

• ಉದಯವಾಹಿನಿ ಹಾರೋಹಳ್ಳಿ

ಒಂದೆಡೆ ಕಾಡು ಪ್ರಾಣಿಗಳ ಹಾವಳಿ, ಮತ್ತೊಂದೆಡೆ ರೇಷ್ಮೆ ಬೆಳೆ ಏರಿಳಿತ. ಇನ್ನೊಂದೆಡೆ ಬೆಳೆಗೆ ಹಲವು ರೋಗಗಳ ಕಾಟ. ಹೀಗೆ ಸಾಲು ಸಾಲು ಸವಾಲುಗಳನ್ನು ಮೆಟ್ಟಿ ನಿಂತು ರೇಷ್ಮೆ ಬೆಳೆಯಲ್ಲಿ ಬದುಕು ಹಸನಾಗಿಸಿಕೊಂಡವರು ರೈತ ಕೆಂಪೇಗೌಡ, ಹಾರೋಹಳ್ಳಿ ತಾಲ್ಲೂಕಿನ ತಟ್ಟೆಕೆರೆ ಗ್ರಾಮದ ಇವರು ಇತರರಿಗೆ ಮಾದರಿ ಎನಿಸಿಕೊಂಡಿದ್ದಾರೆ.

ಆನೆಗಳ ಹಾವಳಿ ಮೆಟ್ಟಿ ನಿಂತರು: ಕೆಂಪೇಗೌಡ ಅವರ ಜಮೀನಿನ ಬಳಿಯೇ ಬನ್ನೇರುಘಟ್ಟ ಅರಣ್ಯ ಪ್ರದೇಶ ಹಾದುಹೋಗಿದೆ. ಆಗಾಗ್ಗೆ ಆನೆಗಳು ಸೇರಿದಂತೆ ಇತರ ಪ್ರಾಣಿಗಳು ದಾಂಗುಡಿ ಇಟ್ಟು ಬೆಳೆಗಳನ್ನು ತಿಂದು ಹಾಕುತ್ತಿದ್ದವು. ಹಲವು ಬಾರಿ ಬೆಳೆ ಕಳೆದುಕೊಂಡ ಕೆಂಪೇಗೌಡ ಅವರು, ವಿವಿಧ ಇಲಾಖೆ ಅಧಿಕಾರಿಗಳ ಸಲಹೆ ಪಡೆದು ಜಮೀನಿನಲ್ಲಿ ಸೋಲಾರ್

**ಅಪ್ಪನಿಂದ ಸ್ಫೂರ್ತಿ ಪಡೆದಿರುವ ರೈತ ಕೆಂಪೇಗ

ಅಂತರಾಳದಿಂದ... EDITORIAL

ಬಲಾಢ್ಯರ ನಿಯಂತ್ರಣದಲ್ಲಿ ಕಾರ್ಯಾಂಗ

2018ರಿಂದ 2022ರವರೆಗೆ ಭಾರತೀಯ ಆಡಳಿತ ಸೇವೆ ಅಂದರೆ ಐಎಎಸ್ ಮತ್ತು ಭಾರತೀಯ ಪೊಲೀಸ್ ಸೇವೆಗೆ ನೇಮಕಗೊಂಡ 1,553 ಜನರಲ್ಲಿ ಕನಿಷ್ಠ 46.15 ಶೇಕಡ ಜನರು ಸಾಮಾನ್ಯ ವರ್ಗಕ್ಕೆ ಅಂದರೆ ಮೇಲ್ಜಾತಿಗೆ ಸೇರಿದವರು ಎನ್ನುವ ಅಂಶವನ್ನು ಕೇಂದ್ರ ಸರಕಾರದ ಅಂಕಿಅಂಶಗಳು ಬಹಿರಂಗ ಪಡಿಸಿವೆ. ಉಳಿದಂತೆ 29.4 ಶೇ.ಜನರು ಹಿಂದುಳಿದ ವರ್ಗಕ್ಕೆ ಸೇರಿದವರಾಗಿದ್ದಾರೆ. ಶೇ. 16.33ರಷ್ಟು ಪರಿಶಿಷ್ಟ ಜಾತಿಗೆ ಮತ್ತು ಶೇ. 7.83ರಷ್ಟು ಪರಿಶಿಷ್ಟ ಪಂಗಡಕ್ಕೆ ಸೇರಿದ್ದಾರೆ. ಸಂಸದರೊಬ್ಬರು ಕೇಳಿದ ಪ್ರಶ್ನೆಗೆ ಉತ್ತರಿಸುತ್ತಾ ಸಚಿವ ಜಿತೇಂದ್ರ ಸಿಂಗ್ ಮೇಲಿನ ಅಂಕಿಅಂಶಗಳನ್ನು ಬಹಿರಂಗಪಡಿಸಿದ್ದಾರೆ. 2018ರಿಂದ 2022ರವರೆಗಿನ ಅವಧಿಯಲ್ಲಿ 763 ಅಧಿಕಾರಿಗಳು ನೇಮಕಗೊಂಡಿದ್ದಾರೆ. ಇವರಲ್ಲಿ 382 ಐಎಎಸ್ ಮತ್ತು 381 ಐಪಿಎಸ್ ಅಧಿಕಾರಿಗಳು ಸಾಮಾನ್ಯ ವರ್ಗಕ್ಕೆ ಸೇರಿದ್ದಾರೆ ಎನ್ನುವುದು ಅವರು ನೀಡಿದ ಮಾಹಿತಿಯಿಂದ ಬೆಳಕಿಗೆ ಬಂದಿದೆ. 2022ರಲ್ಲಿ ಸಾಮಾನ್ಯ ವರ್ಗದಿಂದ 75 ಮಂದಿ, ಒಬಿಸಿಯಿಂದ 45 ಮಂದಿ ಐಎಎಸ್‌ಗೆ ಆಯ್ಕೆಯಾಗಿದ್ದರೆ, 29 ಮಂದಿ ಎಸಿಗೆ ಮತ್ತು 13 ಮಂದಿ ಎಸ್‌ಟಿ ಸಮುದಾಯಕ್ಕೆ ಸೇರಿದವರಾಗಿದ್ದಾರೆ. ಶೇಕಡವಾರು ಅತಿ ಕಡಿಮೆ ಸಮುದಾಯವೆಂದು ಗುರುತಿಸಲ್ಪಡುವ ಸಾಮಾನ್ಯ ವರ್ಗ ಈ ದೇಶದ ಅತ್ಯುನ್ನತ ಹುದ್ದೆಯೆಂದು ಗುರುತಿಸಲ್ಪಟ್ಟಿರುವ ಐಎಎಸ್ ಮತ್ತು ಐಪಿಎಸ್‌ಗಳಲ್ಲಿ ಅತ್ಯಧಿಕವಾಗಿ ಗುರುತಿಸಲ್ಪಟ್ಟಿರುವುದು ಏನನ್ನು ಹೇಳುತ್ತದೆ? ಈ ದೇಶದ ಆಡಳಿತ ಚುಕ್ಕಾಣಿ ಇನ್ನೂ ಬಲಾಢ್ಯ ವರ್ಗದಿಂದ ದುರ್ಬಲವರ್ಗಕ್ಕೆ ಹಸ್ತಾಂತರವಾಗಿಲ್ಲ ಎನ್ನುವುದನ್ನು ತಾನೆ 2022ರಲ್ಲಿ ಐಪಿಎಸ್ ಹುದ್ದೆಗೆ ಸಾಮಾನ್ಯ ವರ್ಗದಿಂದ 83 ಮಂದಿ ಆಯ್ಕೆಯಾಗಿದ್ದರೆ ಒಲಿಸಿಯಿಂದ 53 ಮಂದಿ ಮತ್ತು ಎಸ್‌ಸಿ ಸಮುದಾಯದಿಂದ 31 ಮತ್ತು ಎಸ್‌ಟಿ ಸಮುದಾಯದಿಂದ 13 ಮಂದಿ ಆಯ್ಕೆಯಾಗಿದ್ದಾರೆ.

ಕರ್ನಾಟಕದಲ್ಲಿ 314 ಐಎಎಸ್ ಅಧಿಕಾರಿ ಹುದ್ದೆಗಳಿವೆ. ಅವುಗಳಲ್ಲಿ 273 ಹುದ್ದೆಗಳು ಭರ್ತಿಯಾಗಿದ್ದು, 41 ಹುದ್ದೆಗಳು ಖಾಲಿ ಉಳಿದಿವೆ. 224 ಹುದ್ದೆಗಳಲ್ಲಿ 193 ಹುದ್ದೆಗಳನ್ನು ಭರ್ತಿ ಮಾಡಲಾಗಿದ್ದು 31 ಹುದ್ದೆಗಳು ಖಾಲಿ ಬಿದ್ದಿವೆ ಎನ್ನುವ ಅಂಶವನ್ನೂ ಈ ಸಂದರ್ಭದಲ್ಲಿ ಸಚಿವರು ತಿಳಿಸಿದ್ದಾರೆ.



ಈ ದೇಶದಲ್ಲಿ ಜನಪರ ಆಡಳಿತ ಯಾಕೆ ಕಷ್ಟ ಎನ್ನುವ ಪ್ರಶ್ನೆಗೆ ನೀಡಿದ ಉತ್ತರದಂತಿದೆ ಈ ಅಂಕಿಅಂಶಗಳು, ಜನಪ್ರತಿನಿಧಿಗಳು ಈ ದೇಶವನ್ನು ಆಳುತ್ತಿದ್ದಾರೆ ಎನ್ನುವುದು ಈ ದೇಶದ ಪಾಲಿನ ಬಹಿರಂಗ ಸತ್ಯವಾಗಿದ್ದರೆ ಅಂತಿಮವಾಗಿ ಅಧಿಕಾರ ಚಲಾಯಿಸುವುದು ಕಾರ್ಯಾಂಗ ಎನ್ನುವುದು ಅಂತರಂಗದ ಸತ್ಯವಾಗಿದೆ. ಸಂವಿಧಾನದ ಆಶಯಗಳು, ಸರಕಾರದ ಜನಪರ ಯೋಜನೆಗಳು ಅರ್ಹ ಫಲಾನುಭವಿಗಳನ್ನು ತಲುಪಬೇಕಾದರೆ ಕಾರ್ಯಾಂಗ ಪಕ್ಷಪಾತ ರಹಿತವಾಗಿ ಕೆಲಸ ನಿರ್ವಹಿಸುವುದು ಅತ್ಯಗತ್ಯವಾಗುತ್ತದೆ. ಆಯ್ಕೆಯಾದ ಒಬ್ಬ ಜನಪ್ರತಿನಿಧಿ ಆಡಳಿತವನ್ನು ಅರ್ಥ ಮಾಡಿಕೊಳ್ಳುವುದಕ್ಕೇ ತನ್ನ ಮೊದಲ ಮೂರು ವರ್ಷಗಳನ್ನು ವ್ಯಯ ಮಾಡಬೇಕಾಗುತ್ತದೆ. ಈ ಸಂದರ್ಭದಲ್ಲಿ ಆತ ತಿಳಿದೋ ತಿಳಿಯದೆಯೋ ಐಎಎಸ್ ಅಧಿಕಾರಿಗಳ ಕೈಗೊಂಬೆಯಾಗಿರಬೇಕಾಗುತ್ತಾನೆ. ಸರಕಾರದ ಭಾಗವಾಗಿರುವ ನಾಯಕರು ಯಾವುದೇ ಯೋಜನೆಗಳನ್ನು ಜಾರಿಗೆ ತರಲಿ ಅದನ್ನು ಯಶಸ್ವಿಗೊಳಿಸಬೇಕಾದವರು ಐಎಎಸ್ ಅಧಿಕಾರಿಗಳೇ ಆಗಿದ್ದಾರೆ. ಅನೇಕ ಸಂದರ್ಭಗಳಲ್ಲಿ ಅವರೇ ರಾಜಕೀಯ ನಾಯಕರಿಗೆ ಮಾರ್ಗದರ್ಶಿಗಳಾಗಿರುತ್ತಾರೆ. ಅಧಿಕಾರವರ್ಗ ಮತ್ತು ಜನಪ್ರತಿನಿಧಿಗಳ ನಡುವೆ ಹೊಂದಾಣಿಕೆಗಳಿಲ್ಲದೇ ಇದ್ದರೆ ಆಡಳಿತ ಯಶಸ್ವಿಯಾಗಲು ಸಾಧ್ಯವಿಲ್ಲ. ಒಬ್ಬ ತೋಷಿತ ಸಮುದಾಯದ ಜನಪ್ರತಿನಿಧಿ ಸಂಸತ್‌ನ್ನು ಪ್ರವೇಶಿಸಿ ಸಚಿವನಾದರೂ, ಆತ ಕಾರ್ಯನಿರ್ವಹಿಸಬೇಕಾದರೆ ಆತನ ಜೊತೆಗೆ ಐಎಎಸ್ ಅಧಿಕಾರಿಗಳು ಎಷ್ಟರ ಮಟ್ಟಿಗೆ ಸಹಕಾರಿಸುತ್ತಾರೆ ಎನ್ನುವುದು ಕೂಡ ಮುಖ್ಯವಾಗುತ್ತದೆ ಶಾಸಕಾಂಗ-ಕಾರ್ಯಾಂಗದ ನಡುವಿನ ಬಿಕ್ಕಟ್ಟು ಅನೇಕ ಸಂದರ್ಭಗಳಲ್ಲಿ ಜನಪರ ಆಡಳಿತಕ್ಕೆ ಬಹುದೊಡ್ಡ ಸಮಸ್ಯೆಯಾಗುತ್ತದೆ. ಆದುದರಿಂದಲೇ, ಪ್ರಜಾಪ್ರಭುತ್ವ ಯಶಸ್ವಿಯಾಗಬೇಕಾದರೆ, ಶೋಷಿತ ಸಮುದಾಯವನ್ನು ಪ್ರತಿನಿಧಿಸುವ ಐಎಎಸ್ ಅಧಿಕಾರಿಗಳ ಸಂಖ್ಯೆಯಲ್ಲೂ ಹೆಚ್ಚಳವಾಗಬೇಕಾಗುತ್ತದೆ. ವಿಪರ್ಯಾಸವೆಂದರೆ, ಇಂದು ಮೇಲ್‌ಜಾತಿಯ ಅಧಿಕಾರಿಗಳೇ ನಮ್ಮ ಸರಕಾರವನ್ನು ನಿಯಂತ್ರಿಸುತ್ತಿದ್ದಾರೆ. ಆದುದರಿಂದಲೇ ಬಹುತೇಕ ಜನಪರವಾದ ಯೋಜನೆಗಳೆಲ್ಲ ವಿಫಲವಾಗುತ್ತದೆ. ಯಾಕೆಂದರೆ ಈ ಅಧಿಕಾರಿಗಳಿಗೆ ಆ ಯೋಜನೆಗಳು ಯಶಸ್ವಿಯಾಗುವುದು ಬೇಕಾಗಿಲ್ಲ. 'ಇನ್ನೂ ಮೀಸಲಾತಿ ಯಾಕೆ ಅಸ್ತಿತ್ವದಲ್ಲಿರಬೇಕು' ಎನ್ನುವ ಪ್ರಶ್ನೆ ದಿನದಿಂದ ದಿನಕ್ಕೆ ಬಲ ಪಡೆಯುತ್ತಿದೆ. ಆದರೆ ಮೀಸಲಾತಿಯಿಂದಾಗಿ ಶೋಷಿತ ಸಮುದಾಯ ನಿಜಕ್ಕೂ ಪೂರ್ಣ ಪ್ರಮಾಣದಲ್ಲಿ ಸಬಲೀಕರಣಗೊಂಡಿದೆಯೇ ಎನ್ನುವ ಪ್ರಶ್ನೆಗಳಿಗೆ ಉತ್ತರ ಕಂಡುಕೊಳ್ಳುವುದು ಯಾರಿಗೂ ಬೇಕಾಗಿಲ್ಲ. ಇಷ್ಟು ವರ್ಷ ಕಳೆದರೂ ಮೀಸಲಾತಿ ಯಾಕೆ ಯಶಸ್ವಿಯಾಗಿ ಜಾರಿಗೊಳ್ಳಲಿಲ್ಲ, ಅರ್ಹರು ಯಾಕೆ ಇದರ ಪ್ರಯೋಜನವನ್ನು ಪಡೆದುಕೊಳ್ಳಲು ವಿಫಲರಾದರು ಎನ್ನುವ ಪ್ರಶ್ನೆ ಬಂದಾಗ ಅದಕ್ಕೆ ಉತ್ತರ, ಈ ದೇಶದ ಕಾರ್ಯಾಂಗ ಸಾಮಾನ್ಯ ವರ್ಗಕ್ಕೆ ಸೇರಿದ ಅಧಿಕಾರಿಗಳಿಂದ ತುಂಬಿರುವುದು ಎನ್ನುವುದೇ ಆಗಿದೆ. ಶೋಷಿತರ ಪರವಾಗಿ ಸಂವಿಧಾನ ಮಾತನಾಡಿದರೂ, ಅದರ ಆಶಯಗಳನ್ನು ಜಾರಿಗೊಳಿಸುವ ಅಧಿಕಾರವನ್ನು ಮತ್ತೆ ಮೇಲ್‌ಜಾತಿಯ ಕೈಗೆ ನೀಡಲಾಗಿದೆ. ಇದೊಂದು ರೀತಿಯಲ್ಲಿ ತೋಳಗಳಿಗೆ ಕುರಿಗಳ ರಕ್ಷಣೆಯ ಹೊಣೆ ನೀಡಿದ ಹಾಗೆ. ಕೆಳಜಾತಿಯ ಕುರಿತಂತೆ ಅಸಹನೆಯನ್ನು ಹೊಂದಿರುವ, ದಲಿತರು ತಮಗೆ ಸರಿಸಮಾನವಾಗಿ ನಿಲ್ಲುವುದನ್ನು ಸಹಿಸದ ಮೇಲ್‌ಜಾತಿಯ ಜನರು ಶೋಷಿತರ ಪರವಾಗಿರುವ ಯೋಜನೆಗಳನ್ನು ಯಾಕಾದರೂ ಯಶಸ್ವಿಯಾಗಿ ಜಾರಿಗೊಳಿಸುತ್ತಾರೆ ಸಮಾಜದೊಳಗಿರುವ ಜಾತೀಯ ಮನಸ್ಥಿತಿಗಳು ಈ ಅಧಿಕಾರಿಗಳ ಮೂಲಕವೇ ತಮ್ಮ ಕಾರ್ಯಯೋಜನೆಗಳನ್ನು ಸಾಧಿಸುತ್ತವೆ. ಪ್ರಜಾಸತ್ತೆಯ ಫಲಗಳು ದುರ್ಬಲ ಸಮುದಾಯವನ್ನು ತಲುಪದಂತೆ ನೋಡಿಕೊಳ್ಳುವಲ್ಲಿ ಐಎಎಸ್‌ನಲ್ಲಿರುವ ಸಾಮಾನ್ಯ ವರ್ಗದ ಅಧಿಕಾರಿಗಳ ಪಾತ್ರ ಬಹುದೊಡ್ಡದು, ತಳಸ್ತರದ ಅಭಿವೃದ್ಧಿ ಪ್ರಜಾಸತ್ತೆಯ ಗುರಿ ಎನ್ನುವುದು ನಿಜವೇ ಆಗಿದ್ದರೆ ಮೊದಲು ಕಾರ್ಯಾಂಗದಲ್ಲಿರುವ ಅಧಿಕಾರಿ ವರ್ಗದೊಳಗೆ ಮಹತ್ತರ ಬದಲಾವಣೆಗಳಾಗಬೇಕಾಗಿದೆ. ಐಎಎಸ್ ಅಧಿಕಾರಿಗಳಲ್ಲಿ ದಲಿತರು, ಹಿಂದುಳಿದ ವರ್ಗಗಳು ಮತ್ತು ಅಲ್ಪಸಂಖ್ಯಾತ ಅಧಿಕಾರಿಗಳ ಸಂಖ್ಯೆ ಹೆಚ್ಚಾದಾಗ ಮಾತ್ರ ಆಡಳಿತವು ಶೋಷಿತರ ಪರವಾಗಿ ಬದಲಾಗುತ್ತದೆ. ಇತ್ತೀಚಿನ ದಿನಗಳಲ್ಲಿ ನ್ಯಾಯ ವ್ಯವಸ್ಥೆಯೂ ಮೀಸಲಾತಿಯ ವಿರುದ್ಧ ಶೋಷಿತ ಸಮುದಾಯದ ವಿರುದ್ಧ ಅಸಹನೆಯನ್ನು ಕಾರುವುದನ್ನು ನೋಡಿದ್ದೇವೆ.

ಡಾ.ಬಾಬಾ ಆಮಟೆರವರ 110ನೇ ವರ್ಷದ ಜನ್ಮಜಯಂತಿ



ಇಂತಹ ಮಾನವೀಯತೆ ಉಳ್ಳ ಸಾಕಾರಮೂರ್ತಿಯ 110ನೇ ವರ್ಷದ ಜನ್ಮಜಯಂತಿಯ ದಿನವಾದ ಇಂದು ಅವರನ್ನ ಸ್ಮರಿಸಿ, ನೆನೆಯುತ್ತಾ ಅವರ ಆತ್ಮಕ್ಕೆ ಶಾಂತಿ ಸದ್ಗತಿ ದೊರೆಯಲೆಂದು ಪ್ರಾರ್ಥಿಸುತ್ತಾ, ಅವರ ಸಾಧನೆ ಮತ್ತು ಸೇವಾ ಆದರ್ಶಗಳು, ಇಂದಿನ ಯುವ ಜನರಿಗೆ ಒಂದು ಸ್ಫೂರ್ತಿದಾಯಕ ದಾರಿದೀಪವಾಗಲಿವೆ.

• ಉದಯವಾಹಿನಿ, ವಿಶೇಷ

ಡಾ. ಬಾಬಾ ಅಮ್ಟೆರವರು 1914 ಡಿಸೆಂಬರ್ 26 ರಂದು ಮಹಾರಾಷ್ಟ್ರದಲ್ಲಿ ಜನಿಸಿದರು. ಜಗತ್ತಿನ ಹಾಗೂ ರಾಷ್ಟ್ರದಲ್ಲಿ ಕೆಲವರು ಸ್ವಾರ್ಥ ಮರೆತು ನಿಸ್ವಾರ್ಥ ಸೇವೆಯಿಂದ ಸಾಧನೆ ಮಾಡಿ ಸಾಧಿಸಿ ಇತಿಹಾಸ ಪುಟ ಸೇರುತ್ತಾರೆ. ಆ ರೀತಿ ಸೇರಿರುವ ಪೈಕಿ ಇವರೂ ಕೂಡ ಒಬ್ಬರಾಗಿರುತ್ತಾರೆ.

ಬಾಬಾ ಆಮ್ಟೆಯವರಿಗೆ ಚಿಕ್ಕವಯಸ್ಸಿನಿಂದ ಉತ್ತಮ ಸಂಸ್ಕಾರ, ಶಿಕ್ಷಣ, ಶಿಸ್ತು, ಪ್ರೋತ್ಸಾಹ ಹಾಗೂ ಅವರ ಕಠಿಣ ಪರಿಶ್ರಮದಿಂದ ಕಾನೂನು ಪದವಿಯನ್ನುಗಳಿಸಿದರು.

ನಂತರ ಗಾಂಧೀಜಿ, ವಿನೋಬಾ ಭಾವೆ, ಟ್ಯಾಗೋರ್ ಇನ್ನೂ ಹಲವಾರು ಮಹನೀಯರ ಬದುಕು ಅವರಿಗೆ ದಾರಿದೀಪವಾಯಿತು. ಇದೆಂಥಾ ಮಾನವೀಯತೆ ತನ್ನ ಜೀವನದ ಬದುಕಿನುದ್ದಕ್ಕೂ ಪರರ ಚಿಂತನೆ ಮಾಡಿ ಪೂರ್ಣವಾಗಿ ಸಮರ್ಪಿಸಿಕೊಂಡು ಕುಷ್ಠರೋಗಿಗಳ ಹಾಗೂ ದೀನದಲಿತರ ಸೇವೆಗಾಗಿ ಮುಡುಪಾಗಿಟ್ಟು ಹಾಗೂ ಸಮಾಜದಲ್ಲಿ ಎದ್ದು ಕಾಣುತ್ತಿದ್ದ ಜಾತಿಪದ್ಧತಿ, ಮೇಲು-ಕೀಳು ಎಂಬ ತಾರತಮ್ಯ, ಶ್ರೀಮಂತರ ಶೋಷಣೆಗೆ ಗುರಿಯಾದ ಬಡಜನರ ಸೇವೆಗೆ ಮನ ತುಡಿಯುತಿತ್ತು. ಮುಂದೆ ಅವರು ಶಮಾಶ್ರಮ ಸ್ಥಾಪಿಸಿದರು, ಇದು ದುಡಿಮೆಯನ್ನು ಆದರಿಸಿದ ಸಾಮುದಾಯಕ ಬದುಕನ್ನು ನಡೆಸುವ ಪ್ರಯೋಗವಾಗಿತ್ತು. ಇನ್ನು ಮುಂದೆ ತಿಳಿಯುವುದಾದರೆ, ಆನಂದವನ ಎಂಬ ಸಂಸ್ಥೆ ಸ್ಥಾಪಿಸಿ ದೇಹದ ಕುಂದುಕೊರತೆ, ನೋವು, ನಿರಾಶೆ, ಅನಾಥ ಭಾವನೆ ಎಲ್ಲವನ್ನೂ ಮರೆಸಿ ರೋಗಿಗಳಿಗೆ ಆನಂದ ತರುವಂತಹ ತಾಣವಾಗಬೇಕು ಎಂದು ಅವರ ಉದ್ದೇಶವಾಗಿತ್ತು. ಮುಂದೆ ಅವರು ತಮ್ಮ ಕೆಲವು ಯೋಜನೆಗಳಿಗೆ ಮುಕ್ತಿಸದನ, ಸುಖಾಸನ, ಸಂಧಿನಿಕೇತನ ಎಂಬ ಅನ್ವರ್ಥಕವಾದ ಹೆಸರುಗಳನ್ನು ಇಟ್ಟಿದ್ದರು. ಆನಂದವನದ ಆಸ್ಪತ್ರೆಯಲ್ಲಿ ಕುಷ್ಠ ರೋಗ ನಿವಾರಣೆಗಾಗಿ ಹೊಸ ಹೊಸ ಚಿಕಿತ್ಸಾ ವಿಧಾನಗಳನ್ನು ಅಳವಡಿಸಿ ಕೊಳ್ಳಲಾಯಿತು. ಕ್ರಮೇಣ ಪ್ರವಾಸಿ ತಾಣವಾಗಿ ಪ್ರಸಿದ್ಧವಾಯಿತು. ವಿದೇಶಿಯರು ಆನಂದ ವನವನ್ನು ಕಂಡು ಅಚ್ಚರಿಗೊಂಡು ಬಾಬಾರವರ ಕಾರ್ಯವನ್ನು ಮನಸಾರೆ ಹೊಗಳಿದರು. ಬಾಬಾರವರ ಆನಂದವನ ಎಂದರೆ ಮಾನವೀಯತೆಯ ಮಂಗಳಕರವಾದ ಒಂದು ತೀರ್ಥಕ್ಷೇತ್ರ ಎಂದು ಅಭಿಪ್ರಾಯಪಟ್ಟರು.

ಬಾಬಾ ಅವರು ನಡೆಸಿದ ಮಾನವನ ಸೇವೆ, ಸಮಾಜಸೇವೆಗಾಗಿ ಅವರಿಗೆ ಹಲವಾರು ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಪ್ರಶಸ್ತಿಗಳು ಸಂದಿವೆ.

ಅನೇಕ ವಿಶ್ವವಿದ್ಯಾಲಯಗಳು ಡಾಕ್ಟರೇಟ್ ಪದವಿ ನೀಡಿ ಗೌರವಿಸಿದೆ. ಬಹುಮಾನ ರೂಪವಾಗಿ ಬಂದ ದೊಡ್ಡ ಮೊತ್ತದ ಹಣವನ್ನು ಸಮಾಜ ಸೇವಾ ಕಾರ್ಯಗಳಿಗೆ ಬಳಸಿದರು. ಅವರಿಗೆ ಪ್ರತಿಷ್ಠಿತ ಮ್ಯಾಗ್ಸೆಸೆ ಪ್ರಶಸ್ತಿ, ಪದ್ಮಶ್ರೀ, ಪದ್ಮವಿಭೂಷಣ ಹಾಗೂ ಗಾಂಧಿ ಶಾಂತಿ ಪುರಸ್ಕಾರ ಲಭಿಸಿದೆ. ಬಾಬಾ ಅವರು ಕುಷ್ಠರೋಗಿಗಳ ಹಾಗೂ ಸಮಾಜದಲ್ಲಿನ ದೀನ ದಲಿತರ ಏಳಿಗೆಗಾಗಿ ಹಲವಾರು ವಿಧಾಯಕ ಕಾರ್ಯಕ್ರಮಗಳನ್ನು ನಡೆಸುವುದರ ಮೂಲಕ ತಮ್ಮ ಬಾಳಿನ ಧನ್ಯತೆಯನ್ನು ಕಂಡುಕೊಂಡ ಮಹಾ ಪುರುಷರಾಗಿದ್ದಾರೆ. ಇವರ ಆದರ್ಶಗಳು ಸರ್ವಕಾಲಕ್ಕೂ ಸಮಾಜಕ್ಕೆ ದಾರಿದೀಪವಾಗಿವೆ. ಬಾಬಾರವರು ತನ್ನ ವಯೋಸಹಜದಿಂದ ಫೆಬ್ರವರಿ 9, 2008 ರಂದು ತನ್ನ 94ನೇ ವಯಸ್ಸಿನಲ್ಲಿ ತೀರಿಕೊಂಡರು.

ಕಲಾ ಸಾಹಿತ್ಯ

ಕೃಷ್ಣಪ್ಪ
ಲೇಖಕರು ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು

ಅರಳಿಮರವೇಕೆ ಬಾಡುವುದಿಲ್ಲ?

ವಿಶ್ವಾಸ್.ಡಿ.ಗೌಡ

ರಾಮಲಕ್ಷ್ಮಣರು ವನವಾಸದಲ್ಲಿದ್ದಾಗ ಗಯಾ ಕ್ಷೇತ್ರಕ್ಕೆ ಬರುತ್ತಾರೆ. ಸೀತಾದೇವಿಯನ್ನು ಫಲ್ಗುಣಿ ನದಿಯ ದಂಡೆಯಲ್ಲಿ ಕೂಡಿಸಿ ಅವರಿಬ್ಬರೂ ಕಾಡಿಗೆ ಹೋಗುತ್ತಾರೆ. ಇದಾದ ಸ್ವಲ್ಪ ಹೊತ್ತಿನಲ್ಲೇ ನದಿಯ ಒಳಗಿನಿಂದ ಕೈಯೊಂದು ಹೊರಗೆ ಬರುತ್ತದೆ. ಸೀತಾದೇವಿ ನನಗೆ ಹಸಿವೆಯಾಗುತ್ತಿದೆ ಎಂದಂತಾಗುತ್ತದೆ.

ಪದೇ ಪದೇ ಆ ಧ್ವನಿ ಮರುಕಳಿಸುತ್ತದೆ. ಆ ಧ್ವನಿ ಮಹಾರಾಜರಂತೆ ಇರುತ್ತದೆ. ಸೀತೆಗೆ ಏನು ಮಾಡುವುದೆಂದೇ ತೋಚುವುದಿಲ್ಲ. ಬೇರೆ ದಾರಿ ಇಲ್ಲದೆ ಮರಳಿನ ಉಂಡೆಯನ್ನು ಮಾಡಿ ಅದರಲ್ಲಿ ಅನ್ನವನ್ನು ಆವಾಹನೆ ಮಾಡಿ ನದಿಯಿಂದ ಮೇಲೆ ಬಂದ ಕೈಯೊಳಗೆ ಇಡುತ್ತಾಳೆ. ನಂತರ ತನ್ನ ಕರ್ತವ್ಯಕ್ಕೆ ಐದು ಸಾಕ್ಷಿಗಳನ್ನು ಆಧಾರವಾಗಿ ಇಟ್ಟುಕೊಳ್ಳುತ್ತಾಳೆ. ಸೀತೆ ನೀಡಿದ ಆಹಾರದಿಂದ ದಶರಥ ಸಂತುಷ್ಟನಾಗುತ್ತಾನೆ. ಹರಸಿ ಮರೆಯಾಗುತ್ತಾನೆ. ಇತ್ತ ರಾಮ ಲಕ್ಷ್ಮಣರು ಮರಳಿದಾಗ ಸೀತೆ ಅವರಿಗೆ ನಡೆದ ಸಂಗತಿಯೆಲ್ಲವನ್ನೂ ವಿವರಿಸುತ್ತಾಳೆ. ರಾಮ ಲಕ್ಷ್ಮಣರಿಗೆ ಮೊದಲಿಗೆ ಸೀತೆಯ ಮಾತಿನ ಮೇಲೆ ನಂಬಿಕೆ ಬರುವುದಿಲ್ಲ. ಆಗ ಸೀತೆ ತನ್ನ ಕೃತ್ಯಕ್ಕೆ ಫಲ್ಗುಣಿ ನದಿ, ತುಳಸಿ ಗಿಡ, ಹಸು ಬ್ರಾಹ್ಮಣ ಮತ್ತು ಅರಳಿಮರವೇ ಸಾಕ್ಷಿ ಎನ್ನುತ್ತಾಳೆ. ಆದರೆ, ಸೀತೆಯ ಸಹಾಯಕ್ಕೆ ಅರಳಿ ಮರದ ಹೊರತಾಗಿ ಮತ್ಯಾರು ಬರುವುದಿಲ್ಲ. ಅರಳಿ ಮರ ಸಾಕ್ಷ್ಯನುಡಿಯುತ್ತದೆ. ರಾಮ, ಲಕ್ಷ್ಮಣರು ಸೀತೆಯ ಕರ್ತವ್ಯ ಪ್ರಜ್ಞೆಯನ್ನು ಶ್ಲಾಘಿಸುತ್ತಾರೆ. ಆದರೆ, ಸೀತೆ ತನ್ನ ಮಾತಿಗೆ ವಿರುದ್ಧವಾಗಿ ನಡೆದುಕೊಂಡ ಫಾಲುಣಿ ನದಿ, ಹಸು, ಬ್ರಾಹ್ಮಣ ಮತ್ತು ತುಳಸಿ ಗಿಡಕ್ಕೆ ಶಾಪ ಕೊಡುತ್ತಾಳೆ. ಫಾಲುಣಿ ನದಿಗೆ ಮಳೆಗಾಲದಲ್ಲೂ ಸಹ ನಿನ್ನ ಪಾತ್ರಕ್ಕೆ ಎಷ್ಟೇ ನೀರು ಬಂದರೂ ಬರಿದಾಗಲಿ. ನೀರು ನೆಲದ ಒಳಗೇ ಉಳಿದುಕೊಳ್ಳಲಿ. ಹೇ ವಿಪ್ರೋತ್ತಮ ನೀನು ಸತ್ಯ ಹೇಳದೇ ನನಗೆ ಮೋಸ ಮಾಡಿದೆ. ಹೀಗಾಗಿ ನೀನು ಈ ಕ್ಷೇತ್ರದಲ್ಲೇ ಇದ್ದು ಕ್ಷೇತ್ರಕ್ಕೆ ಬರುವ ಯಾತ್ರಿಕರನ್ನು ಪೀಡಿಸಿ ಅದರಿಂದ ಬಂದ ಲಾಭದಿಂದ ಜೀವನ ನಡೆಸು. ಗೋಮಾತೆ ನೀನು ಜಗವ ಬೆಳಗಬೇಕಾದವಳು. ಆದರೆ, ನೀನು ನನ್ನ ಮಾತು ಮೀರಿ ಲೊಭತನ ಮೆರೆದೆ. ಹಾಗಾಗಿ ಗಯಾ ಕ್ಷೇತ್ರದಲ್ಲೇ ಇದ್ದುಕೊಂಡು ಅವರಿವರು ಪಿಂಡವನ್ನು ತಿನ್ನುತ್ತಾ ಜೀವನ ಸಾಗಿಸು. ಎಷ್ಟು ತಿಂದರೂ ನಿನ್ನ ಹೊಟ್ಟೆ ತುಂಬದಿರಲಿ. ತುಳಸಿ ಮಾತೆ ನೀನು ಪವಿತ್ರಳಾದವಳು. ನೀನು ಸಹ ನನ್ನ ಮಾತು ಮೀರುವಿ ಎಂದುಕೊಂಡಿರಲಿಲ್ಲ. ಹಾಗಾಗಿ ನೀನು ಎಲ್ಲೆಂದರಲ್ಲಿ ಬೆಳೆಯುವಂತಾಗಲಿ. ಸೀತೆಯ ಶಾಪದಂತೆ ಫಲ್ಗುಣಿ ನದಿ ಬತ್ತಿಹೋಗಿದೆ. ನದಿಯೊಳಗಿನ ಮರಳನ್ನು ಅಗೆದಾಗಳಷ್ಟೆ ಇಂದಿಗೂ ನೀರು ಬರುತ್ತದೆ. ಫಾಲುಣಿ ನದಿ ತೀರದಲ್ಲಿರುವ ಹಸುಗಳಿಗೆ ಪಿಂಡಗಳೇ ಆಹಾರ. ಅವು ಎಷ್ಟು ಹಸಿದಿರುತ್ತವೆ ಎಂದರೆ ಕೆಲವೊಮ್ಮೆ ಪಿಂಡ ವಿಸರ್ಜನೆಗೂ ಅವಕಾಶ ಕೊಡದೆ ಬಾಯಿ ಹಾಕುತ್ತದೆ. ನಂತರ ಸೀತೆಯ ದೃಷ್ಟಿ ಅರಳೀ ಮರದತ್ತ ಬೀಳುತ್ತದೆ. ಆಕೆ ಪರಮ ಸಂತೋಷದಿಂದ ಆಶೀರ್ವಾದಿಸುತ್ತಾಳೆ. ಅಂದಿನಿಂದ ಅರಳಿಮರ ಬಾಡದೆ ಕಂಗೊಳಿಸುತ್ತದೆ.



ಆರೋಗ್ಯಕರ ಜೀವನಕ್ಕೆ ಆಹಾರ ಕ್ರಮ ಹೀಗಿರಬೇಕು

• ಉದಯವಾಹಿನಿ, ಬೆಂಗಳೂರು

**ಹಸಿದುಕೊಂಡು ಇರುವುದು, ಒಮ್ಮೆಲೆ ಹೊಟ್ಟೆ ತುಂಬಾ ತಿಂದು ಬಿಡುವುದು ಆಹಾರ ಸೇವನೆಯ ಒಳ್ಳೆಯ ಲಕ್ಷಣವಲ್ಲ. ನಾವು ದುಡಿಯುವುದು ಹೊಟ್ಟೆಗಾಗಿ ಆಗಿರುವುದರಿಂದ ಆ ಹೊಟ್ಟೆಗೆ ಆಹಾರವಾಗಿ ಏನನ್ನು ನೀಡಬೇಕೋ ಅದನ್ನು ಆಯಾಯ ಸಮಯದಲ್ಲಿ ನೀಡಿದರೆ ದೇಹದ ಕ್ರಿಯೆ ಸುಗಮವಾಗಿ ಸಾಗಲು ಸಾಧ್ಯವಾಗಲಿದೆ. ಇದೆಲ್ಲದರ ನಡುವೆ ರಾತ್ರಿ ಹೊತ್ತಿನ ಊಟ ಹೇಗಿರಬೇಕು ಎಂಬುದನ್ನು ಅರಿತುಕೊಳ್ಳುವುದು ಜಾಣತನ. ರಾತ್ರಿ ಊಟ ಮಾಡಿದ ತಕ್ಷಣ ಮಲಗದೆ, ಮಲಗುವ ಕನಿಷ್ಠ 2 ಗಂಟೆ ಮೊದಲು ಆಹಾರ ಸೇವ

ಜಲಜೀವನ್ ಮಿಷನ್ ಕಾಮಗಾರಿ: ಅವ್ಯವಹಾರ ಆರೋಪ

ಕಾಮಗಾರಿ ಪೂರ್ಣಗೊಳ್ಳುವ ಮುನ್ನವೇ ಅದನ್ನು ಜಿಲ್ಲಾ ಪಂಚಾಯಿತಿಗೆ ಹಸ್ತಾಂತರ ಮಾಡಬೇಕು ಎಂದು ಒತ್ತಡ

• ಉದಯವಾಹಿನಿ, ಮಂಗಳೂರು

ತ್ರೈಮಾಸಿಕ ಕೆಡಿಪಿ ಸಭೆ

ಉದಯವಾಹಿನಿ ಚಿತ್ರ

ಜಲಜೀವನ್ ಮಿಷನ್ (ಜೆಜೆಎಂ) ಯೋಜನೆಯಡಿ ಕಾಮಗಾರಿ ನಡೆಸದೆಯೇ ಬಿಲ್ ಮಾಡಲಾಗಿದೆ. ನೀರಿನ ಸಂಪರ್ಕ ಕಲ್ಪಿಸದ ಮನೆಗೂ ಸಂಪರ್ಕ ನೀಡಲಾಗಿದೆ ಎಂದು ತೋರಿಸಲಾಗಿದೆ. ಕಾಮಗಾರಿ ಪೂರ್ಣಗೊಳ್ಳುವ ಮುನ್ನವೇ ಅದನ್ನು ಜಿಲ್ಲಾ ಪಂಚಾಯಿತಿಗೆ ಹಸ್ತಾಂತರ ಮಾಡಬೇಕು ಎಂದು ಒತ್ತಡ ಹೇರಲಾಗುತ್ತಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾ ಪಂಚಾಯಿತಿಯ ತ್ರೈಮಾಸಿಕ ಕೆಡಿಪಿ ಸಭೆಯಲ್ಲಿ ಆಕ್ಷೇಪ ವ್ಯಕ್ತವಾಯಿತು. ಈ ಬಗ್ಗೆ ಸಮಗ್ರ ತನಿಖೆ ನಡೆಸಿ ವರದಿ ಸಲ್ಲಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರ ದಿನೇಶ್ ಗುಂಡೂರಾವ್ ಅವರು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಆನಂದ್ ಕೆ. ಅವರಿಗೆ ಸೂಚಿಸಿದರು.

ಸಭೆಯಲ್ಲಿ ಈ ವಿಚಾರ ಪ್ರಸ್ತಾಪಿಸಿದ ನಾಮನಿರ್ದೇಶಿತ ಸದಸ್ಯ ಮೆಲ್ವಿನ್ ಡಿಸೋಜ, 'ನೀರು ಮಾರ್ಗ, ಅಡ್ಯಾರ್, ಅರ್ಕುಳ, ಉಳಾಯಿಬೆಟ್ಟು ಪ್ರದೇಶಗಳಲ್ಲಿ ಜೆಜೆಎಂ ಕಾಮಗಾರಿ ಸಮರ್ಪಕವಾಗಿ ಅನುಷ್ಠಾನವಾಗಿಲ್ಲ. ಒಂದು ಕಡೆ, ಖಾಸಗಿ ಜಾಗದಲ್ಲಿ ನೀರಿನ ತೊಟ್ಟಿಯನ್ನು ನಿರ್ಮಿಸಿ ಅರ್ಧದಲ್ಲೇ ಸ್ಥಗಿತಗೊಳಿಸಿದ್ದಾರೆ.

ನೀರಿನ ತೊಟ್ಟಿಗಳಿಗೆ ನೀರು ಹಾಯಿಸಿ ಪರಿಶೀಲನೆಯನ್ನೂ ನಡೆಸಿಲ್ಲ ಎಂದು ದೂರಿದರು.

ಜೆಜೆಎಂ ಕಾಮಗಾರಿ ಆರಂಭಿಸುವ ಮುನ್ನವೇ ಜಿಲ್ಲೆಯಲ್ಲಿ 2.43 ಲಕ್ಷ ಕುಟುಂಬಗಳಿಗೆ ನೀರಿನ ಸಂಪರ್ಕ ಇತ್ತು. ಅಗತ್ಯತೆ ನೋಡಿಕೊಂಡು ಅಂದಾಜು ಪಟ್ಟಿ ತಯಾರಿಸಿ, ಅದರ ಪ್ರಕಾರ ಕಾಮಗಾರಿ ನಡೆಸಲಾಗಿದೆ. ನಾಲ್ಕು ವರ್ಷಗಳ ಹಿಂದೆ ಕಾಮಗಾರಿ ನಡೆದಿರುವ ಕೆ ನಂತರ ನಿರ್ಮಾಣವಾಗಿರುವ ಮನೆಗಳಿಗೆ ನೀರಿನ ಸಂಪರ್ಕ ಸಿಗದಿರಬಹುದು. ಆದರೆ, ಅಂದಾಜು ಪಟ್ಟಿಯಲ್ಲಿ ಉಲ್ಲೇಖಿಸಿದ ಎಲ್ಲಾ ಮನೆಗಳಿಗೂ ನೀರಿನ ಸಂಪರ್ಕ ಕಲ್ಪಿಸಲಾಗಿದೆ ಎಂದು ಈ ಯೋಜನೆಯ ಎಂಜಿನಿಯರ್ ಒಬ್ಬರು ಉತ್ತರಿಸಿದರು.

ಜಿಲ್ಲೆಯಲ್ಲಿ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆ ಅಡಿ 3,50,391 ಎಕರೆಗಳನ್ನು ತೋಟಗಳಿಗೆ ವಿಮೆ ಸೌಲಭ್ಯ ಒದಗಿಸಲಾಗಿದೆ. 2023-24ನೇ ಸಾಲಿನಲ್ಲಿ ಒಟ್ಟು 278 ಕೋಟಿ ವಿಮೆ ಕಂತು ಪಾವತಿಸಲಾಗಿದ್ದು, 820 ಕೋಟಿ ಪರಿಹಾರ ಜಿಲ್ಲೆಗೆ ಮಂಜೂರಾಗಿದೆ ಎಂದು ತೋಟಗಾರಿಕೆ ಇಲಾಖೆಯ ಉಪನಿರ್ದೇಶಕರು ಮಾಹಿತಿ ನೀಡಿದರು.

ವಿಟ್ಲ ಸರ್ಕಾರಿ ಕಾಲೇಜಿನ ಬಳಿ ನಿರ್ಮಿಸಿರುವ ಕಟ್ಟಡದಲ್ಲಿ 150ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ವಸತಿ ಕಲ್ಪಿಸಬಹುದು. ಈ ಕಟ್ಟಡ ಬಳಕೆಯಾಗದೇ ಉಳಿದಿದೆ ಎಂದು ಶಾಸಕ ಅಶೋಕ್ ಕುಮಾರ್ ರೈ ಗಮನ ಸೆಳೆದರು. ಹಿಂದುಳಿದ ವರ್ಗಗಳ ಅಭಿವೃದ್ಧಿ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಹಾಗೂ ಕಾಲೇಜು ಶಿಕ್ಷಣ ಇಲಾಖೆಗಳ ಅಧಿಕಾರಿಗಳನ್ನು ಕರೆಸಿ ಚರ್ಚಿಸಿ ನಿರುಪಯುಕ್ತ ಸ್ಥಿತಿಯಲ್ಲಿರುವ ಈ ಕಟ್ಟಡವನ್ನು ಬಳಸುವ ಬಗ್ಗೆ ಕ್ರಮ ಕೈಗೊಳ್ಳಬೇಕು ಎಂದು ಉಸ್ತುವಾರಿ ಸಚಿವರು ಜಿಲ್ಲಾಧಿಕಾರಿ ಮುಖ್ ಮುಗಿಲನ್ ಅವರಿಗೆ ಸೂಚಿಸಿದರು.

ನಗರ ಪೊಲೀಸ್ ಕಮಿಷನರ್ ಅನುಪಮ್ ಅಗರ್ವಾಲ್ ಹಾಗೂ ದ.ಕ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಯತೀಶ್ ಎನ್. ವಿಧಾನ ಪರಿಷತ್ ಸದಸ್ಯ ಧನಂಜಯ ಸರ್ಜಿ ಭಾಗವಹಿಸಿದ್ದರು.

ಜಿಲ್ಲೆಯಲ್ಲಿ 186 ಆರೋಗ್ಯ ಉಪ ಕೇಂದ್ರಗಳಿಗೆ ಸ್ವಂತ ಕಟ್ಟಡವಿಲ್ಲ. ಇವುಗಳಲ್ಲಿ 157 ಉಪ ಕೇಂದ್ರಗಳಿಗೆ ಜಾಗ ಲಭ್ಯವಿದೆ. ನಗರ ಪ್ರದೇಶದ 38 ಉಪ ಕೇಂದ್ರಗಳಿಗೆ ಜಾಗಲಭ್ಯವಿಲ್ಲ. ಹೊಸ ಕಟ್ಟಡ ನಿರ್ಮಿಸಲು 65 ಲಕ್ಷ ಬೇಕಾಗುತ್ತದೆ. 17 ಹೊಸ ಕಟ್ಟಡಗಳನ್ನು 2023-24ನೇ ಸಾಲಿನಲ್ಲಿ ನಿರ್ಮಿಸಲಾಗುತ್ತಿದ್ದು, ಟೆಂಡರ್ ಕರೆಯಲಾಗಿದೆ.

-ಡಾ.ಎಚ್.ಆರ್.ತಿಮ್ಮಯ್ಯ
ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ

ಹೆಚ್ಚುವರಿ ಹಾಸ್ಟೆಲ್-ನಿರ್ಣಯ

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮೆಟ್ರಿಕ್ ನಂತರ ಹಾಸ್ಟೆಲ್‌ಗಳಿಗೆ ಹೆಚ್ಚಿನ ಬೇಡಿಕೆ ಇದೆ. ಈ ಸಾಲಿನಲ್ಲಿ ಗಂಡು ಮಕ್ಕಳ ಹಾಸ್ಟೆಲ್‌ಗೆ ಪ್ರವೇಶ ಕೋರಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ 600 ಮಂದಿಗೆ ಹಾಗೂ ಹೆಣ್ಣು ಮಕ್ಕಳ ಹಾಸ್ಟೆಲ್‌ಗೆ ಅರ್ಜಿ ಸಲ್ಲಿಸಿದ 700 ಮಂದಿಗೆ ಪ್ರವೇಶ ನೀಡಲು ಸಾಧ್ಯವಾಗಿಲ್ಲ' ಎಂದು ಹಿಂದುಳಿದ ವರ್ಗಗಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಅಧಿಕಾರಿ ಬಿಂದಿಯಾ ನಾಯಕ ತಿಳಿಸಿದರು. 'ಜಿಲ್ಲೆಯ ಕಾಲೇಜುಗಳಲ್ಲಿ ರಾಜ್ಯದ ಬೇರೆ ಬೇರೆ ಪ್ರದೇಶಗಳಿಂದ ವಿದ್ಯಾಭ್ಯಾಸಕ್ಕೆ ಬರುವ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚು ಇದೆ. ಹಾಗಾಗಿ ಜಿಲ್ಲೆಗೆ ಹೆಚ್ಚುವರಿ ಹಾಸ್ಟೆಲ್ ಮಂಜೂರು ಮಾಡಬೇಕು' ಎಂದು ಸರ್ಕಾರವನ್ನು ಕೋರುವ ನಿರ್ಣಯವನ್ನು ಸಭೆಯಲ್ಲಿ ಕೈಗೊಳ್ಳಲಾಯಿತು.

ಅಮಿತ್ ಶಾ ರಾಜೀನಾಮೆಗೆ ಆಗ್ರಹಿಸಿ ನಾಳೆ ಔರಾದ್ ಬಂದ್‌ಗೆ ಕರೆ

• ಉದಯವಾಹಿನಿ, ಔರಾದ


ಉದಯವಾಹಿನಿ ಚಿತ್ರ

ಅಂಬೇಡ್ಕರ್‌ರವರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿದ ಅಮಿತ್ ಶಾ ರಾಜೀನಾಮೆಗೆ ಆಗ್ರಹಿಸಿ ಡಾ. ಬಿ. ಆರ್ ಅಂಬೇಡ್ಕರ್ ಸ್ವಾಭಿಮಾನಿ ಹೋರಾಟ ಸಮಿತಿ ವತಿಯಿಂದ ಡಿಸೇಂಬರ್ 27 ರಂದು ಔರಾದ ಬಂದ್‌ಗೆ ಕರೆ ನೀಡಲಾಗಿದೆ ಎಂದು ಬಿ. ಆರ್ ಅಂಬೇಡ್ಕರ್ ಸ್ವಾಭಿಮಾನಿ ಹೋರಾಟ ಸಮಿತಿ ಅಧ್ಯಕ್ಷ ಝರೆಪ್ಪಾ ವರ್ಮಾ ನಾಗಮಾರಪಳ್ಳಿ ಅವರು ಪಟ್ಟಣದಲ್ಲಿ ಸಮಾಜದ ಮುಖಂಡರ ಸಭೆಯಲ್ಲಿ ಮಾತನಾಡಿ ಅಮಿತ್ ಶಾ ಮಾತಿನಿಂದ ದೇಶದ ಅಂಬೇಡ್ಕರ್ ಅನುಯಾಯಿಗಳಿಗೆ ಸಾಕಷ್ಟು ನೋವಾಗಿದೆ.

ಅಂಬೇಡ್ಕರ್ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ರವರಿಗೆ ಅಭಿಮಾನ ಇದ್ದರೆ ಕೂಡಲೇ ಅಮಿತ್ ಶಾರಿಂದ ರಾಜೀನಾಮೆ ಪಡೆಯಬೇಕು ಎಂದು ಒತ್ತಾಯಿಸಿದರು.

ಸಮಿತಿ ಕಾರ್ಯದರ್ಶಿ ಗೌತಮ ಮೇತ್ರೆ ಮಾತನಾಡಿ ಡಿ.27 ರಂದು ನಡೆಯುವ ಔರಾದ ಬಂದ್ ಹೋರಾಟದಲ್ಲಿ ತಾಲ್ಲೂಕಿನ ಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದರು.

ಎಸ್. ಟಿ ಸಮಾಜದ ಮುಖಂಡರಾದ ತಾನಾಜಿ ತೊರನೆಕರ ಮಾತನಾಡಿ ಅಂಬೇಡ್ಕರರವರು ಕೇವಲ ಒಂದು ಸಮಾಜಕ್ಕೆ ಸೀಮಿತರಲ್ಲ ಈ ಹೋರಾಟದಲ್ಲಿ ದೇಶದ ಪ್ರತಿಯೊಬ್ಬ ಜಾಗೃತ ನಾಗರೀಕರು ಭಾಗವಹಿಸಬೇಕು ಎಂದರು. ಸಮಿತಿ ಖಜಾಂಚಿ ಸುಭಾಸ್ ಮಾತನಾಡಿ ಬಂದ್ ಹೋರಾಟ ಶಾಂತಿಯುತವಾಗಿ ನಡೆಸಬೇಕು ಎಂದರು. ಈ ಸಂದರ್ಭದಲ್ಲಿ ದತ್ತಾತ್ರಿ ಮುಂಗನಾಳ, ತುಕಾರಾಮ್ ಹಸನ್ಮುಖಿ, ಉತ್ತಮ ಮಾನಜರೆಕರ, ಸುನಿಲ್ ಮಿತ್ರಾ, ಸಂತೋಷ ಶಿಂದೆ, ಸುಭಾಸ್ ಲಾಧಾ, ಶಿವು ಕಾಂಬಳೆ, ಅಖಿಲೇಶ್, ಪ್ರವೀಣ ಕಾರಂಜೆ, ರತ್ನದೀಪ್ ಕಸ್ತೂರೆ, ಶಾಂತಕುಮಾರ್ ಭಾವಿಕಟ್ಟಿ, ದಿನೇಶ್ ಶಿಂದೆ, ಸಂತೋಷ ಸೂರ್ಯವಂಶಿ, ಆನಂದ ಕಾಂಬ್ಳೆ, ಉಪಸ್ಥಿತರಿದ್ದರು.

ಯಾವುದೇ ಧರ್ಮ, ಜಾತಿಗಳನ್ನು ಪರಿಗಣಿಸದೆ ಎಲ್ಲಾ ಭಾರತೀಯರ ಬದುಕಿನ ಘನತೆಯನ್ನು ಹೆಚ್ಚಿಸಲು ತಮ್ಮ ಜೀವನವನ್ನೇ ಪಣಕ್ಕಿಟ್ಟವರು. ಆದರೆ, ಪ್ರಜಾಪ್ರಭುತ್ವದ ದೇಗುಲ ಸಂಸತ್ತಿನಲ್ಲಿ ಅಮಿತ್ ಶಾ ಸಂವಿಧಾನಾತ್ಮಕ ಹುದ್ದೆಯಲ್ಲಿದ್ದುಕೊಂಡು ಅಂಬೇಡ್ಕರ್ ಬಗ್ಗೆ ಅವಹೇಳನ ಮಾಡಿದ್ದು, ಕೋಟ್ಯಾಂತರ ಭಾರತೀಯರಿಗೆ ನೋವುಂಟಾಗಿದೆ. ಶಾ ರಾಜೀನಾಮೆಗೆ ಒತ್ತಾಯಿಸಿ ಡಿ.27ಕ್ಕೆ ಔರಾದ್ ಬಂದ್ ಗೆ ಕರೆ ನೀಡಲಾಗಿದೆ

-ಸುಭಾಷ ಲಾಧ
ದಲಿತ ಸಂಘರ್ಷ ಸಮಿತಿ ಸಂಚಾಲಕ

ಗಂಗಾನಗರದಲ್ಲಿ ರಸ್ತೆ, ಚರಂಡಿ ಅವ್ಯವಸ್ಥೆ

• ಉದಯವಾಹಿನಿ, ಗಜೇಂದ್ರಗಡ

ಸಮೀಪದ ರಾಜೂರ ಗ್ರಾಮದಲ್ಲಿನ ಮುಖ್ಯ ಚರಂಡಿಗಳು ಹೂಳು ತುಂಬಿಕೊಂಡು ಗಬ್ಬೆದ್ದು ನಾರುತ್ತಿವೆ. ಗ್ರಾಮದಲ್ಲಿ ಎಲ್ಲೆಂದರಲ್ಲಿ ಕಸದ ರಾಶಿ ಬಿದ್ದಿರುವುದರಿಂದ ಸ್ವಚ್ಛತೆ ಇಲ್ಲದಂತಾಗಿದೆ. ಗ್ರಾಮದ ಲಂಬಾಣಿ ತಾಂಡಾದಿಂದ ಬಸ್ ನಿಲ್ದಾಣದವರೆಗೆ, ಬಸ್ ನಿಲ್ದಾಣದಿಂದ ಊರ ಹೊರಗಿನವರೆಗಿನ ಮುಖ್ಯ ಚರಂಡಿಗಳಲ್ಲಿ ಗಿಡ-ಗಂಟಿಗಳು ಬೆಳೆದು ಹೂಳು ತುಂಬಿಕೊಂಡು ಕೊಳಚೆ ನೀರು ಹರಿದು ಹೋಗುತ್ತಿಲ್ಲ. ಗ್ರಾಮದ 4ನೇ ವಾರ್ಡಿನ ಗಂಗಾ ನಗರದ ಬಡಾವಣೆಯ ಹಲವು ಕಡೆಗಳಲ್ಲಿ ಸಿಸಿ ರಸ್ತೆ, ಚರಂಡಿ ವ್ಯವಸ್ಥೆಯಿಲ್ಲದ ಕಾರಣ ಕೊಳಚೆ ನೀರು ರಸ್ತೆ ಮೇಲೆಯೇ ಹರಿಯುತ್ತಿದೆ. ಮುಖ್ಯ ರಸ್ತೆಯಿಂದ ಬಡಾವಣೆಗೆ ಸಂಪರ್ಕಿಸುವ ಮಸಾರಿ ಹೊಲದ ರಸ್ತೆ ತುಂಬ ಗುಂಡಿಗಳು ನಿರ್ಮಾಣವಾಗಿ ಕೊಳಚೆ ನೀರು ತುಂಬಿಕೊಂಡಿದೆ. ಈ ರಸ್ತೆಯಲ್ಲಿ ವಾಹನ ಸವಾರರು, ಪಾದಚಾರಿಗಳು ಸಂಚರಿಸುವುದು ದುಸ್ತರವಾಗಿದೆ.

ನೀರು ಪೂರೈಕೆಗೆ ಕ್ರಮ ಕೈಗೊಳ್ಳಿ

ಉದಯವಾಹಿನಿ ಚಿತ್ರ

ಗ್ರಾಮ ಪಂಚಾಯ್ತಿಯವರು ಶುದ್ಧ ಕುಡಿಯುವ ನೀರಿನ ಘಟಕ ದುರಸ್ತಿಗೊಳಿಸಿ ಗ್ರಾಮಸ್ಥರಿಗೆ ನೀರು ಪೂರೈಕೆಗೆ ಕ್ರಮ ಕೈಗೊಳ್ಳಬೇಕು ಎಂಬುದು ಗ್ರಾಮಸ್ಥರ ಆಗ್ರಹವಾಗಿದೆ.

ಗ್ರಾಮದ ಲಂಬಾಣಿ ತಾಂಡಾದ ಕೆಲ ಓಣಿಗಳಲ್ಲಿ ಚರಂಡಿ ನೀರು ರಸ್ತೆಯಲ್ಲಿಯೇ ನಿಂತು ನಾರುತ್ತಿದೆ. ಗ್ರಾಮ ಪಂಚಾಯ್ತಿಯಲ್ಲಿ ಕಸ ಸಂಗ್ರಹಿಸುವ ವಾಹನವಿದೆ.

ಆದರೆ ಘನತ್ಯಾಜ್ಯ ವಿಲೇವಾರಿ ಘಟಕ ನಿರ್ಮಿಸದ ಕಾರಣ ಗ್ರಾಮದಲ್ಲಿ ಕಸ ಸಂಗ್ರಹ ಕಾರ್ಯ ನಡೆಯುತ್ತಿಲ್ಲ. ಗ್ರಾಮದಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕ ಹಲವು ವರ್ಷಗಳಿಂದ ಕೆಟ್ಟು ನಿಂತಿದ್ದು, ಗ್ರಾಮಸ್ಥರು ಖಾಸಗಿ ಘಟಕದಿಂದ ಶುದ್ಧ ಕುಡಿ ಯುವ ನೀರು ಅವಲಂಭಿಸಿದ್ದಾರೆ. ಕೆಲವರು ನಲ್ಲಿಯ ನೀರನ್ನೇ ಕುಡಿಯಲು ಬಳಸುತ್ತಿದ್ದಾರೆ.

ಗಾಂಧಿ ವ್ಯಕ್ತಿತ್ವ ಪರಿಚಯಿಸುವ ಉದ್ದೇಶ

• ಉದಯವಾಹಿನಿ, ಬೆಳಗಾವಿ

ಉದಯವಾಹಿನಿ ಚಿತ್ರ

ಗಾಂಧೀಜಿ ವ್ಯಕ್ತಿತ್ವ ಪ್ರತಿಯೊಬ್ಬರಿಗೂ ಪರಿಚಯಿಸಬೇಕು ಎಂಬುದು ನಮ್ಮ ಉದ್ದೇಶ. ಹಾಗಾಗಿ ಕಾಂಗ್ರೇಸ್ ಅಧಿವೇಶನದ ಶತಮಾನೋತ್ಸವ ಪ್ರಯುಕ್ತ ವಿವಿಧ ಬಗೆಯ 41 ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ ನಡೆಸುವುದಾಗಿ ಘೋಷಿಸಿದ್ದೇವೆ ಎಂದು ಶತಮಾನೋತ್ಸವ ಸಮಿತಿ ಅಧ್ಯಕ್ಷರೂ ಆಗಿರುವ ಪ್ರವಾಸೋದ್ಯಮ ಸಚಿವ ಎಚ್. ಕೆ.ಪಾಟೀಲ ಹೇಳಿದರು.

ಇಲ್ಲಿನ ಸುವರ್ಣ ವಿಧಾನಸೌಧ ಆವರಣದಲ್ಲಿ ನಡೆಯಲಿರುವ ಮಹಾತ್ಮ ಗಾಂಧೀಜಿ ಪ್ರತಿಮೆ ಅನಾವರಣ ಸಮಾರಂಭದ ಸಿದ್ಧತೆಗಳನ್ನು ಬುಧವಾರ ಪರಿಶೀಲಿಸಿದ ನಂತರ ಮಾತನಾಡಿದರು.

1924ರಲ್ಲಿ ಬೆಳಗಾವಿಯಲ್ಲಿ ನಡೆದ ಅಧಿವೇಶನವು ಗಾಂಧಿ ಅವರ ಪಾಲಿಗೆ ರಾಜಕೀಯ ಉದ್ದೇಶವನ್ನಷ್ಟೇ ಹೊಂದಿರಲಿಲ್ಲ. ಬದಲಿಗೆ ದೇಶದಲ್ಲಿ ಸಾಮಾಜಿಕ ಬದಲಾವಣೆ ಮತ್ತು ಸಾಮಾಜಿಕ ಸುಧಾರಣೆ ತರಲು ಆಸ್ತ್ರವಾಗಿತ್ತು ಅಸ್ಪೃಶ್ಯತೆ ನಿವಾರಣೆ ಜತೆಗೆ, ಸ್ವಾತಂತ್ರ್ಯ ಹೋರಾಟಕ್ಕೆ ಧುಮುಕಲು ಜನರಲ್ಲಿ ಪ್ರೇರಣೆ ತುಂಬಿತು ಎಂದು ಸ್ಮರಿಸಿದರು.

ಸೌಧದಲ್ಲಿ ಪ್ರತಿಷ್ಠಾಪಿಸಿದ ಗಾಂಧೀಜಿ ಪ್ರತಿಮೆಯನ್ನು ಎಲ್ಲಾ ಪಕ್ಷಗಳ ನಾಯಕರು ಮತ್ತು ಸ್ವಾತಂತ್ರ್ಯ ಹೋರಾಟಗಾರರ ಸಮ್ಮುಖದಲ್ಲಿ ಡಿ.27ರಂದು ಬೆಳಿಗ್ಗೆ 10ಕ್ಕೆ ಅನಾವರಣ ಮಾಡಲಾಗುವುದು' ಎಂದು ತಿಳಿಸಿದರು.

ಮಕ್ಕಳ ರಕ್ಷಣಾ ನೀತಿ ಪರಿಣಾಮಕಾರಿಯಾಗಿ ಜಾರಿಯಾಗಲಿ

• ಉದಯವಾಹಿನಿ, ಚಿತ್ರದುರ್ಗ

ಜಿಲ್ಲೆಯ ಎಲ್ಲಾ ಶಾಲಾ-ಕಾಲೇಜುಗಳಲ್ಲಿ ಮಕ್ಕಳ ರಕ್ಷಣಾ ನೀತಿ-2016 ಪರಿಣಾಮಕಾರಿಯಾಗಿ ಜಾರಿಗೆ ತರಬೇಕು ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ಹೇಳಿದರು.

ನಗರದ ಜಿಲ್ಲಾ ಕ್ರೀಡಾಂಗಣ ಸಭಾಂಗಣದಲ್ಲಿ ಸೋಮವಾರ ರಾಜ್ಯ ಮಕ್ಕಳ ಹಕ್ಕುಗಳ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಪೊಲೀಸ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ, ಕಾರ್ಮಿಕ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗಳ ಸಹಯೋಗದಲ್ಲಿ ಆಯೋಜಿಸಲಾದ ಶಾಲೆಯಲ್ಲಿದೆ ಶಿಕ್ಷಣದ ಜೊತೆಗೆ ರಕ್ಷಣೆ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳ ರಕ್ಷಣಾ ನೀತಿಯಲ್ಲಿ ಮಕ್ಕಳಿಗೆ ಒದಗಿಸಬೇಕಾದ ಮೂಲ ಸೌಕರ್ಯಗಳು, ಭದ್ರತೆ, ಮಕ್ಕಳ ರಕ್ಷಣೆಗೆ ಕೈಗೊಳ್ಳಬೇಕಾದ ಕ್ರಮಗಳು, ಮುಂತಾದ

ಉದಯವಾಹಿನಿ ಚಿತ್ರ

ವಿಷಯಗಳ ಕುರಿತು ವಿಶೇಷ ಹಾಗೂ ವಿವರ ವಾದ ನಿಯಮಗಳಿವೆ. ಇವುಗಳನ್ನು ಶಾಲೆಗಳಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಬೇಕು. ಶಾಲೆಗಳು ಕೇವಲ ಶಿಕ್ಷಣ ಕೊಡುವ ಕೇಂದ್ರಗಳಾಗದೆ, ರಕ್ಷಣೆಯನ್ನೂ ಒದಗಿಸಬೇಕಾದ ತುರ್ತು ಅಗತ್ಯವಿದೆ. ಶಾಲೆಗಳು ಮಕ್ಕಳ ಹಕ್ಕುಗಳ ಉಲ್ಲಂಘನೆ ಆಗದಂತೆ ನೋಡಿಕೊಳ್ಳಬೇಕು. ಮಕ್ಕಳ ರಕ್ಷಣಾ ನೀತಿ ಕಟ್ಟುನಿಟ್ಟಾಗಿ ಶಾಲೆಗಳಲ್ಲಿ ಅನುಷ್ಠಾನವಾಗಬೇಕು ಎಂದು ಡಾ.ಕೆ.ಟಿ. ತಿಪ್ಪೇಸ್ವಾಮಿ ಹೇಳಿದರು.

ಇದೇ ಸಂದಭದಲ್ಲಿ ಉಚಿತ ಮತ್ತು ಕಡ್ಡಾಯ ಶಿಕ್ಷಣ ಕಾಯ್ದೆ-2009ರ ಅನ್ವಯ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮರಳಿ ಶಾಲೆಗೆ ಸೇರಿಸುವ ಆಂದೋಲನಾ ಕುರಿತು ತರಬೇತಿ ನೀಡಲಾಯಿತು.

ಕಾರ್ಯಕ್ರಮದಲ್ಲಿ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಪಿ.ಶೀಲಾ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಿ.ಸವಿತ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿ ಓ.ಪವಿತ್ರ, ಕ್ಷೇತ್ರ ಶಿಕ್ಷಣಾಧಿಕಾರಿ ಸುರೇಶ್ ಸೇರಿದಂತೆ, ಶಿಕ್ಷಣ ಇಲಾಖೆ ಅಧಿಕಾರಿಗಳು, ಅಕ್ಷರ ದಾಸೋಹ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಉಪಸ್ಥಿರಿದ್ದರು.

ಚಿತ್ರದುರ್ಗ ಉಪವಿಭಾಗದ ಡಿವೈಎಸ್‌ಪಿ ಪಿ.ಕೆ.ದಿನಕರ್ ಅವರು ಶಾಲೆಯಲ್ಲಿನ ಮಕ್ಕಳ ಸುರಕ್ಷತೆ ಹಾಗೂ ತೆರೆದ ಮನೆ ಕಾರ್ಯಕ್ರಮದ ಬಗ್ಗೆ ಹಾಗೂ ಶಿಕ್ಷಕ ಸಿ.ಎಲ್. ಏಕನಾಥ್ ಅವರು ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ-2009ರ ಕುರಿತು ಉಪನ್ಯಾಸ ನೀಡಿದರು.

1,500 ಜನವಸತಿಗೆ ಕುಡಿಯಲು ಹೇಮಾವತಿ, ತುಂಗಾನದಿ ನೀರು

• ಉದಯವಾಹಿನಿ, ಚಿಕ್ಕಮಗಳೂರು

ಉದಯವಾಹಿನಿ ಚಿತ್ರ

ಮಲೆನಾಡು ಭಾಗದ ಐದು ತಾಲ್ಲೂಕುಗಳ 1,500ಕ್ಕೂ ಹೆಚ್ಚು ಜನವಸತಿಗಳಿಗೆ ತುಂಗಾ, ಭದ್ರಾ, ಹೇಮಾವತಿ ನದಿಗಳಿಂದ ಬಹುಗ್ರಾಮ ಕುಡಿಯುವ ನೀರು ಯೋಜನೆಯಡಿ ನೀರು ಹರಿಸಲು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಯೋಜನ ಸಿದ್ಧಪಡಿಸಿದೆ.

ಕೊಪ್ಪ, ಶೃಂಗೇರಿ, ಎನ್.ಆರ್.ಪುರ, ಮೂಡಿಗೆರೆ, ಚಿಕ್ಕಮಗಳೂರು ತಾಲ್ಲೂಕಿನಲ್ಲಿ ಒಟ್ಟು 1,537 ಜನವಸತಿಗೆ ಕುಡಿಯುವ ನೀರಿನ ಸೌಕರ್ಯ ಕಲ್ಪಿಸಲು ಉದ್ದೇಶಿಸಲಾಗಿದೆ.

ಮೂಡಿಗೆರೆ, ಎನ್.ಆರ್.ಪುರ, ಶೃಂಗೇರಿ ಪಟ್ಟಣಗಳಿಗೂ ಕುಡಿಯುವ ನ

ದಿನ ಭವಿಷ್ಯ

ರಾಹುಕಾಲ	ಮಧ್ಯಾಹ್ನ	01:30 ರಿಂದ 03:00
ಗುಳಿಕ ಕಾಲ	ಬೆಳಿಗ್ಗೆ	09:00 ರಿಂದ 10:30
ಯಮಗಂಡ ಕಾಲ	ಬೆಳಿಗ್ಗೆ	06:00 ರಿಂದ 07:30

ಮೇಷ ಇತ್ತೀಚೆಗೆ ನಿಮಗೆ ಹತಾಶೆಯೆನಿಸುತ್ತಿದ್ದಲ್ಲಿ ಇಂದು ಸರಿಯಾದ ಆಲೋಚನೆಗಳು ಹಾಗೂ ಕಾರ್ಯಗಳು ನಿಮಗೆ ಅಗತ್ಯವಿರುವ ಸಮಾಧಾನವನ್ನು ತರುತ್ತವೆ ಎಂದು ನೀವು ನೆನಪಿಡಬೇಕು.

ವೃಷಭ ಕುತ್ತಿಗೆ / ಬೆನ್ನಿನಲ್ಲಿ ನಿರಂತರ ನೋವಿನಿಂದ ಬಳಲುವ ಸಾಧ್ಯತೆಯಿದೆ. ವಿಶೇಷವಾಗಿ ಇದರ ಜೊತೆ ಸಾಮಾನ್ಯ ದೌರ್ಬಲ್ಯವಿದ್ದಾಗ ಇದನ್ನು ನಿರ್ಲಕ್ಷಿಸದಿರಿ. ಇಂದು ವಿಶ್ರಾಂತಿ ಬಹಳ ಪ್ರಮುಖವಾಗಿರುತ್ತದೆ.

ಮಿಥುನ ನಿಮ್ಮ ವಿಶ್ವಾಸ ಮತ್ತು ಚೈತನ್ಯ ಅಧಿಕವಾಗಿರುತ್ತದೆ. ನೀವು ಅನಗತ್ಯವಾಗಿ ಹಣವನ್ನು ಖರ್ಚು ಮಾಡುವುದನ್ನು ನಿಲ್ಲಿಸಬೇಕು, ಇಲ್ಲದಿದ್ದರೆ ಅಗತ್ಯವಾದ ಸಮಯದಲ್ಲಿ ನಿಮ್ಮ ಹತ್ತಿರ ಹಣದ ಕೊರತೆ ಇರಬಹುದು.

ಕರ್ಕಾಟಕ ಹೊರಾಂಗಣ ಕ್ರೀಡೆ ನಿಮ್ಮನ್ನು ಸೆಳೆಯುತ್ತದೆ–ಧ್ಯಾನ ಮತ್ತು ಯೋಗ ಲಾಭ ತರುತ್ತವೆ. ವ್ಯಾಪರದಲ್ಲಿ ಪ್ರಯೋಜನ ಇಂದು ಅನೇಕ ವ್ಯಾಪಾರಿಗಳ ಮುಖದ ಮೇಲೆ ಸಂತೋಷವನ್ನು ತರಬಹುದು.

ಸಿಂಹ ನಿಮಗೇನು ಒಳ್ಳೆಯದೆಂದು ನಿಮಗೆ ಮಾತ್ರ ಗೊತ್ತು – ಆದ್ದರಿಂದ ಧೃಢವಾಗಿರಿ ಮತ್ತು ಧೈರ್ಯಶಾಲಿಗಳಾಗಿರಿ ಮತ್ತು ತಕ್ಷಣದ ನಿರ್ಧಾರಗಳನ್ನು ತೆಗೆದುಕೊಳ್ಳಿ ಹಾಗೂ ಫಲಿತಾಂಶಗಳಿಗೆ ಸಿದ್ಧವಾಗಿರಿ.

ಕನ್ಯಾ ನಿಮ್ಮ ಸಂತೋಷದ ಪ್ರಕೃತಿ ಇತರರಿಗೆ ಸಂತೋಷ ತರುತ್ತದೆ. ಯೋಜಿತ ವಲ್ಲದ ಮೂಲಗಳಿಂದ ಹಣದ ಲಾಭ ನಿಮ್ಮ ದಿನವನ್ನು ಬೆಳಗಿಸುತ್ತದೆ. ಮೊಮ್ಮಕ್ಕಳು ಅಪಾರ ಸಂತೋಷದ ಮೂಲವಾಗುತ್ತಾರೆ.

ತುಲಾ ನಿಮ್ಮ ಕನಸುಗಳು ಹಾಗೂ ವಾಸ್ತವವು ಪ್ರೀತಿಯ ಭಾವಪರವಶತೆಯಲ್ಲಿ ಇಂದು ಸೇರಿಹೋಗುತ್ತವೆ. ಸ್ಪರ್ಧೆ ಹೆಚ್ಚಾದ ಹಾಗೆ ಕೆಲಸದ ವೇಳಾಪಟ್ಟಿಯಲ್ಲಿ ಒತ್ತಡ ಉಂಟಾಗುತ್ತದೆ.

ವೃಶ್ಚಿಕ ನೀವು ಭಯ, ಅನುಮಾನ, ದುರಾಸೆಯಂಥ ನಕಾರಾತ್ಮಕ ಆಲೋಚನೆಗಳನ್ನು ಬಿಡಬೇಕು. ಏಕೆಂದರೆ ಇವುಗಳು ನೀವು ಬಯಸುವುದಕ್ಕೆ ವಿರುದ್ಧವಾದವುಗಳನ್ನು ಆಕರ್ಷಿಸಲು ಆಯಸ್ಕಾಂತದಂತೆ ಕೆಲಸ ಮಾಡುತ್ತದೆ.

ಧನಸ್ಸು ನಿಮ್ಮ ಸಂಗಾತಿಗೆ ನಿಮ್ಮ ಸ್ಥಾನವನ್ನು ತಿಳಿಸಕೊಡುವಲ್ಲಿ ಸಮಸ್ಯೆ ಹೊಂದಿರುತ್ತೀರಿ. ನಿಮ್ಮ ಸೃಜನಶೀಲತೆ ನಷ್ಟವಾಗಿದೆ ಎಂದು ನಿಮಗನಿಸುತ್ತದೆ ಮತ್ತು ನಿಮಗೆ ನಿರ್ಧಾರಗಳನ್ನು ತೆಗೆದುಕೊಳ್ಳುವುದು ಅತ್ಯಂತ ಕಷ್ಟವಾಗುತ್ತದೆ.

ಮಕರ ಆರೋಗ್ಯ ಚೆನ್ನಾಗಿರುತ್ತದೆ. ನೀವು ಉಳಿಸಿರುವ ಹಣ ನಿಮ್ಮ ಕೆಲಸಕ್ಕೆ ಬರಬಹುದು. ಇದರೊಂದಿಗೆ ಇದರ ಹೋಗುವ ದುಃಖವು ನಿಮಗೆ ಆಗುತ್ತದೆ. ಒಂದು ವೈವಾಹಿಕ ಸಂಬಂಧವನ್ನು ಹೊಂದಲು ಒಳ್ಳೆಯ ಸಮಯ.

ಕುಂಭ ಮನೋಬಲದ ನಿಮ್ಮ ಕೊರತೆ ನಿಮ್ಮನ್ನು ಭಾವನಾತ್ಮಕ ಮತ್ತು ಮಾನಸಿಕ ವರ್ತನೆಯ ಬಲಿಪಶುವಾಗಿ ಮಾಡಬಹುದು. ಯಾವುದೇ ಆಪ್ತ ಸಂಬಂಧಿಕರ ಬೆಂಬಲದಿಂದ ನೀವು ನಿಮ್ಮ ವ್ಯಾಪಾರದಲ್ಲಿ ಉತ್ತಮವಾಗಿ ಮಾಡಬಹುದು.

ಮೀನ ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ಮನೆಯ ಸಣ್ಣ ವಸ್ತುಗಳ ಮೇಲೆ ನಿಮ್ಮ ಸಾಕಷ್ಟು ಹಣ ಹಾಳಾಗಬಹುದು, ಇದರ ಕಾರಣದಿಂದ ನೀವು ಮಾನಸಿಕ ಒತ್ತಡಗೊಳಗಾಗಬಹುದು.

ಸಿದ್ಧೇಶ್ವರ ಶ್ರೀ ಜನಮಾನಸದಲ್ಲಿ ಅಚ್ಚಳಿಯದೆ ಉಳಿದ ಮಹಾನ್ ಚೇತನರು

ಸಿದ್ಧೇಶ್ವರ ಶ್ರೀಗಳ ಪ್ರವಚನಗಳು ಭಾರತದ ಹಲವಾರು ಭಾಷೆಗಳಲ್ಲಿ ಅನುವಾದವಾಗಿವೆ: ಡಾ. ವೃಷಭ ದೇವ ಶರ್ಮಾ

• ಉದಯವಾಹಿನಿ ವಿಜಯಪುರ

ವಿಜಯಪುರವು ಪುಣ್ಯ ಭೂಮಿ. ಇಲ್ಲಿ ಬಸವಾದಿ ಪ್ರಮತರಂತೆ ಸಮಾಜಕ್ಕೆ ಒಳಿತನ್ನು ಹಾಗೂ ಇಡೀ ಮಾನವ ಕುಲಕ್ಕೆ ಪರೋಪಕಾರಿಯಾಗಿ, ತ್ಯಾಗಜೀವಿಯಾಗಿ, ನಿರಾಭಾರಿಯಾಗಿ ಭರತ ಖಂಡದ ಜನಮಾನಸದಲ್ಲಿ ಅಚ್ಚಳಿಯದೇ ಉಳಿದ ಮಹಾನ ಚೇತನರಲ್ಲಿ ಶ್ರೀ ಸಿದ್ಧೇಶ್ವರ ಮಹಾಸ್ವಾಮಿಗಳು ಒಬ್ಬರಾಗಿದ್ದಾರೆ ಎಂದು ಹೃದಯಾಬಾದ ನಿವೃತ್ತ ಪ್ರಾಧ್ಯಾಪಕ ಡಾ. ವೃಷಭ ದೇವ ಶರ್ಮಾ ಅವರು ಹೇಳಿದರು.

ಇಡೀ ಮಾನವ ಕುಲಕ್ಕೆ ಪರೋಪಕಾರಿ

ಕೆ.ಪಿ.ಎಮ್.ಇ. ಸಂಸ್ಥೆಯ ಚಾಣಕ್ಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯ, ವಿಜಯಪುರ ಹಾಗೂ ಚಾಣಕ್ಯ ಕರಿಯರ್ ಅಕಾಡೆಮಿ, ವಿಜಯಪುರ ಇವರ ಸಂಯುಕ್ತ ಆಶ್ರಯದಲ್ಲಿ ಪರಮ ಪೂಜ್ಯ ಶ್ರೀ ಸಿದ್ಧೇಶ್ವರ ಮಹಾಸ್ವಾಮೀಜಿಯವರ ಗುರುನಮನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಿದ್ದೇಶ್ವರ ಶ್ರೀಗಳ ಪ್ರವಚನಗಳು ಭಾರತದ ಹಲವಾರು ಭಾಷೆಗಳಲ್ಲಿ ಅನುವಾದವಾಗಿವೆ. ಇಂತಹ ಮಹಾನ ಚೇತನರು ಶತಮಾನಕೊಮ್ಮೆ ಅವತರಿಸುತ್ತಾರೆ. ನಮ್ಮ ಜನರು ಕೊಡುವವರುಂಟು ಬೇಡುವವರು ಇಲ್ಲ. ಎತ್ತರದ ತೇಜ ಪುಂಜ ಅಸಾಧಾರಣವಾಗಿ ಬ್ರಹ್ಮಾಂಡದತ್ತ ತಮ್ಮ ವಿಚಾರಗಳಿಂದ ನಿರಾಭಾರಿಯಾಗಿ ಬದುಕಿದವರು. ವಿಚಾರ ಸಂಕಿರಣದಲ್ಲಿ ಮಂಡನೆಗೊಳ್ಳುವ ಲೇಖನಗಳನ್ನು ಡಾ. ಎಸ್.ಟಿ. ಮೇರವಾಡೆ ಹಾಗೂ ಡಾ. ಆರ್.ವ್ಹಿ. ಪಾಟೀಲ ಸಂಪಾದಿಸಿದ ಪೂಜ್ಯ ಶ್ರೀ ಸಿದ್ಧೇಶ್ವರ ಮಹಾಸ್ವಾಮೀಜಿಯವರ ಜೀವನ–ಸಾಹಿತ್ಯ–ತತ್ವದರ್ಶನ ಗ್ರಂಥ

ಉದಯವಾಹಿನಿ ಚಿತ್ರ

ಲೋಕಾರ್ಪಣೆಗೊಳಿಸಲಾಯಿತು. ಸಮಾರಂಭದ ದಿವ್ಯ ಸಾನ್ನಿಧ್ಯವನ್ನು ಜ್ಞಾನಯೋಗಾಶ್ರಮದ ಪರಮ ಪೂಜ್ಯ ಶ್ರೀ ಬಸವಲಿಂಗ ಮಹಾಸ್ವಾಮಿಗಳು ವಹಿಸಿದ್ದರು.

ಚಾಣಕ್ಯ ಕರಿಯರ್ ಅಕಾಡೆಮಿಯ ಸಂಸ್ಥಾಪಕ ಎನ್.ಎಮ್. ಬಿರಾದಾರ ಅಧ್ಯಕ್ಷತೆ ವಹಿಸಿದ್ದರು. ಚಾಣಕ್ಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಎಸ್.ಟಿ. ಮೇರವಾಡೆ ಸ್ವಾಗತಿಸಿದರು. ಡಾ. ಎಸ್.ಜೆ. ಜಹಾಗೀರದಾರ ಪರಿಚಯಿಸಿದರು.

ಸರ್ವಕಾಲಿಕ ಸತ್ಯ

ಸಿದ್ಧೇಶ್ವರ ಶ್ರೀಗಳ ವ್ಯಕ್ತಿತ್ವವನ್ನು ಪರಿಚಯಿಸಲು ಬ್ರಹ್ಮಾಂಡದಷ್ಟೇ ಸಂಕಿರಣವಾದದ್ದು. ಎಲ್ಲರೂ ಧರ್ಮ, ಪರೋಪಕಾರ, ಮಾನವೀಯ ಮೌಲ್ಯ, ಪ್ರೀತಿ ಹಾಗೂ ಸತ್ಯ ಮಕ್ಕಳ ತಲೆಯಲ್ಲಿ ಹೇಗೆ ಬಿತ್ತಬೇಕು ಎಂಬುದರ ಬಗ್ಗೆ ಸಿದ್ಧೇಶ್ವರ ಶ್ರೀಗಳ ಪ್ರವಚನಗಳು ಸರ್ವಕಾಲಿಕ ಸತ್ಯವಾಗಿವೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದರು.

ಪ್ರೊ. ಜಿ.ಎಸ್. ಬಗಲಿ ವಂದಿಸಿದರು.

ಒಂದನೇ ಗೋಷ್ಠಿಯಲ್ಲಿ ಪ್ರೊ. ಜಿ.ಆರ್. ಅಂಬಲಿ ಅವರು ಪೂಜ್ಯ ಶ್ರೀ ಸಿದ್ಧೇಶ್ವರ ಮಹಾಸ್ವಾಮೀಜಿಯವರ ಜೀವನ ಕುರಿತು,

ರೈತ ಬೆಳೆದ ಹತ್ತಿ, ಕುಂಬಾರ ಮಾಡಿದ ಹಣತೆ, ಗಾಣಿಗ ತಯಾರಿಸಿದ ಎಣ್ಣೆಗೆ ಬೆಲೆ ಬರುವುದು ಸಿದ್ಧೇಶ್ವರ ಮಹಾಸ್ವಾಮಿಗಳಂತಹ ಜ್ಯೋತಿ ಬೆಳಗಿದಾಗ ಮಾತ್ರ. ಸಿದ್ಧೇಶ್ವರ ಸ್ವಾಮಿಗಳ ಸಮಕಾಲೀನರಾಗಿ ಜನಿಸಿದ ನಾವುಗಳೇ ಧನ್ಯರು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

–ಡಾ. ಗೋವಿಂದರಾಜ ತಳಕೋಡ
ಕನ್ನಡ ವಿಭಾಗದ ಪ್ರಾಧ್ಯಾಪಕ

ಮನು ಪತ್ತಾರ ಪೂಜ್ಯ ಶ್ರೀ ಸಿದ್ಧೇಶ್ವರ ಮಹಾಸ್ವಾಮೀಜಿಯವರ ಸಾಹಿತ್ಯ ಕುರಿತು, ಶಿವಶರಣಪ್ಪ ಶಿರೂರು ಅವರು ಪೂಜ್ಯ ಶ್ರೀ ಸಿದ್ಧೇಶ್ವರ ಮಹಾಸ್ವಾಮೀಜಿಯವರ ತತ್ವದರ್ಶನ ಕುರಿತು ಮಾತನಾಡಿದರು.

ಕೀಟಗಳು ಉತ್ಪತ್ತಿಯಾಗದಂತೆ ನೈರ್ಮಲ್ಯ ಕಾಪಾಡಿ: ಸುರೇಶ್

• ಉದಯವಾಹಿನಿ, ಚಿತ್ರದುರ್ಗ

ಕೀಟಗಳು ಉತ್ಪತ್ತಿಯಾಗದಂತೆ ನೈರ್ಮಲ್ಯ ಕಾಪಾಡಿ ಎಂದು ಜಿಲ್ಲಾ ಆರೋಗ್ಯ ಮೇಲ್ವಿಚಾರಣಾ ಅಧಿಕಾರಿ ಸುರೇಶ್ ಮನವಿ ಮಾಡಿದರು. ಚಿತ್ರದುರ್ಗ ತಾಲ್ಲೂಕಿನ ಕಾಸವರಹಟ್ಟಿ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ಕಲ್ಲಹಳ್ಳಿ ಗೊಲ್ಲರಹಟ್ಟಿ ಗ್ರಾಮದಲ್ಲಿ ಜ್ವರ ಪ್ರಕರಣಗಳು ಕಂಡು ಬಂದ ಹಿನ್ನೆಲೆಯಲ್ಲಿ ಜ್ವರ ಚಿಕಿತ್ಸಾ ಕೇಂದ್ರ ತೆರೆದು, ಗುಂಪು ಸಭೆಗಳ ಮೂಲಕ ಮಾಹಿತಿ ಶಿಕ್ಷಣ ಸಂವಹನ ಪ್ರಕ್ರಿಯೆ ಚಟುವಟಿಕೆಯಲ್ಲಿ ಅವರು ಮಾತನಾಡಿದರು.

ಕೀಟಜನ್ಯ ರೋಗಗಳು ಸರಿಯಾಗಿ ನಿಯಂತ್ರಿಸದ್ದಿದ್ದಲ್ಲಿ ಮಾರಣಾಂತಿಕವಾಗುತ್ತದೆ. ಪರಿಸರ ಸ್ವಚ್ಛತೆ ನೈರ್ಮಲ್ಯ ಕಾಪಾಡುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ.

ಡೆಂಗಿ, ಚಿಕನ್ ಗುನ್ಯಾ ಮಲೇರಿಯಾ ಸೊಳ್ಳೆಗಳಿಂದ ಹರಡುತ್ತದೆ. ಹಾಗಾಗಿ ಮುನ್ನೆಚ್ಚರಿಕೆ ಕ್ರಮವಾಗಿ ಕೀಟಗಳು ಉತ್ಪತ್ತಿಯಾಗದಂತೆ ನೈರ್ಮಲ್ಯ ಕಾಪಾಡಿ ಎಂದರು. ಸೊಳ್ಳೆ ಪರದೆ ಬಳಕೆ ಮಾಡಿ. ಡೆಂಗಿ ಜ್ವರ ಬಂದ ಮೇಲೆ ಚಿಕಿತ್ಸೆ ಪಡೆಯುವುದಕ್ಕಿಂತ ಡೆಂಗ್ಯೂ ಜ್ವರ ಬಾರದ ಹಾಗೆ ಸೊಳ್ಳೆ ನಿಯಂತ್ರಿಸುವುದು ಸರಿಯಾದ ಕೆಲಸ. ಗಾಬರಿಯಾಗುವುದು ಬೇಡ.

ಉದಯವಾಹಿನಿ ಚಿತ್ರ

ಸೊಳ್ಳೆ ಕಡಿತದಿದ ಸೂಕ್ತ ರಕ್ಷಣೆ ಪಡೆಯಿರಿ ಎಂದರು.

ಗ್ರಾಮದ ಶಾಲೆಯ ಆವರಣದಲ್ಲಿ ಜ್ವರ ಚಿಕಿತ್ಸಾ ಕೇಂದ್ರ ಸ್ಥಾಪಿಸಿ, ಸಮುದಾಯ ಆರೋಗ್ಯ ಅಧಿಕಾರಿಗಳಾದ ರಶ್ಮಿ, ಶಾಂತಲಾ, ಜ್ವರ ತಪಾಸಣೆ, ರಕ್ತ ಲೇಪನ ಸಂಗ್ರಹಣೆ ಪರೀಕ್ಷೆ, ಚಿಕಿತ್ಸೆ ನೀಡಿದರು. ಇದೇ ಸಂದರ್ಭದಲ್ಲಿ ಮನೆ ಮನೆ ಭೇಟಿ ನೀಡಿ, ಮಾಹಿತಿ ಶಿಕ್ಷಣ ನೀಡಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಮಲ್ಲಿಕಾರ್ಜುನ್, ಗ್ರಾಮ ಪಂಚಾಯಿತಿ ಸದಸ್ಯರಾದ ನಿಜಲಿಂಗಪ್ಪ, ಶಾಲಾ ಶಿಕ್ಷಕರಾದ ಶಾಂತಲಾ, ಪರಿಮಳ, ಆರೋಗ್ಯ ನಿರೀಕ್ಷಣಾಧಿಕಾರಿ ಜ್ಯೋತಿ, ಆಶಾ ಕಾರ್ಯಕರ್ತೆ ಪಾರ್ವತಮ್ಮ, ಶೋಭಾ ಹಾಗೂ ಗ್ರಾಮಸ್ಥರು ಇದ್ದರು.

ಯಾವುದೇ ಜ್ವರವಿರಲಿ ರಕ್ತಪರೀಕ್ಷೆ ಮಾಡಿ. ದೇವರನ್ನು ಕೇಳಿ ಚಿಕಿತ್ಸೆ ಪಡೆಯುತ್ತೇನೆ ಎಂಬ ಮೂಢನಂಬಿಕೆಯಿಂದ ದೂರ ಬನ್ನಿ. ಈ ಗ್ರಾಮದಲ್ಲಿರುವ 84 ಮನೆಗಳಲ್ಲಿ 10 ಮನೆಗಳಿಗಿಂತ ಹೆಚ್ಚಿನ ಮನೆಗಳಲ್ಲಿ ಲಾರ್ವ ಕಂಡು ಬಂದಿದೆ. ನಿಮ್ಮ ಮನೆಯ ನೀರಿನ ಸಂಗ್ರಹ ಪರಿಕರಗಳಾದ ತೊಟ್ಟಿ, ಬಕೆಟ್, ಡ್ರಮ್, ಬ್ಯಾರೆಲ್ ಇತ್ಯಾದಿಗಳನ್ನು ಸ್ವಚ್ಛವಾಗಿ ತೊಳೆದು ಒಣಗಿಸಿ ನಂತರ ನೀರನ್ನು ಸಂಗ್ರಹಿಸಿ ಮುಚ್ಚಳವನ್ನು ಮುಚ್ಚಿ ವಾರಕ್ಕೊಮ್ಮೆಯಾದರೂ ಡ್ರೈ ಡೇ ಆಚರಿಸಿ. ಮುಂಜಾನೆ, ಮುಸ್ಸಂಜೆಯಲ್ಲಿ ಹೊಂಗೆ ಮತ್ತು ಬೇವಿನ ಸೊಪ್ಪಿನ ಹೊಗೆ ಹಾಕುವುದರಿಂದ ಸೊಳ್ಳೆಗಳ ನಿಯಂತ್ರಣವಾಗುತ್ತದೆ

–ಎನ್.ಎಸ್.ಮಂಜುನಾಥ್,
ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ

ಶೆಟ್ಟರ್ ಅವರೇ ರತ್ನಗಂಬಳಿ ಹಾಸಿ ಆಹ್ವಾನಿಸುವೆ

• ಉದಯವಾಹಿನಿ,ಬೆಳಗಾವಿ

ಉದಯವಾಹಿನಿ ಚಿತ್ರ

ಶೆಟ್ಟರ್‌ಗೆ ಡಿಕೆಶಿ ಟಾಂಗ್

ಬೆಳಗಾವಿಯ ಅಧಿವೇಶನದ ಶತಮಾನೋತ್ಸವ ಹಿನ್ನೆಲೆಯಲ್ಲಿ ಸುವರ್ಣಸೌಧದ ಬಳಿ ಮಹಾತ್ಮ ಗಾಂಧಿ ಪುತ್ಥಳಿ ಅನಾವರಣ ಕಾರ್ಯಕ್ರಮಕ್ಕೆ ರತ್ನ ಗಂಬಳಿ ಹಾಕಿಸಿ ಆಹ್ವಾನಿಸುವೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಅವರು ಬಿಜೆಪಿ ಸಂಸದ ಜಗದೀಶ್ ಶೆಟ್ಟರ್ ಅವರ ಹೇಳಿಕೆ ಟಾಂಗ್ ನೀಡಿದರು.

ಗಾಂಧಿ ಅವರ ಪ್ರತಿಮೆ ಅನಾವರಣ ಕಾರ್ಯಕ್ರಮಕ್ಕೆ ಗೌರವಯುತವಾಗಿ ಆಹ್ವಾನ ಮಾಡಿಲ್ಲ ಎಂಬ ಶೆಟ್ಟರ್ ಅವರ ಆರೋಪದ ಬಗ್ಗೆ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರ ಅವರು, ಅವರ ಮನೆವರೆಗೂ ರತ್ನ ಗಂಬಳಿ ಹಾಕಿಸೋಣ. ನನ್ನ ಸಮ್ಮುಖದಲ್ಲೇ ಸಿಎಂ ಅವರಿಗೆ ಕರೆ ಮಾಡಿ ಆಹ್ವಾನ ನೀಡಿದ್ದಾರೆ.

ಆರ್.ಅಶೋಕ್, ನಾರಾಯಣಸ್ವಾಮಿ, ಸಭಾಪತಿಗಳಿಗೆ ಆಹ್ವಾನ ನೀಡಿದ್ದಾರೆ. ಆಹ್ವಾನ ಪತ್ರಿಕೆಯಲ್ಲಿ ಅವರ ಹೆಸರು ಸೇರಿಸಿದ್ದೇವೆ. ಆ ಕಾರ್ಯಕ್ರಮ ಬಿಡಿ, ಅವರ ಸರ್ಕಾರ ಇದ್ದಾಗ ಕೇಂದ್ರ ಸಚಿವರಾಗಿದ್ದ ಸುರೇಶ್ ಅಂಗಡಿ ಅವರ ಪಾರ್ಥಿವ ಶರೀರವನ್ನು ಗೌರವಯುತವಾಗಿ ಅಂತ್ಯ ಸಂಸ್ಕಾರ ಮಾಡಲು ಅವರಿಂದ ಸಾಧ್ಯವಾಗಿಲ್ಲ ಎಂದು ಡಿಕೆಶಿ ದೂರಿದರು.

ಅವರ ಬೀಗರಿಗೆ ಸರಿಯಾಗಿ ಅಂತ್ಯಸಂಸ್ಕಾರ ಮಾಡಲು ಸಾಧ್ಯವಾಗಲಿಲ್ಲವಲ್ಲ, ಅದರ ಬಗ್ಗೆ ಅವರು ಮೊದಲು ಮಾತನಾಡಲಿ. ಆಗ ಬಿಜೆಪಿ ನಾಯಕರರು ಯಾರೂ ಮಾತನಾಡಲಿಲ್ಲ. ವಿಶೇಷ ಮಿಲಿಟರಿ ವಿಮಾನದಲ್ಲಿ ಪಾರ್ಥೀವ ಶರೀರ ತಂದು ಅವರ ಕುಟುಂಬ ಸದಸ್ಯರ ಸಮ್ಮುಖದಲ್ಲಿ ಅಂತ್ಯಸಂಸ್ಕಾರ ಮಾಡಲು ಆಗಲಿಲ್ಲ. ಆಗ ಶೆಟ್ಟರ್ ಅವರ ಬಾಯಿಗೆ ಏನಾಗಿತ್ತು ಎಂದು ತಿರುಗೇಟು ನೀಡಿದರು.

ಒಳಚರಂಡಿ ದುರಸ್ತಿ ವೇಳೆ ಕಾರ್ಮಿಕ ಸಾವು

• ಉದಯವಾಹಿನಿ, ಚಿತ್ರದುರ್ಗ

ಒಳಚರಂಡಿ ದುರಸ್ತಿ ಕಾರ್ಮಿಕ ಉಸಿರುಗಟ್ಟಿ ಸಾವನ್ನಪ್ಪಿರುವ ಭೀಕರ ಘಟನೆ ಚಿತ್ರದುರ್ಗದಲ್ಲಿ ನಡೆದಿದೆ. ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನಲ್ಲಿ ಈ ಘಟನೆ ನಡೆದಿದ್ದು, ಇಲ್ಲಿನ ರಾಘವೇಂದ್ರ ಕಲ್ಯಾಣ ಮಂಟಪದಲ್ಲಿ ಡಿಸೆಂಬರ್ 18ರಂದು ನಡೆದಿದ್ದ ದುರ್ಘಟನೆ ತಡವಾಗಿ ಬೆಳಕಿಗೆ ಬಂದಿದೆ. ಮೃತ ಕಾರ್ಮಿಕನನ್ನು ಚಳ್ಳಕೆರೆಯ ಗಾಂಧಿನಗರ ಬಡಾವಣೆಯ ರಂಗಸ್ವಾಮಿ (48) ಎಂದು ಗುರುತಿಸಲಾಗಿದೆ.

ಮೂಲಗಳ ಪ್ರಕಾರ ಒಳಚರಂಡಿ ಕಟ್ಟಿ ಕೊಂಡಿದ್ದರಿಂದ ರಾಘವೇಂದ್ರ ಕಲ್ಯಾಣ ಮಂಟಪದ ಮಾಲೀಕ ಅದರ ದುರಸ್ತಿಗಾಗಿ ರಂಗಸ್ವಾಮಿಯನ್ನು ಕರೆಸಿದ್ದರು.

ಆದರೆ ದುರಸ್ತಿಗಾಗಿ ಒಳಚರಂಡಿಗೆ ಇಳಿದ ಆತ ಉಸಿರುಗಟ್ಟಿ ಸಾವನ್ನಪ್ಪಿದ್ದಾನೆ. ಆರಂಭದಲ್ಲಿ ಆತ ನೀರಿನ ತೊಟ್ಟಿಯಲ್ಲಿ ಮುಳುಗಿ ಸಾವನ್ನಪ್ಪಿದ್ದ ಎಂದು ಹೇಳಲಾಗಿತ್ತು.

ಆದರೆ ಬಳಿಕ ಸಫಾಯಿ ಕರ್ಮಚಾರಿಗಳ ಸೇವಾ ಸಮಿತಿ ಈ ಬಗ್ಗೆ ಡಿಸಿ ಕಚೇರಿಗೆ ದೂರು ಸಲ್ಲಿಸಿದಾಗ ಪ್ರಕರಣ ಬೆಳಕಿಗೆ ಬಂದಿದೆ.

ಉದಯವಾಹಿನಿ ಚಿತ್ರ

ಪ್ರಕರಣ ದಾಖಲು

ದೂರು ಆಧರಿಸಿ ನಗರಸಭೆ ಕಂದಾಯ ನಿರೀಕ್ಷಕ ಗುರುಪ್ರಸಾದ್ ಸ್ಥಳ ಪರಿಶೀಲನೆ ನಡೆಸಿದಾಗ ರಂಗಸ್ವಾಮಿ ಉಸಿರುಗಟ್ಟಿ ಸಾವನ್ನಪ್ಪಿರುವುದು ಸ್ಪಷ್ಟವಾಗಿದೆ. ಇದೀಗ ಕಲ್ಯಾಣ ಮಂಟಪದ ಮಾಲೀಕ ಗುರುವೀರ ನಾಯಕ್ ವಿರುದ್ಧ ಚಳ್ಳಕೆರೆ ಪೊಲೀಸ್ ಠಾಣೆಗೆ ನಗರಸಭೆ ಅಧಿಕಾರಿ ದೂರು ಸಲ್ಲಿಸಿದ್ದು, ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ತನಿಖೆ ನಡೆಸಿದ್ದಾರೆ.

ಸರ್ಕಾರಿ ಜಮೀನಿನ ಮೇಲೆ ಪಟ್ಟಭದ್ರ ಶಕ್ತಿಗಳ ಕಣ್ಣು: ಉಮೇಶ ಮುದ್ನಾಳ

• ಉದಯವಾಹಿನಿ, ಯಾದಗಿರಿ

ಗುರುಮಠಕಲ್ ತಾಲ್ಲೂಕಿನ ಕಂದಕೂರ ಗ್ರಾಮದಲ್ಲಿ ಸರಕಾರಿ ಗೈರಾಣ ಸರ್ವೆ. ನಂ 300 ರಲ್ಲಿ ಒಟ್ಟು 9–25 ಗಂಟೆ ಸರ್ಕಾರಿ ಜಮೀನನ್ನು ಪೊಲೀಸ್ ಬಂದೋಬಸ್ತನಲ್ಲಿ ಜಿಲ್ಲಾಡಳಿತ ವಶಪಡಿಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಅವರಿಗೆ ಪ್ರದೇಶ ಕೋಲಿ ಸಮಾಜದ ರಾಜ್ಯ ಸಂಘಟನಾ ಕಾರ್ಯದರ್ಶಿ ಹಾಗೂ ಸಮಾಜಿಕ ಹೋರಾಟಗಾರ ಉಮೇಶ ಕೆ. ಮುದ್ನಾಳ ಮನವಿ ಪತ್ರ ಸಲ್ಲಿಸಿ ಕ್ರಮಕ್ಕೆ ಒತ್ತಾಯಿಸಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಯಾದಗಿರಿ ಜಿಲ್ಲೆಯ ಗುರುಮಠಕಲ್ ತಾಲೂಕಿನ ಗುರುಮಠಕಲ್ ಹೋಬಳಿಯಲ್ಲಿ ಬರುವ ಕಂದಕೂರ ಗ್ರಾಮದ ಸ.ನಂ 300 ರ ಒಟ್ಟು ಕ್ಷೇತ್ರ 9–25 ಎ–ಗುಂಟೆ ಜಮೀನು ಇದು ಗೈರಾಣ ಜಮೀನಾಗಿದ್ದು, ಈ ಜಮೀನಿನಲ್ಲಿ ಸಾಮಾನ್ಯವಾಗಿ ಹುಲ್ಲುಗಿಡ ಗಂಟೆಗಳು ಬೆಳೆದಿರುತ್ತದೆ, ಆ ಜಮೀನಿನಲ್ಲಿ ಗ್ರಾಮದ ಬಡ ರೈತರು ತಮ್ಮ ಜನ–ಜಾನುವಾರುಗಳು ಇಲ್ಲಿಯೇ ಬೀಡು ಬಿಟ್ಟು ಮೇಯಿಸುತ

ತುರ್ತು ಲ್ಯಾಂಡಿಂಗ್‌ಗೆ ಮನವಿ ಮಾಡಿದ ಮರುಕ್ಷಣವೇ ವಿಮಾನ ಪತನ

ಕ್ಷಣಾರ್ಧದಲ್ಲಿ ನೆಲಕ್ಕಪ್ಪಳಿಸಿದ ಅಜೆರ್ಬೈಜಾನ್ ಏರ್‌ಲೈನ್ಸ್‌ಗೆ ಸೇರಿದ ಪ್ರಯಾಣಿಕ ವಿಮಾನ, 70 ಜನ ಪ್ರಯಾಣಿಕರಿದ್ದ ನಾಗರಿಕ ವಿಮಾನ ಪತನ



ಕಝಾಕಿಸ್ತಾನದಲ್ಲಿ ಭೀಕರ ದುರಂತ

ಅಕ್ಟೌ: ಅಜೆರ್ಬೈಜಾನ್ ಏರ್‌ಲೈನ್ಸ್‌ಗೆ ಸೇರಿದ ಪ್ರಯಾಣಿಕ ವಿಮಾನವೊಂದು, ಕಝಾಕಿಸ್ತಾನದ ಅಕ್ಟೌ ನಗರದ ಬಳಿ ಪತನಗೊಂಡ ಘಟನೆ ನಡೆದಿದೆ. ವಿಮಾನದಲ್ಲಿ ಸಿಬ್ಬಂದಿಯೂ ಸೇರಿದಂತೆ 62 ಜನ ಪ್ರಯಾಣಿಕರಿದ್ದರು ಎಂದು ಪ್ರಾಥಮಿಕ ವರದಿಗಳು ಹೇಳಿವೆ. ವಿಮಾನ ಪತನಗೊಳ್ಳುತ್ತಿದ್ದಂತೇ ಬೆಂಕಿ ಹೊತ್ತಿಕೊಂಡ ಪರಿಣಾಮ ವಿಮಾನವು ಸಂಪೂರ್ಣ ಸುಟ್ಟುಕರಕಲಾಗಿದೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ. ಈ ಕುರಿತು ಕಝಾಕಿಸ್ತಾನದ ತುರ್ತು ಸಚಿವಾಲಯದ ಹೇಳಿಕೆಯನ್ನು ಉಲ್ಲೇಖಿಸಿರುವ ರಾಯಿಟರ್ಸ್, ವಿಮಾನವು ಅಜರ್‌ಬೈಜಾನ್‌ನ ರಾಜಧಾನಿ ಬಾಕುದಿಂದ ರಷ್ಯಾದ ಚೆಚೆನ್ಯಾದ ಗ್ರೋಜ್ನಿಗೆ ತೆರಳುತ್ತಿತ್ತು. ಆದರೆ ಗ್ರೋಜ್ನಿಯಲ್ಲಿ ಭಾರೀ ಹಿಮಪಾತ ಸಂಭವಿಸಿದ್ದರಿಂದ ವಿಮಾನದ ಮಾರ್ಗ ವನ್ನು ಬದಲಾಯಿಸಲಾಗಿತ್ತು ಎಂದು ವರದಿ ಮಾಡಿದೆ. ವಿಮಾನದ ಅಪಘಾತದ ದೃಶ್ಯಗಳು ಇದೀಗ ಸಾಮಾಜಿಕ ಜಾಲತಾಣದಲ್ಲಿ ಭಾರೀ ವೈರಲ್ ಆಗಿದ್ದು, ನೆಲಕ್ಕೆ ಅಪ್ಪಳಿಸುವ ಮೊದಲೇ ವಿಮಾನದಲ್ಲಿ ಬೆಂಕಿ ಹೊತ್ತಿ ಕೊಂಡಿರುವುದನ್ನು ಸ್ಪಷ್ಟವಾಗಿ ಗುರುತಿಸಬಹುದಾಗಿದೆ. ತುರ್ತು ಲ್ಯಾಂಡಿಂಗ್ ಮಾಡುವ ಪೈಲೆಟ್ ಪ್ರಯತ್ನ ವಿಫಲವಾದ ಪರಿಣಾಮ ಅಪಘಾತ ಸಂಭವಿಸಿದೆ ಎಂಬ ಮಾತುಗಳು ಕೇಳಿಬರುತ್ತಿವೆ.

ಅಕ್ಟೌ ವಿಮಾನ ನಿಲ್ದಾಣಕ್ಕೆ ಸಮೀಪದಲ್ಲೇ ಅಪಘಾತ ಸಂಭವಿಸಿದ್ದು, ವಿಮಾನದಲ್ಲಿ ಕಂಡುಬಂದ ತಾಂತ್ರಿಕ ದೋಷವೇ ಅಪಘಾತಕ್ಕೆ ಕಾರಣ ಇರಬಹುದು ಎಂದು ಅಂದಾಜಿಸಲಾಗಿದೆ. ಅಪಘಾತದಲ್ಲಿ ಕೆಲವು ಪ್ರಯಾಣಿಕರು ಬದುಕುಳಿದಿರುವ ಸಾಧ್ಯತೆ ಇದೆ ಎಂದು ಪ್ರತ್ಯಕ್ಷದರ್ಶಿಗಳ ಹೇಳಿಕೆ ಆಧರಿಸಿ 'ರಾಯಿಟರ್ಸ್' ವರದಿ ಮಾಡಿದೆ. ವಿಮಾನ ನಿಲ್ದಾಣದ ಬಳಿ ಬರುತ್ತಿದ್ದಂತೇ ನಿಯಂತ್ರಣ ಕಳೆದುಕೊಂಡ ಎಂಬ್ರೇರ್ 190 ವಿಮಾನದ ಪೈಲೆಟ್, ತುರ್ತು ಲ್ಯಾಂಡಿಂಗ್‌ಗಾಗಿ ನಿಲ್ದಾಣದ ಸಿಬ್ಬಂದಿಗೆ ಮನವಿ ಮಾಡಿಕೊಂಡಿದ್ದಾರೆ. ಆದರೆ ಲ್ಯಾಂಡಿಂಗ್‌ಗೂ ಮೊದಲೇ ವಿಮಾನ ಅಪಘಾತಕ್ಕೀಡಾಗಿದೆ ಎಂಬುದು ಪ್ರಾಥಮಿಕ ತನಿಖೆಯಿಂದ ಗೊತ್ತಾಗಿದೆ. ಆನ್‌ಲೈನ್ ಫ್ಲೈಟ್ ಟ್ರ್ಯಾಕಿಂಗ್ ವೆಬ್‌ಸೈಟ್ FlightRadar24 ನಿಂದ ದೊರೆತಿರುವ ಡೇಟಾ ಪ್ರಕಾರ, ವಿಮಾನವು ಕ್ಯಾಸ್ಪಿಯನ್ ಸಮುದ್ರದ ಮೇಲಿನಿಂದ ಚೆಚೆನ್ಯಾದ ತನ್ನ ಗಮ್ಯಸ್ಥಾನದ ಕಡೆಗೆ ಹೋಗುತ್ತಿತ್ತು. ವಿಮಾನವು ರಷ್ಯಾದ ಪ್ರಾದೇಶಿಕ ಗಡಿಯನ್ನು ಪ್ರವೇಶಿಸಿ ವಿಮಾನ ನಿಲ್ದಾಣದ ಬಳಿ ಬಂದಿತ್ತು. ತುರ್ತು ಲ್ಯಾಂಡಿಂಗ್ ಮನವಿಯ ಬಳಿಕ ವಿಮಾನ ನಿಲ್ದಾಣದಿಂದ ಕೆಲವು ಕಿಲೋಮೀಟರ್ ದೂರದಲ್ಲಿರುವ ಕ್ಯಾಸ್ಪಿಯನ್ ಸಮುದ್ರ ತೀರದ ಬಳಿ ವಿಮಾನವು ಅಪಘಾತಕ್ಕೀಡಾಗಿದೆ.

ಕ್ಯಾಸ್ಪಿಯನ್ ಸಮುದ್ರದ ಪೂರ್ವ ತೀರದಲ್ಲಿರುವ ತೈಲ ಮತ್ತು ಅನಿಲ ಕೇಂದ್ರವಾದ ಅಕ್ಟೌದಿಂದ ಮೂರು ಕಿಲೋಮೀಟರ್ ದೂರದಲ್ಲಿ, ಎಂಬ್ರೇರ್ 190 ಅಪಘಾತಕ್ಕೀಡಾಗಿದೆ ಎಂದ ಅಜೆರ್ಬೈಜಾನ್ ಏರ್ಲೈನ್ಸ್ ಹೇಳಿದೆ ಎಂದು ಸುದ್ದಿ ಸಂಸ್ಥೆ ಎಎಫ್‌ಪಿ ವರದಿ ಮಾಡಿದೆ.

ಅಪಘಾತಕ್ಕೀಡಾಗುತ್ತಿರುವ ಸಾಮಾಜಿಕ ಜಾಲತಾಣದಲ್ಲಿ ವೈರಲ್

ಆಘಾತಕಾರಿ ಬೆಳವಣಿಗೆಯೊಂದರಲ್ಲಿ ಕಝಾಕಿಸ್ತಾನದ ಅಕ್ಟೌ ನಗರದ ಬಳಿ ಪ್ರಯಾಣಿಕ ವಿಮಾನವೊಂದು ಭೀಕರ ಅಪಘಾತಕ್ಕೀಡಾಗಿದೆ. ವಿಮಾನದಲ್ಲಿ ತಾಂತ್ರಿಕ ದೋಷ ಕಂಡುಬಂದ ಪರಿಣಾಮ ಪೈಲೆಟ್ ತುರ್ತು ಲ್ಯಾಂಡಿಂಗ್‌ಗೆ ಮನವಿ ಮಾಡಿದ ಮರುಕ್ಷಣವೇ, ವಿಮಾನದಲ್ಲಿ ಬೆಂಕಿ ಹೊತ್ತಿಕೊಂಡು ನೆಲಕ್ಕೆ ಅಪ್ಪಳಿಸಿದೆ ಎಂದು ಪ್ರತ್ಯಕ್ಷ ದರ್ಶಿಗಳು ತಿಳಿಸಿದ್ದಾರೆ. ಅಜೆರ್ಬೈಜಾನ್ ಏರ್‌ಲೈನ್ಸ್‌ಗೆ ಸೇರಿದ ಪ್ರಯಾಣಿಕ ವಿಮಾನ ಅಪಘಾತಕ್ಕೀಡಾಗುತ್ತಿರುವ ದೃಶ್ಯಗಳು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿವೆ.

ಸದ್ಯ ವಿಮಾದ ಅವಶೇಷಗಳನ್ನು ಸುತ್ತುವರೆದಿರುವ ಭದ್ರತಾ ಸಿಬ್ಬಂದಿ, ರಕ್ಷಣಾ ಕಾರ್ಯಾಚರಣೆಯಲ್ಲಿ ನಿರತರಾಗಿದ್ದಾರೆ ಎಂದು ಮೂಲಗಳು ಖಚಿತಪಡಿಸಿವೆ. ಅಪಘಾತದಲ್ಲಿ ಬದುಕುಳಿದವರ ಸಂಖ್ಯೆ ಕಡಿಮೆ ಇದೆ ಎಂದು ಪ್ರತ್ಯಕ್ಷದರ್ಶಿಗಳು ಹೇಳಿದ್ದಾರೆ.

ಅಫ್ಘಾನ್ ಮೇಲೆ ಪಾಕ್ ವಾಯುದಾಳಿ, ಪ್ರತೀಕಾರದ ಎಚ್ಚರಿಕೆ



ಇಸ್ಲಮಾಬಾದ್: ನೆರೆಯ ಅಫ್ಘಾನಿಸ್ತಾನದಲ್ಲಿ ಶಂಕಿತ ಭಯೋತ್ಪಾದನಾ ಗುರಿಗಳ ಮೇಲೆ ಪಾಕಿಸ್ತಾನ ತಡರಾತ್ರಿ ವಾಯುದಾಳಿ ನಡೆಸಿದ ನಂತರ ಮಹಿಳೆಯರು ಮತ್ತು ಮಕ್ಕಳು ಸೇರಿದಂತೆ ಕನಿಷ್ಠ 15 ಜನರು ಸಾವನ್ನಪ್ಪಿದ್ದಾರೆ ಎಂದು ಭದ್ರತಾ ಅಧಿಕಾರಿಗಳು ತಿಳಿಸಿದ್ದಾರೆ. ತಾಲಿಬಾನ್ ಏಕಪಕ್ಷೀಯ ವೈಮಾನಿಕ ದಾಳಿಯನ್ನು ಖಂಡಿಸಿತು ಮತ್ತು ಪ್ರತೀಕಾರದ ಎಚ್ಚರಿಕೆ ನೀಡಿದೆ.

ದಾಳಿಗಳು ಪಾಕಿಸ್ತಾನಿ ತಾಲಿಬಾನ್ ಅನ್ನು ಗುರಿಯಾಗಿಸಿಕೊಂಡು ಪಾಕಿಸ್ತಾನದ ಗಡಿಯಲ್ಲಿರುವ ಪಕ್ಟಿಕಾ ಪ್ರಾಂತ್ಯದ ಪರ್ವತ ಪ್ರದೇಶದಲ್ಲಿ ನಡೆಸಲಾಯಿತು ಎಂದು ಅಧಿಕಾರಿಗಳು ಅಸೋಸಿಯೇಟೆಡ್ ಪ್ರೆಸ್‌ಗೆ ತಿಳಿಸಿದ್ದಾರೆ. ಅಫಘಾನ್ ಮಾಧ್ಯಮ ವರದಿಗಳ ಪ್ರಕಾರ, ದಾಳಿಗಳು ಏಳು ಹಳ್ಳಿಗಳನ್ನು ಗುರಿಯಾಗಿಸಿಕೊಂಡಿವೆ, ಅವುಗಳಲ್ಲಿ ಒಂದು ಸಂಪೂರ್ಣವಾಗಿ ನಾಶವಾಯಿತು. ತರಬೇತಿ ಸೌಲಭ್ಯವನ್ನು ಕೆಡವಲಾಯಿತು ಮತ್ತು ಕೆಲವು ಭಯೋತ್ಪಾದಕರು ಸಹ ದಾಳಿಯಲ್ಲಿ ಕೊಲ್ಲಲ್ಪಟ್ಟರು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ತಾಲಿಬಾನ್‌ನ ರಕ್ಷಣಾ ಸಚಿವಾಲಯವು ಪಾಕಿಸ್ತಾನದ ವೈಮಾನಿಕ ದಾಳಿಯನ್ನು ಖಂಡಿಸಿದೆ, ಅವರು ನಾಗರಿಕರನ್ನು ಗುರಿಯಾಗಿಸಿಕೊಂಡಿದ್ದಾರೆ ಮತ್ತು ಬಲಿಪಶುಗಳಲ್ಲಿ ಹೆಚ್ಚಿನವರು ವಜೀರಿಸ್ತಾನ್ ಪ್ರದೇಶದ ನಿರಾಶ್ರಿತರು ಎಂದು ಹೇಳಿದೆ. ಪಾಕಿಸ್ತಾನಿ ತಾಲಿಬಾನ್ ಅಥವಾ ತೆಹ್ರೀಕ್-ಎ-ತಾಲಿಬಾನ್ ಪಾಕಿಸ್ತಾನ್ (ಟಿಟಿಪಿ) ತನ್ನ ದೇಶದ ಮೇಲೆ ಅಫ್ಘಾನ್ ನೆಲದಿಂದ ದಾಳಿ ನಡೆಸುತ್ತದೆ ಎಂದು ಇಸ್ಲಾಮಾಬಾದ್ ಆಗಾಗ್ಗೆ ಹೇಳುತ್ತದೆ, ಕಾಬೂಲ್ ಪದೇ ಪದೇ ನಿರಾಕರಿಸಿದೆ.

ವೈಮಾನಿಕ ದಾಳಿಯನ್ನು ಹೇಡಿಗಳ ಕತ್ಯ ಎಂದು ಕರೆದ ಸಚಿವಾಲಯ, ಪಾಕಿಸ್ತಾನದ ಏಕಪಕ್ಷೀಯ ವೈಮಾನಿಕ ದಾಳಿ ಯಾವುದೇ ಸಮಸ್ಯೆಗೆ ಪರಿಹಾರವಲ್ಲ ಎಂದು ಹೇಳಿದೆ, ತನ್ನ ಭೂಪ್ರದೇಶದ ರಕ್ಷಣೆಯನ್ನು ಅದು ತನ್ನ ಬೇರ್ಪಡಿಸಲಾಗದ ಹಕ್ಕು ಎಂದು ಪರಿಗಣಿಸಿದೆ ಎಂದು ಹೇಳಿದೆ. ಅಫ್ಘಾನಿಸ್ತಾನದ ಪಾಕಿಸ್ತಾನದ ವಿಶೇಷ ಪ್ರತಿನಿಧಿ ಮೊಹಮದ್ ಸಾದಿಕ್ ಅವರು ಕಾಬೂಲ್‌ನಲ್ಲಿ ತಾಲಿಬಾನ್ ನಾಯಕತ್ವವನ್ನು ಭೇಟಿಯಾಗಿ ಬಾಂಧವ್ಯವನ್ನು ಹೆಚ್ಚಿಸುವ ಮಾರ್ಗಗಳ ಕುರಿತು ಚರ್ಚಿಸಿದ ಗಂಟೆಗಳ ನಂತರ ಈ ದಾಳಿಗಳು ಸಂಭವಿಸಿವೆ.

ಭೇಟಿಯ ಸಮಯದಲ್ಲಿ, ಸಾದಿಕ್ ಅಫ್ಘಾನಿಸ್ತಾ ನದ ಹಂಗಾಮಿ ಆಂತರಿಕ ಸಚಿವ ಸಿರಾಜುದ್ದೀನ್ ಹಕ್ಕಾನಿ ಅವರನ್ನು ಭೇಟಿಯಾದರು, ಅವರ ಚಿಕ್ಕಪ್ಪ ಖಲೀಲ್ ಹಕ್ಕಾನಿ ಇತ್ತೀಚೆಗೆ ಆತ್ಮಹತ್ಯಾ ಬಾಂಬ್ ದಾಳಿಯಲ್ಲಿ ಸಾವನ್ನಪ್ಪಿದರು ಎಂದು ಇಸ್ಲಾಮಿಕ್ ಸ್ಟೇಟ್ ಗುಂಪಿನ ಪ್ರಾದೇಶಿಕ ಅಂಗಸಂಸ್ಥೆಯು ಹೇಳಿಕೊಂಡಿದೆ.

ಅತ್ಯಾಚಾರಿ, ಹಂತಕರಿಗೆ ಮರಣ ದಂಡನೆ

ನ್ಯೂಯಾರ್ಕ್: ಅಮೆರಿಕಾದ ಅಧಿಕಾರ ವಹಿಸಿಕೊಂಡ ಬಳಿಕ ಹಿಂಸಾತ್ಮಕ ಅತ್ಯಾಚಾರಿಗಳು, ಕೊಲೆಗಾರರಿಗೆ ಮರಣದಂಡನೆ ಶಿಕ್ಷೆಯನ್ನು ದೇಶದಲ್ಲಿ ಜಾರಿ ಮಾಡುವುದಾಗಿ ಚುನಾಯಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸುಳಿವು ನೀಡಿದ್ದಾರೆ. ಅಮೆರಿಕದ 47ನೇ ಅಧ್ಯಕ್ಷರಾಗಿ ಡೊನಾಲ್ಡ್ ಟ್ರಂಪ್ ಅವರು ಜನವರಿ 20 ರಂದು ಅಧಿಕಾರ ವಹಿಸಿಕೊಂಡ ಬಳಿಕ ಕಠಿಣ ಕಾನೂನು ದೇಶದಲ್ಲಿ ಜಾರಿ ಮಾಡುವುದಾಗಿ ಪ್ರಕಟಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಡೊನಾಲ್ಡ್ ಟ್ರಂಪ್, ದೇಶದಲ್ಲಿ ಕಠಿಣ ಕಾನೂನು ಜಾರಿ ಮಾಡಲು ನ್ಯಾಯಾಂಗ ಇಲಾಖೆ ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಸಲಹೆ ನೀಡಿದ್ದಾರೆ.

ಹಾಲಿ ಅಧ್ಯಕ್ಷ ಜೋ ಬಿಡೆನ್ ಅವರು ಮರಣ ದಂಡನೆಯಲ್ಲಿರುವ 40 ಫೆಡರಲ್ ಕೈದಿಗಳಲ್ಲಿ 37 ಜನರ ಶಿಕ್ಷೆಯನ್ನು ಕಡಿಮೆ ಮಾಡಿದ್ದಾರೆ, ಅವರನ್ನು ಪೆರೋಲ್ ಇಲ್ಲದೆ ಜೈಲಿನಲ್ಲಿ ಜೀವನಕ್ಕೆ ಪರಿವರ್ತಿಸಿದ್ದಾರೆ. ಈ ರೀತಿ ತಮ್ಮ ಆಡಳಿತದಲ್ಲಿ ಮಾಡುವುದಿಲ್ಲ ಎಂದು ಗುಡುಗಿದ್ದಾರೆ. ಅಧ್ಯಕ್ಷನಾಗಿ ಅಧಿಕಾರ ವಹಿಸಿಕೊಂಡ ದಿನದಿಂದ ಅಮೆರಿಕಾದ ಜನರ ರಕ್ಷಣೆ ತಮ್ಮ ಪರಮಗುರಿಯಾಗಿದೆ.

ಅಮೆರಿಕನ್ ಕುಟುಂಬಗಳು, ಮಕ್ಕಳನ್ನು ಹಿಂಸಾತ್ಮಕ ಅತ್ಯಾಚಾರಿಗಳು, ಕೊಲೆಗಾರರು ಮತ್ತು ರಾಕ್ಷಸರಿಂದ ರಕ್ಷಿಸಲು ಮರಣದಂಡನೆ ಜಾರಿ ಮಾಡಲು ತೀವ್ರವಾಗಿ ನ್ಯಾಯಾಂಗ ಇಲಾಖೆಗೆ ನಿರ್ದೇಶಿಸುವುದಾಗಿ ಹೇಳಿದ್ದಾರೆ.

ಅಮೆರಿಕಾದಲ್ಲಿ 20 ವರ್ಷಗಳ ನಂತರ ಡೊನಾಲ್ಡ್ ಟ್ರಂಪ್ ಅವರು ಮೊದಲ ಅವಧಿಗೆ 2017 ರಿಂದ 2021 ರವರೆಗೆ ಅಧ್ಯಕ್ಷರಾಗಿದ್ದ ಸಮಯದಲ್ಲಿ ಮರಣದಂಡನೆ ನೀಡುವುದನ್ನು ಜಾರಿ ಮಾಡಿದ್ದರು.

ಇದೀಗ ಮತ್ತೊಮ್ಮೆ ಅದನ್ನು ಅಮೆರಿಕದಲ್ಲಿ ಜಾರಿ ಮಾಡುವುದಾಗಿ ಹೇಳಿದ್ದಾರೆ. ಮರಣದಂಡನೆಯನ್ನು ವಿರೋಧಿಸಿ ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದ ಜೋ ಬಿಡೆನ್, ಜನವರಿ 2021 ರಲ್ಲಿ ಅಧಿಕಾರ ವಹಿಸಿಕೊಂಡಾಗ ಫೆಡರಲ್ ಮರಣದಂಡನೆಗಳನ್ನು ತಡೆ ಹಿಡಿದಿದ್ದರು ಕ್ಷಮಾದಾನ ನಿರ್ಧಾರ ಕೈಗೊಂಡಿದ್ದರು.

ಬೋರ್‌ವೆಲ್‌ಗೆ ಬಿದ್ದ ಬಾಲಕಿ, ರಕ್ಷಣಾ ಕಾರ್ಯ ಚುರುಕು

ಜೈಪುರ: ರಾಜಸ್ಥಾನದ ಕೊಟ್ ಪುಟ್ಲಿ ಬೆಹ್ರೋರ್ ಜಿಲ್ಲೆಯಲ್ಲಿ 700 ಅಡಿ ಆಳದ ಬೋರ್ ವೆಲ್ ಗೆ ಮೂರು ವರ್ಷದ ಬಾಲಕಿ ಬಿದ್ದಿದ್ದು, ಆಕೆಯನ್ನು ರಕ್ಷಿಸಲು ಸತತ 40 ಗಂಟೆಗಳಿಂದ ರಕ್ಷಣಾ ಕಾರ್ಯಾಚರಣೆ ನಡೆಯುತ್ತಿವೆ.

ರಾಜ್ಯ ವಿಪತ್ತು ನಿರ್ವಹಣಾ ಪಡೆ, ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ(ಎನ್ ಡಿಆರ್ ಎಫ್), ಇತರ ಅಧಿಕಾರಿಗಳ ತಂಡಗಳು ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿವೆ. ಆದರೆ, ಬೋರ್ ವೆಲ್ ಸುತ್ತಲಿನ ಮಣ್ಣು ತೇವಾಂಶದಿಂದ ಕೂಡಿದ್ದರಿಂದ ರಕ್ಷಣಾ ಕಾರ್ಯಾಚರಣೆಗೆ ತೊಂದರೆ ಎದುರಾಗಿದೆ ಎಂದು ಹೇಳಿದ್ದಾರೆ.

ಬಾಲಕಿಗೆ ಆಮ್ಲಜನಕ ಪೂರೈಸಲು ಆಕ್ಸಿಜನ್ ಪೈಪ್ ಅನ್ನು ಬೋರ್ ವೆಲ್ ಗೆ ಇಳಿಸಲಾಗಿದೆ. ನಾಲ್ಕು ಆಂಬ್ಯುಲೆನ್ಸ್‌ಗಳ ವ್ಯವಸ್ಥೆಯನ್ನು ಮಾಡಲಾಗಿದೆ. ಅಧಿಕಾರಿಗಳ ಪ್ರಕಾರ, ಸೋಮವಾರ ಮಧ್ಯಾಹ್ನ ಬಾಲಕಿ ಸುಮಾರು 15 ಅಡಿ ಆಳದ ಬೋರ್ ವೆಲ್ ಗೆ ಬಿದ್ದಿದ್ದಾಳೆ. ಆಕೆಯ ಕುಟುಂಬಸ್ಥರು ಆಕೆಯನ್ನು ಹೊರತೆಗೆಯಲು ಯತ್ನಿಸಿದಾಗ ಆಕೆ ಮತ್ತಷ್ಟು ಕೆಳಗೆ ಜಾರಿದ್ದಾಳೆ. ಬಳಿಕ ಜೈಪುರದಿಂದ ಎಸ್ ಡಿಆರ್ ಎಫ್ ಮತ್ತು ಎನ್ ಡಿಆರ್ ಎಫ್ ತಂಡಗಳನ್ನು ಕರೆಸಿ ರಕ್ಷಣಾ ಕಾರ್ಯಾಚರಣೆಯನ್ನು ನಡೆಸಲಾಗುತ್ತಿದೆ ಎಂದರು.

ನಾವು ಪೈಲಿಂಗ್ ಯಂತ್ರದಿಂದ 160 ಅಡಿ ಆಳದವರೆಗೆ ಅಗೆಯುತ್ತೇವೆ. ನಾವು ಎರಡು ರೀತಿಯಲ್ಲಿ ರಕ್ಷಣಾ ಕಾರ್ಯಾಚರಣೆ ನಡೆಸುತ್ತಿದ್ದೇವೆ. ಬೋರ್ವೆಲ್ ಬಳಿ ಜೆಸಿಬಿ ಮೂಲಕ 10 ಅಡಿ ಆಳದ ಹೊಂಡವನ್ನು ಅಗೆಯಲಾಗುತ್ತಿದೆ. ಇನ್ನೊಂದು ಕಡೆ ಪೈಲಿಂಗ್ ಯಂತ್ರದ ಸಹಾಯದಿಂದ ಅಗೆಯಲು ಆರಂಭಿಸಿದ್ದೇವೆ. ಈ ಯಂತ್ರದ ಮೂಲಕ 150 ಅಡಿಗಳಷ್ಟು ಆಳಕ್ಕೆ ಅಗೆಯಲು ಸಾಧ್ಯವಾಗುತ್ತದೆ

-ಯೋಗೇಶ್ ಮೀನಾ
ಎನ್‌ಡಿಆರ್‌ಎಫ್ ಉಸ್ತುವಾರಿ

ಗುಂಡಿನ ದಾಳಿಗೆ ಇಬ್ಬರು ಪತ್ರಕರ್ತರ ಸಾವು

ಹೈಟಿ: ಪೋರ್ಟ್-ಔ-ಪ್ರಿನ್ಸ್ ನ ಅತಿದೊಡ್ಡ ಸಾರ್ವಜನಿಕ ಆಸ್ಪತ್ರೆಯ ಪುನರಾರಂಭದ ವೇಳೆ ನಡೆದ ಗುಂಡಿನ ದಾಳಿಯಲ್ಲಿ ಇಬ್ಬರು ವರದಿಗಾರರು ಸಾವನ್ನಪ್ಪಿದ್ದಾರೆ ಮತ್ತು ಹಲವಾರು ಮಂದಿ ಗಾಯಗೊಂಡಿದ್ದಾರೆ. ಸ್ಟೀಟ್ ಗ್ಯಾಂಗ್‌ಗಳು ಹೈಟಿಯ ರಾಜಧಾನಿ ಪೋರ್ಟ್-ಔ-ಪ್ರಿನ್ಸ್ ನ ಅಂದಾಜು 85% ರಷ್ಟು ಸ್ವಾಧೀನಪಡಿಸಿಕೊಂಡಿವೆ ಮತ್ತು ಅವರು ಈ ವರ್ಷದ ಆರಂಭದಲ್ಲಿ ಜನರಲ್ ಆಸ್ಪತ್ರೆಯನ್ನು ಮುಚ್ಚುವಂತೆ ಒತ್ತಾಯಿಸಿದರು. ಆದರೆ ಸೌಲಭ್ಯವನ್ನು ಪುನಃ ತೆರೆಯುವುದಾಗಿ ಅಧಿಕಾರಿಗಳು ವಾಗ್ದಾನ ಮಾಡಿದ್ದರು ಆದರೆ ಪತ್ರಕರ್ತರು ಈವೆಂಟ್ ಅನ್ನು ವರದಿ ಮಾಡಲು ಜಮಾಯಿಸುತ್ತಿದ್ದಂತೆ, ಶಂಕಿತ ಗ್ಯಾಂಗ್ ಸದಸ್ಯರು ಗುಂಡು ಹಾರಿಸಿದರು.

ಮೃತ ಪತ್ರಕರ್ತರನ್ನು ಮಾರ್ಕ್‌ಂಜಿ ನಾಥೌಕ್ಸ್ ಮತ್ತು ಜಿಮಿ ಜೀನ್ ಎಂದು ಗುರುತಿಸಿದ್ದಾರೆ. ದಾಳಿಯಲ್ಲಿ ಅನಿರ್ದಿಷ್ಟ ಸಂಖ್ಯೆಯ ವರದಿಗಾರರು ಗಾಯಗೊಂಡಿದ್ದಾರೆ ಎಂದು ಆನ್‌ಲೈನ್ ಮೀಡಿಯಾ ಕಲೆಕ್ಟಿವ್‌ನ ವಕ್ತಾರ ರಾಬೆಸ್ಟ್ ಡಿಮಾಂಚೆ ತಿಳಿಸಿದ್ದಾರೆ. ಅವರು ವಿವಿ ಅನ್ಸನ್ ಒಕ್ಕೂಟದ ಮೇಲೆ ದಾಳಿಕೋರರು ಆರೋಪಿಸಿದರು. ಹೈಟಿಯ ಹಂಗಾಮಿ ಅಧ್ಯಕ್ಷ ಲೆಸ್ಲಿ ವೋಲ್ಟೈರ್ ಅವರು ರಾಷ್ಟ್ರವನ್ನುದ್ದೇಶಿಸಿ ಮಾಡಿದ ಭಾಷಣದಲ್ಲಿ ಪತ್ರಕರ್ತರು ಮತ್ತು ಪೊಲೀಸರು ದಾಳಿಯ ಬಲಿಪಶುಗಳಲ್ಲಿದ್ದಾರೆ ಎಂದು ಹೇಳಿದರು. ಎಷ್ಟು ಸಾವು ನೋವುಗಳು ಸಂಭವಿಸಿವೆ ಎಂಬುದನ್ನು ಅವರು ನಿರ್ದಿಷ್ಟಪಡಿಸಿಲ್ಲ.

ಆಸ್ಪತ್ರೆಯೊಳಗೆ ಸಿಕ್ಕಿಬಿದ್ದ ವರದಿಗಾರರು ಆನ್‌ಲೈನ್‌ನಲ್ಲಿ ಪೋಸ್ಟ್ ಮಾಡಿದ ವೀಡಿಯೊವು ಸ್ಟೆಚರ್‌ಗಳ ಮೇಲೆ ಎರಡು ನಿರ್ಜೀವ ದೇಹಗಳನ್ನು ತೋರುತ್ತಿದೆ, ಅವರ ಬಟ್ಟೆಗಳು ರಕ್ತಸಿಕ್ತವಾಗಿವೆ. ಸ್ಟೀಟ್ ಗ್ಯಾಂಗ್‌ಗಳು ಹೈಟಿಯ ರಾಜಧಾನಿ ಪೋರ್ಟ್-ಔ-ಪ್ರಿನ್ಸ್ ನ ಅಂದಾಜು 85% ನಷ್ಟು ಭಾಗವನ್ನು ಆಕ್ರಮಿಸಿಕೊಂಡಿವೆ. ಹಿಂಸಾಚಾರದ ಸಮಯದಲ್ಲಿ ಅವರು ಈ ವರ್ಷದ ಆರಂಭದಲ್ಲಿ ಜನರಲ್ ಆಸ್ಪತ್ರೆಯನ್ನು ಮುಚ್ಚುವಂತೆ ಒತ್ತಾಯಿಸಿದರು, ಅದು ಮುಖ್ಯ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಮತ್ತು ಹೈಟಿಯ ಎರಡು ದೊಡ್ಡ ಜೈಲುಗಳನ್ನು ಗುರಿಯಾಗಿಸಿಕೊಂಡಿತು. ಹೈಟಿಯ ಆರೋಗ್ಯ ರಕ್ಷಣಾ ವ್ಯವಸ್ಥೆಯು ಮಳೆಗಾಲದಲ್ಲಿ ಹೆಚ್ಚುವರಿ ಸವಾಲುಗಳನ್ನು ಎದುರಿಸುತ್ತದೆ, ಇದು ನೀರಿನಿಂದ ಹರಡುವ ರೋಗಗಳ ಅಪಾಯವನ್ನು ಹೆಚ್ಚಿಸುವ ಸಾಧ್ಯತೆಯಿದೆ. ಶಿಬಿರಗಳಲ್ಲಿನ ಕಳಪೆ ಪರಿಸ್ಥಿತಿಗಳು ಮತ್ತು ತಾತ್ಕಾಲಿಕ ವಸಾಹತುಗಳು ಕಾಲರಾದಂತಹ ರೋಗಗಳ ಅಪಾಯವನ್ನು ಹೆಚ್ಚಿಸಿವೆ,

ಸಂತ್ರಸ್ತರಾದ ಜನರು, ರಾಷ್ಟ್ರೀಯ ಪೊಲೀಸರು ಮತ್ತು ಪತ್ರಕರ್ತರಿಗೆ ನನ್ನ ಸಹಾನುಭೂತಿಗಳನ್ನು ಕಳುಹಿಸುತ್ತೇನೆ, ಈ ಅಪರಾಧವನ್ನು ಶಿಕ್ಷಿಸದೆ ಹೋಗುವುದಿಲ್ಲ ಎಂದು ಪ್ರತಿಜ್ಞೆ ಮಾಡಿದಸದೇನೆ ಎಂದು ಹೇಳಿದರು.

ಕ್ರಿಸ್ಮಸ್ ಉಡುಗೆಯಲ್ಲಿ ಶುಭಕೋರಿದ ಸುನೀತಾ ವಿಲಿಯಮ್ಸ್

ವಾಷಿಂಗ್ಟನ್: ಅಂತಾರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್

ಸೌತ್‌ನಲ್ಲಿ ಶ್ರೀಲೀಲಾಗೆ ಭಾರೀ ಬೇಡಿಕೆ

ಬೆಂಗಳೂರಿನ ಬೆಡಗಿ ಶ್ರೀಲೀಲಾ 'ಪುಷ್ಪ 2' ಚಿತ್ರದಲ್ಲಿ ಕಿಸ್ಸಿಕ್ ಬೆಡಗಿಯಾಗಿ ಮಿಂಚಿದ್ಮೇಲೆ ಬೇಡಿಕೆ ಇನ್ನೂ ಹೆಚ್ಚಾಗಿದೆ. ನಟಿಯ ಬಳಿ ಕೈತುಂಬಾ ಸಿನಿಮಾಗಳಿವೆ. 2025ರಲ್ಲಿ ಸಾಲು ಸಾಲು ಸಿನಿಮಾ ಮನರಂಜನೆ ಕೊಡೋದು ಗ್ಯಾರಂಟಿ. ಪ್ರತಿಭೆ, ಡ್ಯಾನ್ಸ್ ಸ್ಕಿಲ್, ಬ್ಯೂಟಿಯೊಂದಿಗೆ ಸದ್ಯ ಸೌತ್‌ನಲ್ಲಿ ಸದ್ದು ಮಾಡುತ್ತಿರುವ ಕನ್ನಡತಿ ಶ್ರೀಲೀಲಾ ಲಿಸ್ಟ್‌ನಲ್ಲಿ 5ಕ್ಕೂ ಹೆಚ್ಚು ಸಿನಿಮಾಗಳಿವೆ. ನಿತಿನ್ ಜೊತೆಗಿನ ರಾಬಿನ್‌ಹುಡ್ ಚಿತ್ರ, ಪವನ್ ಕಲ್ಯಾಣ್ ಜೊತೆ ಉಸ್ತಾದ್ ಭಗತ್ ಸಿಂಗ್, ಧಮಾಕ ಬಳಿಕ ರವಿತೇಜ ಜೊತೆ 2ನೇ ಬಾರಿ ಹೊಸ ಚಿತ್ರಕ್ಕೆ ನಟಿ ಓಕೆ ಎಂದಿದ್ದಾರೆ. 'ಮಾಸ್ ಜಾತ್ರ' ಎಂದು ಟೈಟಲ್ ಇಡಲಾಗಿದೆ.

ಶಿವಕಾರ್ತಿಕೇಯನ್ ನಟನೆಯ 25ನೇ ಚಿತ್ರಕ್ಕೆ ಶ್ರೀಲೀಲಾ ನಾಯಕಿಯಾಗಿದ್ದಾರೆ. ಈ ಮೂಲಕ ತಮಿಳಿಗೆ ನಟಿ ಪಾದಾರ್ಪಣೆ ಮಾಡುತ್ತಿದ್ದಾರೆ. ಈ ಚಿತ್ರಕ್ಕೆ ಸುಧಾ ಕೊಂಗರ ನಿರ್ದೇಶನ ಮಾಡುತ್ತಿದ್ದಾರೆ. ಇದರೊಂದಿಗೆ ಜನಾರ್ಧನ್ ರೆಡ್ಡಿ ಪುತ್ರನ ಜೊತೆ ಕನ್ನಡದ ಸಿನಿಮಾ ಮಾಡುತ್ತಿದ್ದಾರೆ. ಇನ್ನೂ ಶ್ರೀಲೀಲಾ ನಟನೆಯ ಮೊದಲ ಬಾಲಿವುಡ್ ಚಿತ್ರವನ್ನು ಸೈಫ್ ಪುತ್ರ ಇಬ್ರಾಹಿಂ ಅಲಿ ಖಾನ್ ಜೊತೆ ನಟಿಸಲು ಗ್ರೀನ್ ಸಿಗ್ನಲ್ ಕೊಟ್ಟಿದ್ದಾರೆ ಎನ್ನಲಾಗಿದೆ. ಇದಕ್ಕೆ 'ದಿಲ್ಲರ್' ಎಂದು ಟೈಟಲ್ ಇಡಲಾಗಿದೆಯಂತೆ. ಸದ್ಯ ನಟಿಯ ಸಿನಿಮಾ ಲಿಸ್ಟ್ ಕೇಳಿ ಫ್ಯಾನ್ಸ್ ಖುಷಿಪಡುತ್ತಿದ್ದಾರೆ.

ಯಾವೆಲ್ಲಾ ಸಿನಿಮಾಗಳು ನಟಿಯ ಕೈಯಲ್ಲಿವೆ

ಕಿಚ್ಚ ಸುದೀಪ್ ಫ್ಯಾನ್ಸ್‌ಗೆ ಖುಷಿ ಕೊಟ್ಟ ಮ್ಯಾಕ್ಸ್

ಕಿಚ್ಚ ಸುದೀಪ್ ಅವರ ಅಭಿಮಾನಿಗಳು ಭಾರಿ ನಿರೀಕ್ಷೆ ಇಟ್ಟುಕೊಂಡಿದ್ದ 'ಮ್ಯಾಕ್ಸ್' ಸಿನಿಮಾ ಬಿಡುಗಡೆ ಆಗಿದೆ. ಕಾಲಿವುಡ್‌ನ ನಿರ್ದೇಶಕ ವಿಜಯ್ ಕಾರ್ತಿಕೇಯ ಅವರು ಈ ಸಿನಿಮಾಗೆ ಆಯಕ್ಷನ್-ಕಟ್ ಹೇಳಿದ್ದಾರೆ. ಕೆಲವರು ಈ ಸಿನಿಮಾವನ್ನು ತಮಿಳಿನ 'ಕೈದಿ' ಚಿತ್ರಕ್ಕೆ ಹೋಲಿಸುತ್ತಿದ್ದಾರೆ. ಒಟ್ಟಾರೆ ಜನರ ಅಭಿಪ್ರಾಯ ಏನಿದೆ ಎಂಬುದನ್ನು ತಿಳಿಸುವ ಟ್ವಿಟರ್ ವಿಮರ್ಶೆ ಇಲ್ಲಿದೆ. ಬರೋಬ್ಬರಿ ಎರಡೂವರೆ ವರ್ಷಗಳ ಬಳಿಕ ಕಿಚ್ಚ ಸುದೀಪ್ ಅವರು ದೊಡ್ಡ ಪರದೆಯಲ್ಲಿ ಕಾಣಿಸಿಕೊಂಡಿದ್ದಾರೆ. ಅವರು ನಟಿಸಿರುವ 'ಮ್ಯಾಕ್ಸ್' ಸಿನಿಮಾ ಡಿಸೆಂಬರ್ 25 ರಾಜ್ಯಾದ್ಯಂತ ಬಿಡುಗಡೆ ಆಗಿದೆ. ಮಾಸ್ ಅವತಾರದಲ್ಲಿ ಸುದೀಪ್ ಅವರು ಅಭಿಮಾನಿಗಳಿಗೆ ದರ್ಶನ ನೀಡಿದ್ದಾರೆ. ಈ ಚಿತ್ರದಲ್ಲಿನ ಆಯಕ್ಷನ್ ಸೀನ್‌ಗಳನ್ನು ನೋಡಿ ಪ್ರೇಕ್ಷಕರು ಎಂಜಾಯ್ ಮಾಡುತ್ತಿದ್ದಾರೆ. ಬಹುತೇಕ ಕಡೆಗಳಲ್ಲಿ 'ಮ್ಯಾಕ್ಸ್' ಹೌಸ್‌ಫುಲ್ ಪ್ರದರ್ಶನ ಕಂಡಿದೆ. ಸಿನಿಮಾ ನೋಡಿದ ಪ್ರೇಕ್ಷಕರು ಸೋಶಿಯಲ್ ಮೀಡಿಯಾ ಮೂಲಕ ತಮ್ಮ ವಿಮರ್ಶೆ ತಿಳಿಸುತ್ತಿದ್ದಾರೆ. 'ಮ್ಯಾಕ್ಸ್' ಸಿನಿಮಾದಿಂದ ಜನರಿಗೆ ಮುಖ್ಯವಾಗಿ ಸಿಗುವುದು ಆಯಕ್ಷನ್. ಹೊಡಿಬಡಿ ದೃಶ್ಯಗಳಿಗೆ ಈ ಸಿನಿಮಾದಲ್ಲಿ ಯಾವುದೇ ಕೊರತೆ ಇಲ್ಲ. ಸುದೀಪ್ ಅವರನ್ನು ಬಹಳ ದಿನಗಳ ಬಳಿಕ ಇಷ್ಟೊಂದು ಮಾಸ್ ಗೆಟಪ್‌ನಲ್ಲಿ ನೋಡಿ ಫ್ಯಾನ್ಸ್ ಎಂಜಾಯ್ ಮಾಡುತ್ತಿದ್ದಾರೆ. ಸುದೀಪ್ ಅವರ ಅಭಿನಯಕ್ಕೆ ಮೆಚ್ಚುಗೆ ಕೇಳಿಬರುತ್ತಿದೆ. ಈ ಸಿನಿಮಾ ನೋಡುವಾಗ ಕಿಂಚಿತ್ತೂ ಬೋರ್ ಆಗಲ್ಲ ಎಂದು ಸುದೀಪ್ ಅಭಿಮಾನಿಗಳು ಹೇಳಿದ್ದಾರೆ. ಕತೆ ತುಂಬ ವೇಗವಾಗಿ ಸಾಗುವುದರಿಂದ ಜನರಿಗೆ ಇಷ್ಟ ಆಗುತ್ತಿದೆ. ಇದು ಸುದೀಪ್ ಅವರ ಒನ್ ಮ್ಯಾನ್ ಶೋ ಕೂಡ ಹೌದು. ಪಕ್ಕಾ ಅಭಿಮಾನಿಗಳಿಗಾಗಿ 'ಮ್ಯಾಕ್ಸ್' ಮೂಡಿಬಂದಿದೆ. ಸೂಪರ್ ಹಿಟ್ ಆಗಲಿದೆ ಎಂದು ಪ್ರೇಕ್ಷಕರು ಹೇಳುತ್ತಿದ್ದಾರೆ. ಚಿತ್ರಮಂದಿರದಲ್ಲಿ 'ಮ್ಯಾಕ್ಸಿಮಮ್ ಮಾಸ್..' ಹಾಡು ಬಂದಾಗ ಜನರು ಸಖತ್ ಎಂಜಾಯ್ ಮಾಡುತ್ತಿದ್ದಾರೆ. ಸೆಲೆಬ್ರೇಷನ್ ಜೋರಾಗಿದೆ ಎಂದು ಅಭಿಮಾನಿಗಳು ವಿಡಿಯೋ ಹಂಚಿಕೊಳ್ಳುತ್ತಿದ್ದಾರೆ. ಅನೇಕರು ಸಿನಿಮಾಗೆ ಪಾಸಿಟಿವ್ ವಿಮರ್ಶೆ ನೀಡುತ್ತಿದ್ದಾರೆ. ಮೊದಲ ದಿನ 'ಮ್ಯಾಕ್ಸ್' ಸಿನಿಮಾಗೆ ಉತ್ತಮ ಓಪನಿಂಗ್ ಸಿಕ್ಕಿದೆ. ಬಹುತೇಕ ಶೋಗಳ ಟಿಕೆಟ್‌ಗಳು ಸೋಲ್ಡ್ ಔಟ್ ಆಗಿವೆ. ಇದಕ್ಕಾಗಿ ಸಿನಿಪ್ರಿಯರು ಅಭಿನಂದನೆ ತಿಳಿಸುತ್ತಿದ್ದಾರೆ. ಕ್ರಿಸ್‌ಮಸ್ ಮತ್ತು ವೀಕೆಂಡ್ ರಜೆ ಇರುವುದರಿಂದ ಈ ಚಿತ್ರ ಉತ್ತಮ ಕಲೆಕ್ಷನ್ ಮಾಡುವ ಸೂಚನೆ ಸಿಕ್ಕಿದೆ. ತಾಂತ್ರಿಕವಾಗಿಯೂ 'ಮ್ಯಾಕ್ಸ್' ಉತ್ತಮವಾಗಿ ಮೂಡಿಬಂದಿದೆ. ಮುಖ್ಯವಾಗಿ ಅಜನೀಶ್ ಲೋಕನಾಥ್ ಅವರ ಹಿನ್ನೆಲೆ ಸಂಗೀತಕ್ಕೆ ಮೆಚ್ಚುಗೆ ಸಿಗುತ್ತಿದೆ. ಅದೇ ರೀತಿ, ಶೇಖರ್ ಚಂದ್ರ ಅವರ ಛಾಯಾಗ್ರಹಣ ಕೂಡ ಹೈಲೈಟ್ ಆಗಿದೆ.

ಸಲ್ಮಾನ್ ಅಭಿಮಾನಿಗಳಿಗೆ ಕೋಪ

'ಬೇಬಿ ಜಾನ್' ಸಿನಿಮಾದಲ್ಲಿ ಸಲ್ಮಾನ್ ಖಾನ್ ಅವರ ಅತಿಥಿ ಪಾತ್ರದ ದೃಶ್ಯಗಳು ಲೀಕ್ ಆಗಿರುವುದು ಅವರ ಅಭಿಮಾನಿಗಳಲ್ಲಿ ಆಕ್ರೋಶಕ್ಕೆ ಕಾರಣವಾಗಿದೆ. ಸಿನಿಮಾ ತಂಡ ಈ ಘಟನೆಯಿಂದ ಬೇಸರಗೊಂಡಿದ್ದು, ಸಲ್ಮಾನ್ ಖಾನ್ ಅವರು ಗೆಳೆತನಕ್ಕಾಗಿ ಉಚಿತವಾಗಿ ನಟಿಸಿದ್ದರೂ, ಈ ಲೀಕ್ ಸಿನಿಮಾದ ಯಶಸ್ಸಿನ ಮೇಲೆ ಪರಿಣಾಮ ಬೀರಬಹುದು ಎಂಬ ಆತಂಕವಿದೆ. ಸಲ್ಮಾನ್ ಖಾನ್ ಅಭಿಮಾನಿ ಬಳಗ ತುಂಬಾನೇ ದೊಡ್ಡದು. ಸ್ವಲ್ಪ ಹೆಚ್ಚು-ಕಡಿಮೆ ಆದರೂ ಅವರ ಅಭಿಮಾನಿಗಳು ಇದನ್ನು ಸಹಿಸಿಕೊಳ್ಳುವುದಿಲ್ಲ. ಸಲ್ಮಾನ್ ಖಾನ್‌ಗೆ ಎಷ್ಟು ಕೋಪ ಇದೆಯೋ ಅದಕ್ಕಿಂತ ಹೆಚ್ಚಿನ ಕೋಪ ಸಲ್ಲು ಫ್ಯಾನ್ಸ್‌ಗೆ ಇದೆ. ಈಗ 'ಬೇಬಿ ಜಾನ್' ಸಿನಿಮಾ ರಿಲೀಸ್ ಬಳಿಕ ನಡೆದ ಒಂದು ಬೆಳವಣಿಗೆ ಸಲ್ಮಾನ್ ಖಾನ್ ಅಭಿಮಾನಿಗಳ ಕೋಪಕ್ಕೆ ಕಾರಣ ಆಗಿದೆ. ಅಷ್ಟಕ್ಕೂ ಅಲ್ಲಿ ನಡೆದಿದ್ದು ಏನು ಎಂಬ ಬಗ್ಗೆ ಇಲ್ಲಿದೆ ವಿವರ. ವರುಣ್ ಧವನ್ ಹಾಗೂ ಕೀರ್ತಿ ಸುರೇಶ್ ನಟನೆಯ 'ಬೇಬಿ ಜಾನ್' ಡಿಸೆಂಬರ್ 25 ರಿಲೀಸ್ ಆಗಿದೆ. ಕ್ರಿಸ್‌ಮಸ್ ಪ್ರಯುಕ್ತ ಸಿನಿಮಾ ತೆರೆಗೆ ಬಂದಿದೆ. ಈ ಚಿತ್ರದಲ್ಲಿ ಸಲ್ಮಾನ್ ಖಾನ್ ವಿಶೇಷ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ ಎಂಬುದನ್ನು ನಿರ್ಮಾಪಕ ಅಟ್ಲೀ ಹಾಗೂ ನಟ ವರುಣ್ ಧವನ್ ಖಚಿತಪಡಿಸಿದ್ದಾರೆ. ಟ್ರೇಲರ್ ಲಾಂಚ್‌ನಲ್ಲಿ ಈ ಮಾಹಿತಿ ರಿವೀಲ್ ಆಗಿತ್ತು. ಆದರೆ, ಈಗ ಚಿತ್ರದ ದೃಶ್ಯಗಳು ಲೀಕ್ ಆಗಿವೆ. ಸಲ್ಮಾನ್ ಅವರು 'ಬೇಬಿ ಜಾನ್' ಸಿನಿಮಾದಲ್ಲಿ 'ಏಜೆಂಟ್ ಭಾಯಿ ಜಾನ್' ಆಗಿ ಕಾಣಿಸಿಕೊಂಡಿದ್ದಾರೆ. ವರುಣ್ ಧವನ್ ಜೊತೆ ಸಲ್ಲು ಕೂಡ ಆಯಕ್ಷನ್ ಮೆರೆದಿದ್ದಾರೆ. ಈ ದೃಶ್ಯಗಳು ಲೀಕ್ ಆಗಿರುವ ವಿಚಾರ ಫ್ಯಾನ್ಸ್ ಕೋಪಕ್ಕೆ ಕಾರಣ ಆಗಿದೆ. ಇದನ್ನು ಸೋಶಿಯಲ್ ಮೀಡಿಯಾದಿಂದ ಡಿಲೀಟ್ ಮಾಡುವಂತೆ ಅನೇಕರು ಕೋರಿದ್ದಾರೆ.

ಕೀರ್ತಿ ಸುರೇಶ್ ಮದುವೆಯಲ್ಲಿ ಸೋನು ಗೌಡ

ಬಹುಭಾಷಾ ನಟಿ ಕೀರ್ತಿ ಸುರೇಶ್ ಮದುವೆ ಇತ್ತೀಚೆಗೆ ಗೋವಾದಲ್ಲಿ ಅದ್ಧೂರಿಯಾಗಿ ನಡೆಯಿತು. ಈ ಮದುವೆಯಲ್ಲಿ ಕನ್ನಡದ 'ಗುಳ್ಟು' ನಟಿ ಸೋನು ಗೌಡ ಭಾಗಿಯಾಗಿದ್ದು, ಸುಂದರ ಫೋಟೋವೊಂದನ್ನು ನಟಿ ಹಂಚಿಕೊಂಡಿದ್ದಾರೆ. ಎರಡು ಸುಂದರ ಹೃದಯಗಳು ಒಟ್ಟಿಗೆ ಹೊಸ ಪ್ರಯಾಣವನ್ನು ಪ್ರಾರಂಭಿಸುತ್ತಿದ್ದಾರೆ. ಇದಕ್ಕೆ ಸಾಕ್ಷಿಯಾಗುವುದು ತುಂಬಾ ಖುಷಿಯ ವಿಚಾರ. ಈ ಸುಂದರ ದಂಪತಿಗೆ ಮತ್ತೊಮ್ಮೆ ಹ್ಯಾಪಿ ಮ್ಯಾರೀಡ್ ಲೈಫ್, ನಿಮ್ಮ ಜೀವನ ಸುಂದರವಾಗಿರಲಿ ಎಂದು ನಟಿ ಸೋನು ಶುಭಹಾರೈಸಿದ್ದಾರೆ. ಮದುವೆಯಲ್ಲಿ ಕೀರ್ತಿ ದಂಪತಿ ಜೊತೆ ತೆಗೆದ ಸುಂದರ ಫೋಟೋವನ್ನು ನಟಿ ಹಂಚಿಕೊಂಡಿದ್ದಾರೆ. ಈ ಹಿಂದೆಯೇ ಸಂದರ್ಶನವೊಂದರಲ್ಲಿ ಕೀರ್ತಿ ಜೊತೆಗಿನ ಸ್ನೇಹದ ಬಗ್ಗೆ ಸೋನು ಮಾತನಾಡಿದ್ದರು. ಕಾಮನ್ ಫ್ರೆಂಡ್ ಮೂಲಕ ಕೀರ್ತಿ ಸುರೇಶ್ ಪರಿಚಯವಾಗಿದ್ದು, ಇದೀಗ ಸೋನು ಅವರಿಗೂ ಕೀರ್ತಿ ಬೆಸ್ಟ್ ಫ್ರೆಂಡ್ ಆಗಿದ್ದಾರೆ. ನಾವು ಫೋನ್‌ನಲ್ಲೂ ಮಾತನಾಡುತ್ತೇವೆ, ಆದರೆ ಸಿನಿಮಾ ಬಗ್ಗೆ ಮಾತನಾಡೋದಿಲ್ಲ, ಕೀರ್ತಿ ಅವರು ಆಹಾರ ಪ್ರಿಯೆ. ಹಾಗಾಗಿ ಆಹಾರದ ವಿಚಾರವಾಗಿ ಹೆಚ್ಚಾಗಿ ಮಾತನಾಡುತ್ತೇವೆ ಎಂದಿದ್ದರು ಸೋನು. ಹಾಗಾಗಿ ನಟಿಯ ಮದುವೆಯಲ್ಲಿ ಸೋನುಗೆ ವಿಶೇಷವಾಗಿ ಆಹ್ವಾನ ನೀಡಲಾಗಿತ್ತು.

ಪೂಜಾ ಹೆಗ್ಡೆ ಜೊತೆ 'ರೆಟ್ರೋ' ಕಥೆ ಹೇಳಲು ಹೊರಟ ಸೂರ್ಯ

'ಕಂಗುವ' ಸಿನಿಮಾ ಬೆನ್ನಲ್ಲೇ ಸೂರ್ಯ ರೆಟ್ರೋ ಸಿನಿಮಾದ ಕಥೆ ಹೇಳಲು ರೆಡಿಯಾಗಿದ್ದಾರೆ. ಗ್ಯಾಂಗ್‌ಸ್ಟರ್ ಆಗಿ ಮತ್ತೆ ಪ್ರೀತಿಗಾಗಿ ಬದಲಾಗೋ ನವಿರಾದ ಪ್ರೇಮಕಥೆಯನ್ನು ಪೂಜಾ ಹೆಗ್ಡೆ ಜೊತೆ ಹೇಳಲು ಸಿದ್ಧರಾಗಿದ್ದಾರೆ. ಸದ್ಯ ಸಿನಿಮಾದ ಟೈಟಲ್ ಟೀಸರ್ ರಿಲೀಸ್ ಆಗಿ ಸದ್ದು ಮಾಡುತ್ತಿದೆ.

'ಸೂರ್ಯ 44' ಸಿನಿಮಾಗೆ 'ರೆಟ್ರೋ' ಎಂದು ಟೈಟಲ್ ಇಡಲಾಗಿದೆ. ಗ್ಯಾಂಗ್‌ಸ್ಟರ್ ಆಗಿ ಅಬ್ಬರಿಸೋ ಸೂರ್ಯ ಅದು ಹೇಗೆ ತಮ್ಮನ್ನು ತಾವು ಬದಲಾಗಿ ಸಿಕೊಳ್ತಾರೆ ಎಂಬುದನ್ನು ಟೀಸರ್‌ನಲ್ಲಿ ಸುಳಿವು ನೀಡಲಾಗಿದೆ. ನಾಯಕಿಯಾಗಿ ಪೂಜಾ ಹೆಗ್ಡೆ ಮುದ್ದಾಗಿ ಕಾಣಿಸಿಕೊಂಡಿದ್ದಾರೆ. ಟೀಸರ್‌ನಲ್ಲಿನ ಸೂರ್ಯ ಮತ್ತು ಪೂಜಾ ಕೆಮಿಸ್ಟ್ರಿ ಮಸ್ತ್ ಆಗಿದೆ. ಹಾಗಾಗಿ ಚಿತ್ರದ ಮೇಲಿನ ನಿರೀಕ್ಷೆ ದುಪ್ಪಟ್ಟಾಗಿದೆ. ಈ ಚಿತ್ರವು 2025ರಲ್ಲಿ ತೆರೆಗೆ ಬರಲಿದ್ದು, ಕಾರ್ತಿಕ್ ಸುಬ್ಬರಾಜ್ ನಿರ್ದೇಶನ ಮಾಡಿದ್ದಾರೆ. ಸೂರ್ಯ ಮತ್ತು ಜ್ಯೋತಿಕಾ ದಂಪತಿ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಒಟ್ಟಲ್ಲಿ 'ರೆಟ್ರೋ' ಮೂಲಕ ವಿಭಿನ್ನವಾಗಿರೋ ಕಥೆಯನ್ನೇ ಹೇಳಲು ಹೊರಟಿದ್ದಾರೆ.

ಟೀಮ್ ಇಂಡಿಯಾ ಪ್ಲೇಯಿಂಗ್ 11ನಲ್ಲಿ ಒಂದು ಬದಲಾವಣೆ ಖಚಿತ

ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಯ ಮೊದಲ ಪಂದ್ಯದಲ್ಲಿ ಟೀಮ್ ಇಂಡಿಯಾ 295 ರನ್‌ಗಳಿಂದ ಭರ್ಜರಿ ಜಯ ಸಾಧಿಸಿ ಶುಭಾರಂಭ ಮಾಡಿತ್ತು. ಆದರೆ ದ್ವಿತೀಯ ಪಂದ್ಯದಲ್ಲಿ ಆಸ್ಟ್ರೇಲಿಯಾ 10 ವಿಕೆಟ್‌ಗಳ ಗೆಲುವು ದಾಖಲಿಸಿ ಸಮಬಲ ಸಾಧಿಸಿದ್ದರು.

ಇನ್ನು ಮೂರನೇ ಪಂದ್ಯವು ಡ್ರಾನಲ್ಲಿ ಅಂತ್ಯ ಕಂಡಿದೆ. ಇದೀಗ ಎರಡೂ ತಂಡಗಳು ನಾಲ್ಕನೇ ಪಂದ್ಯದಲ್ಲಿ ಕಣಕ್ಕಿಳಿಯಲು ಸಜ್ಜಾಗಿದ್ದಾರೆ.

ಭಾರತ ಮತ್ತು ಆಸ್ಟ್ರೇಲಿಯಾ ನಡುವಣ 5 ಪಂದ್ಯಗಳ ಟೆಸ್ಟ್ ಸರಣಿಯ 4ನೇ ಮ್ಯಾಚ್ ಗುರುವಾರದಿಂದ (ಡಿ.26) ಶುರುವಾಗಲಿದೆ. ಮೆಲ್ಬೋರ್ನ್ ಕ್ರಿಕೆಟ್ ಗ್ರೌಂಡ್‌ನಲ್ಲಿ ನಡೆಯಲಿರುವ ಈ ಪಂದ್ಯಕ್ಕಾಗಿ ಟೀಮ್ ಇಂಡಿಯಾ ಪ್ಲೇಯಿಂಗ್ ಇಲೆವೆನ್‌ನಲ್ಲಿ ಮಹತ್ವದ ಬದಲಾವಣೆ ಮಾಡಿಕೊಳ್ಳುವ ಸಾಧ್ಯತೆಯಿದೆ.

ಏಕೆಂದರೆ ಮೊದಲ ಮೂರು ಮ್ಯಾಚ್‌ಗಳಲ್ಲಿ ಜಸ್‌ಪ್ರೀತ್ ಬುಮ್ರಾ ಅವರನ್ನು ಹೊರತುಪಡಿಸಿ ಟೀಮ್ ಇಂಡಿಯಾ ವೇಗಿಗಳು ಪರಿಣಾಮಕಾರಿಯಾಗಿಲ್ಲ. ಹೀಗಾಗಿ ಮೆಲ್ಬೋರ್ನ್‌ನಲ್ಲಿ ಹೆಚ್ಚುವರಿ ಸ್ಪಿನ್ ಆಲ್‌ರೌಂಡರ್‌ನನ್ನು ಕಣಕ್ಕಿಳಿಸುವ ಸಾಧ್ಯತೆಯಿದೆ. ಅದರಂತೆ ಟೀಮ್ ಇಂಡಿಯಾ ಪ್ಲೇಯಿಂಗ್ ಇಲೆವೆನ್‌ನಲ್ಲಿ ಆಲ್‌ರೌಂಡರ್‌ಗಳಾಗಿ ರವೀಂದ್ರ ಜಡೇಜಾ ಹಾಗೂ ವಾಷಿಂಗ್ಟನ್ ಸುಂದರ್ ಕಾಣಿಸಿಕೊಳ್ಳಬಹುದು. ಹಾಗೆಯೇ ವೇಗಿಗಳಾಗಿ ಜಸ್‌ಪ್ರೀತ್ ಬುಮ್ರಾ, ಆಕಾಶ್ ದೀಪ್ ಹಾಗೂ ಮೊಹಮ್ಮದ್ ಸಿರಾಜ್ ಅವರನ್ನು ಮುಂದುವರೆಯಬಹುದು. ಇನ್ನು ಈ ಪಂದ್ಯದಲ್ಲೂ ಆರಂಭಿಕರಾಗಿ ಯಶಸ್ವಿ ಜೈಸ್ವಾಲ್ ಹಾಗೂ ಕೆಎಲ್ ರಾಹುಲ್ ಕಾಣಿಸಿಕೊಳ್ಳಲಿದ್ದಾರೆ. ಮೂರನೇ ಕ್ರಮಾಂಕದಲ್ಲಿ ಶುಭ್‌ಮನ್ ಗಿಲ್ ಕಣಕ್ಕಿಳಿದರೆ, ನಾಲ್ಕನೇ ಕ್ರಮಾಂಕದಲ್ಲಿ ವಿರಾಟ್ ಕೊಹ್ಲಿ ಬ್ಯಾಟ್ ಬೀಸಲಿದ್ದಾರೆ. ಐದನೇ ಸ್ಥಾನದಲ್ಲಿ ರಿಷಭ್ ಪಂತ್ ಆಡಿದರೆ, ಆರನೇ ಕ್ರಮಾಂಕದಲ್ಲಿ ರೋಹಿತ್ ಶರ್ಮಾ ಕಣಕ್ಕಿಳಿಯಲಿದ್ದಾರೆ. ಅದರಂತೆ ಭಾರತ ತಂಡದ ಸಂಭಾವ್ಯ ಪ್ಲೇಯಿಂಗ್ ಇಲೆವೆನ್ ಈ ಕೆಳಗಿನಂತಿರಲಿದೆ. ಯಶಸ್ವಿ ಜೈಸ್ವಾಲ್, ಕೆಎಲ್ ರಾಹುಲ್, ಶುಭ್‌ಮನ್ ಗಿಲ್, ವಿರಾಟ್ ಕೊಹ್ಲಿ, ರಿಷಭ್ ಪಂತ್, ರೋಹಿತ್ ಶರ್ಮಾ, ರವೀಂದ್ರ ಜಡೇಜಾ, ವಾಷಿಂಗ್ಟನ್ ಸುಂದರ್, ಜಸ್‌ಪ್ರೀತ್ ಬುಮ್ರಾ, ಆಕಾಶ್ ದೀಪ್,ಮೊಹಮ್ಮದ್ ಸಿರಾಜ್.

ಮೆಲ್ಬೋರ್ನ್ ಕ್ರಿಕೆಟ್ ಗ್ರೌಂಡ್‌ನಲ್ಲಿ ಪಂದ್ಯ

ಭಾರತ ಟೆಸ್ಟ್ ತಂಡ: ರೋಹಿತ್ ಶರ್ಮಾ (ನಾಯಕ), ಜಸ್‌ಪ್ರೀತ್ ಬುಮ್ರಾ (ಉಪನಾಯಕ), ಯಶಸ್ವಿ ಜೈಸ್ವಾಲ್, ಅಭಿಮನ್ಯು ಈಶ್ವರನ್, ಶುಭ್‌ಮನ್ ಗಿಲ್ , ವಿರಾಟ್ ಕೊಹ್ಲಿ, ಕೆಎಲ್ ರಾಹುಲ್, ರಿಷಭ್ ಪಂತ್ (ವಿಕೆಟ್ ಕೀಪರ್), ಸರ್ಫರಾಝ್ ಖಾನ್, ಧ್ರುವ್ ಜುರೆಲ್ (ವಿಕೆಟ್ ಕೀಪರ್), ರವೀಂದ್ರ ಜಡೇಜಾ , ಮೊಹಮ್ಮದ್ ಸಿರಾಜ್ , ಆಕಾಶ್ ದೀಪ್, ಪ್ರಸಿದ್ಧ್ ಕೃಷ್ಣ, ಹರ್ಷಿತ್ ರಾಣ, ನಿತೀಶ್ ಕುಮಾರ್ ರೆಡ್ಡಿ, ವಾಷಿಂಗ್ಟನ್ ಸುಂದರ್, ದೇವದತ್ ಪಡಿಕ್ಕಲ್, ತನುಷ್ ಕೋಟ್ಯಾನ್.

ನಿರ್ಣಾಯಕ ಪಂದ್ಯ

ಮೆಲ್ಬೋರ್ನ್ ಟೆಸ್ಟ್ ಪಂದ್ಯವು ಉಭಯ ತಂಡಗಳ ಪಾಲಿಗೆ ನಿರ್ಣಾಯಕ. ಏಕೆಂದರೆ ಈ ಸರಣಿಯ ಮೊದಲ ಪಂದ್ಯದಲ್ಲಿ ಟೀಮ್ ಇಂಡಿಯಾ ಗೆದ್ದರೆ, ದ್ವಿತೀಯ ಟೆಸ್ಟ್‌ನಲ್ಲಿ ಆಸ್ಟ್ರೇಲಿಯಾ ಜಯ ಸಾಧಿಸಿದೆ. ಇನ್ನು ಮೂರನೇ ಪಂದ್ಯವು ಡ್ರಾನಲ್ಲಿ ಅಂತ್ಯ ಕಂಡಿದೆ. ಇದೀಗ ನಾಲ್ಕನೇ ಪಂದ್ಯದಲ್ಲಿ ಗೆಲ್ಲುವ ತಂಡ ಸರಣಿ ಸೋಲನ್ನು ತಪ್ಪಿಸಿಕೊಳ್ಳಲಿದೆ. ಅಂದರೆ ನಾಲ್ಕನೇ ಪಂದ್ಯದಲ್ಲಿ ಗೆದ್ದ ತಂಡ ಐದನೇ ಪಂದ್ಯದ ಮೂಲಕ ಸರಣಿ ಜಯಿಸಬಹುದು ಅಥವಾ ಸರಣಿಯನ್ನು ಡ್ರಾನಲ್ಲಿ ಕೊನೆಗೊಳಿಸಬಹುದು. ಹೀಗಾಗಿ ಉಭಯ ತಂಡಗಳ ಪಾಲಿಗೆ ಮೆಲ್ಬೋರ್ನ್ ಟೆಸ್ಟ್ ಮ್ಯಾಚ್ ನಿರ್ಣಾಯಕವಾಗಿ ಮಾರ್ಪಟ್ಟಿದೆ.

ಕೊಹ್ಲಿ ಮುಂದಿದೆ ಮಾಸ್ಟರ್ ಬ್ಲಾಸ್ಟರ್ ದಾಖಲೆ

ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಯ 4ನೇ ಪಂದ್ಯವು ಡಿಸೆಂಬರ್ 26 ರಿಂದ ಶುರುವಾಗಲಿದೆ. ಈ ಸರಣಿಯ ಮೂಲಕ ವಿರಾಟ್ ಕೊಹ್ಲಿ ಹೊಸ ದಾಖಲೆ ಬರೆಯಬಹುದು. ಇದಕ್ಕಾಗಿ ಬೇಕಿರುವುದು ಕೇವಲ 134 ರನ್‌ಗಳು ಮಾತ್ರ. ಅಂದರೆ ಎರಡು ಇನಿಂಗ್ಸ್‌ಗಳಲ್ಲಿ ಕೊಹ್ಲಿ ಬ್ಯಾಟ್‌ನಿಂದ ಭರ್ಜರಿ ಶತಕ ಮೂಡಿಬಂದರೆ ಹೊಸ ದಾಖಲೆ ನಿರ್ಮಾಣವಾಗಲಿದೆ. ಭಾರತ ಮತ್ತು ಆಸ್ಟ್ರೇಲಿಯಾ ನಡುವಣ 4ನೇ ಟೆಸ್ಟ್ ಪಂದ್ಯವು ಗುರುವಾರದಿಂದ ಶುರುವಾಗಲಿದೆ. ಮೆಲ್ಬೋರ್ನ್‌ನಲ್ಲಿ ಎಂಸಿಜಿ ಮೈದಾನದಲ್ಲಿ ನಡೆಯಲಿರುವ ಈ ಪಂದ್ಯದ ಮೂಲಕ ವಿರಾಟ್ ಕೊಹ